# ಜಿಲ್ಲಾಧಿಕಾರಿಯವರ ಕಾರ್ಯಾಲಯ, ಬೆಂಗಳೂರು ಗ್ರಾಮಾಮತರ ಜಿಲ್ಲೆ, ಬೆಂಗಳೂರು

ಸಂಖ್ಯೆ:ಮಾ.ಹ.ಕಾ.ಸಿ.ಆರ್:50/2008-09 ದಿನಾಂಕ: 22-05.2009

**ವಿಷಯ: ಕರ್ನಾಟಕ ಮಾಹಿತಿ ಹಕ್ಕು ಕಾಯ್ದೆ 2005ರ ಕಲಂ.4(1) (ಬಿ) ಅನುಸಾರ ಕಂದಾಯ ಇಲಾಖೆಗೆ ಸಂಬಂಧಿಸಿದಂತೆ ಕಛೇರಿಯ ಮಾಹಿತಿಯನ್ನು ಪ್ರಕಟಿಸುವ ಬಗ್ಗೆ.**

ಕರ್ನಾಟಕ ಸರ್ಕಾರವು ಜಾರಿಗೆ ತಂದಿರುವ 2005ರ ಮಾಹಿತಿ ಹಕ್ಕು ಕಾಯ್ದೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ಸಂಬಂಧ ಮಾಹಿತಿ ಹಕ್ಕು ಅಧಿನಿಯಮ 2005ರ ಕಲಂ 5(1) 5(2) ಮತ್ತು 19(1)ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಕಂದಾಯ ಇಲಾಖೆಗೆ ಸೇರಿದ ಜಿಲ್ಲಾ ಘಟಕದ ಕಛೇರಿಗಳ ವ್ಯಾಪ್ತಿಯ ಮಾಹಿತಿಯನ್ನು ಕೋರುವ ವ್ಯಕ್ತಿಗಳಿಗೆ ಅಂತಹ ಮಾಹಿತಿಯನ್ನು ಮೇಲಿನ ಕಾಯ್ದೆಯನ್ವಯ ಒದಗಿಸಲು, ಮಾಹಿತಿ ಕೋರುವ ಅರ್ಜಿಗಳು ಅಥವಾ ಮೇಲ್ಮನವಿಗಳನ್ನು ಸ್ವೀಕರಿಸಲು ಅನುಕ್ರಮವಾಗಿ "**ಸಾರ್ವಜನಿಕ ಮಾಹಿತಿ ಅಧಿಕಾರಿ**" ಮತ್ತು "**ಸಹಾಯಕ ಮಾಹಿತಿ ಅಧಿಕಾರಿ**" ಹಾಗೂ "**ಮೇಲ್ಮನವಿ ಪ್ರಾಧಿಕಾರಿಗಳನ್ನಾಗಿ**" ಈ ಕೆಳಕಾಣಿಸಿದಂತೆ ಸರ್ಕಾರದಿಂದ ನೇಮಿಸಲಾಗಿದೆ.

| ಕ್ರ.ಸಂ. | ಕಛೇರಿ ಹೆಸರು | ವಿಷಯ | ಕರ್ನಾಟಕ ಮಾಹಿತಿ ಹಕ್ಕು ಕಾಯಿದೆ 2005ರ ಕಲಂ 5(1)ರ ಪ್ರಕಾರ ಸಾರ್ವಜನಿಕ ಮಾಹಿತಿ ಅಧಿಕಾರಿ | ಕರ್ನಾಟಕ ಮಾಹಿತಿ ಹಕ್ಕು ಕಾಯಿದೆ 2005ರ ಕಲಂ 5(2)ರ ಪ್ರಕಾರ ಸಾಹಾಯಕ ಮಾಹಿತಿ ಅಧಿಕಾರಿ | ಕರ್ನಾಟಕ ಮಾಹಿತಿ ಹಕ್ಕು ಕಾಯಿದೆ 2005ರ ಕಲಂ 19(1)ರ ಪ್ರಕಾರ ಮೇಲ್ಮನವಿ ಅಧಿಕಾರಿ |
|---|---|---|---|---|---|
| 1 | ಜಿಲ್ಲಾದಿಕಾರಿ ಹಾಗೂ ಜಿಲ್ಲಾದಂಡಾಧಿಕಾರಿಯವರ ಕಛೇರಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು. | ಕಂದಾಯ | ಅಪರ ಜಿಲ್ಲಾದಿಕಾರಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು | ಕಛೇರಿ ಸಹಾಯಕರು, ಜಿಲ್ಲಾದಿಕಾರಿಯವರ ಕಛೇರಿ, ಬೆಂ.ಗ್ರಾಮಾಂತರ ಜಿಲ್ಲೆ, ಬೆಂಗಳೂರು | ಜಿಲ್ಲಾದಿಕಾರಿ ಹಾಗೂ ಜಿಲ್ಲಾದಂಡಾಧಿಕಾರಿ ಬೆಂಗಳೂರುಗ್ರಾಮಾಂತರ ಜಿಲ್ಲೆ ಬೆಂಗಳೂರು |
| 2 | | ಆಹಾರ | ಉಪ ನಿರ್ದೇಶಕರು ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಬೆಂಗಳೂರು ಗ್ರಾಮಾಂತರ ಜಿಲ್ಲೆ | ಸಹಾಯಕ ನಿರ್ದೇಶಕರು, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಬೆಂಗಳೂರು ಗ್ರಾಮಾಂತರ ಜಿಲ್ಲೆ | ಜಿಲ್ಲಾದಿಕಾರಿ ಹಾಗೂ ಜಿಲ್ಲಾದಂಡಾಧಿಕಾರಿ ಬೆಂಗಳೂರುಗ್ರಾಮಾಂತರ ಜಿಲ್ಲೆ ಬೆಂಗಳೂರು |
| 3 | | ನಗರಾಭಿವೃದ್ದಿ ಕೋಶ | ಯೋಜನಾ ನಿರ್ದೇಶಕರು ನಗರಾಭಿವೃದ್ಧಕೋಶ ಬೆಂಗಳೂರು ಗ್ರಾಮಾಂತರ ಜಿಲ್ಲೆ | ಮುನ್ಸಿಪಲ್ ತಹಶೀಲ್ದಾರ್, ಯೋಜನಾ ನಿರ್ದೇಶಕರ ಕಛೇರಿ ನಗರಾಭಿವೃದ್ಧಕೋಶ ಬೆಂಗಳೂರು ಗ್ರಾಮಾಂತರ ಜಿಲ್ಲೆ | ಜಿಲ್ಲಾದಿಕಾರಿ ಹಾಗೂ ಜಿಲ್ಲಾದಂಡಾಧಿಕಾರಿ ಬೆಂಗಳೂರುಗ್ರಾಮಾಂತರ ಜಿಲ್ಲೆ ಬೆಂಗಳೂರು |

| | | | | | |
|---|---|---|---|---|---|
| 4 | | ಭೂ ಮಾಪನ ಶಾಖೆ | ಭೂ ದಾಖಲೆಗಳ ಉಪ ನಿರ್ದೇಶಕರು ಮತ್ತು ಪದನಿಮಿತ ತಾಂತ್ರಿಕ ಸಹಾಯಕರು, ಜಿಲ್ಲಾಧಿಕಾರಿಯವರ ಕಛೇರಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ | ಭೂ ದಾಖಲೆಗಳ ಸಹಾಯಕ ನಿರ್ದೇಶಕರು, ಉಪ ನಿರ್ದೇಶಕರು ಮತ್ತು ಪದನಿಮಿತ ತಾಂತ್ರಿಕ ಸಹಾಯಕರ ಕಛೇರಿ, ಜಿಲ್ಲಾಧಿಕಾರಿಯವರ ಕಛೇರಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ | ಜಿಲ್ಲಾದಿಕಾರಿ ಹಾಗೂ ಜಿಲ್ಲಾದಂಡಾಧಿಕಾರಿ ಬೆಂಗಳೂರುಗ್ರಾಮಾಂತರ ಜಿಲ್ಲೆ ಬೆಂಗಳೂರು |
| 5 | | ಮುಜರಾಯಿ | ಅಪರ ಜಿಲ್ಲಾದಿಕಾರಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು | ಮುಜರಾಯಿ ತಹಶೀಲ್ದಾರ್, ಜಿಲ್ಲಾಧಿಕಾರಿಯವರ ಕಛೇರಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ. | ಜಿಲ್ಲಾದಿಕಾರಿ ಹಾಗೂ ಜಿಲ್ಲಾದಂಡಾಧಿಕಾರಿ ಬೆಂಗಳೂರುಗ್ರಾಮಾಂತರ ಜಿಲ್ಲೆ ಬೆಂಗಳೂರು |

ಕರ್ನಾಟಕ ಸರ್ಕಾರ ಜಾರಿಗೆ ತಂದಿರುವ 2005ರ ಮಾಹಿತಿ ಹಕ್ಕು ಕಾಯಿದೆ ಇದಾಗಿದ್ದು, ಸದರಿ ಕಾಯ್ದೆಯ ಕಲಂ 4(1)ರಡಿ ಒಟ್ಟು 17 ವಿವಿಧ ಅಂಶಗಳನ್ನೊಳಗೊಂಡ ಒಂದು ಕೈಪಿಡಿ ತಯಾರಿಸಬೇಕಾಗಿದ್ದು, ಈ ಪ್ರಾಧಿಕಾರದ ವ್ಯಾಪ್ತಿಗೆ ಬರುವ ಘಟಕಗಳ ಕಾರ್ಯಾಚಟುವಟಿಕೆಗಳ ಮಾಹಿತಿ ಈ ಕೆಳಕಾಣಿಸಿದಂತಿದೆ.

**(ಅ) ಜಿಲ್ಲಾ ಘಟಕದ ಸಂರಚನೆ ಪ್ರಕಾರ್ಯಗಳು ಮತ್ತು ಕರ್ತವ್ಯವದ ವಿವರಗಳು:-**

ರಾಮನಗರ ನೂತನ ಜಿಲ್ಲೆ ಅಸ್ಥಿತ್ವಕ್ಕೆ ಬರುವ ಪೂರ್ವದಲ್ಲಿದ್ದ ಬೆಂಗಳೂರು ಗ್ರಾಮಾಂತರ ಜಿಲ್ಲೆ, ಕ್ರಮವಾಗಿ ರಾಮನಗರ ಜಿಲ್ಲೆ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಎಂದು ಕಾರ್ಯರೂಪಕ್ಕೆ ಬಂದಿದ್ದು, ಸರ್ಕಾರದ ಅಧಿಸೂಚನೆ ಸಂಖ್ಯೆ:ಆರ್.ಡಿ.27 ಭೂದಾಪು 2006(ಭಾಗ-3) ದಿನಾಂಕ: 03/08/2007 ರಂತೆ ಬೆಂಗಳೂರು ಗ್ರಾಮಾಂತರ ಜಿಲ್ಲೆ ಅಸ್ಥಿತ್ವಕ್ಕೆ ಬಂದಿರುತ್ತದೆ.

**(ಆ) ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಸಾಮಾನ್ಯ ಮಾಹಿತಿ:-**

| | | | | | |
|---|---|---|---|---|---|
| 1 | ಭೌಗೋಳಿಕ ವಿಸ್ತೀರ್ಣ | 2259 ಚ.ಕಿ.ಮೀ | | 2) ವ್ಯವಸಾಯ ಕೂಲಿಗಾರರು | 84799 |
| 2 | ಒಟ್ಟು ಜನಸಂಖ್ಯೆ; 2001ರ ಗಣತಿ | 850968 | | 4) ಇತರೆ ಸಹಕಾರಿ ಬ್ಯಾಂಕುಗಳು | - |
| | 1)ಗ್ರಾಮೀಣ ಜನಸಂಖ್ಯೆ | 658634 | | 5)ಪಿ.ಎಲ್.ಡಿ.ಬ್ಯಾಂಕ್ | 04 |
| | 2)ನಗರ ಪ್ರದೇಶದ ಜನಸಂಖ್ಯೆ | 192334 | 7. | ರಸ್ತೆ (ಕಿ.ಮೀಗಳಲ್ಲಿ) | |
| | 3)ಗಂಡಸರು | 437489 | | 1) ರಾಷ್ಟ್ರೀಯ ಹೆದ್ದಾರಿ | 203ಕಿ.ಮೀ. |
| | 4)ಹೆಂಗಸರು | 413479 | | 2) ರಾಜ್ಯ ಹೆದ್ದಾರಿ | 190ಕಿ.ಮೀ |
| | 5)ಪರಿಶಿಷ್ಟ ಜಾತಿ | 186602 | | 3) ಜಿಲ್ಲಾ ಮುಖ್ಯ ರಸ್ತೆ | 406.6ಕಿ.ಮೀ |
| | 6)ಪರಿಶಿಷ್ಟ ಪಂಗಡ | 43670 | 8. | ಅಂಗನವಾಡಿ ಕೇಂದ್ರಗಳು | 1004 |
| | 7)ಲಿಂಗ ಪ್ರಮಾಣ | 945 | 9. | 1)ವೃದ್ದಾಪ್ಯ ವೇತನ ಪಡೆಯುವವರು | 24651 |
| | 8)ಜನಸಾಂದ್ರತೆ(2001ರ ಜನಗಣತಿ) | 377 ಚ.ಕಿ.ಮೀ | | 2) ಅಂಗವಿಕಲರ ಮಾಸಾಶನ ಪಡೆಯುವವರು | 12885 |
| 3 | 1.ವ್ಯವಸಾಯಗಾರರು | | | 3) ವಿಧವೆ ಪಿಂಚಣಿದಾರರು | 21339 |
| | 1)ವ್ಯವಸಾಯ ಕೂಲಿಕಾರರು | 84799 | 10 | ತಾಲ್ಲೂಕುಗಳು | 04 |
| 4 | 1)ಒಟ್ಟು ಸಾಕ್ಷರತೆ ಪ್ರಮಾಣ | 69.7 | 11 | ಹೋಬಳಿಗಳು | 17 |

| | | | | | |
|---|---|---|---|---|---|
| | 2) ಹೆಂಗಸರ ಸಾಕ್ಷರತೆ ಪ್ರಮಾಣ | 59.8 | 12. | ಜನವಸತಿ ಇರುವ ಗ್ರಾಮಗಳು (2001ರ ಜನಗಣತಿ ಪ್ರಕಾರ) | 951 |
| | 1) ಮಳೆ – ವಾಡಿಕೆ | 824 m.m. | 13. | ಗ್ರಾಮಪಂಚಾಯಿತಿಗಳು | 98 |
| | 2) ಮಳೆ ವಾಸ್ತವಿಕ(2008) | 1081ಎಂಎಂ | | | |
| 6 | 1) ವಾಣಿಜ್ಯ ಬ್ಯಾಂಕುಗಳು | 40 | | | |
| | 2) ಗ್ರಾಮೀಣ ಬ್ಯಾಂಕುಗಳು | 13 | | | |

**(ಇ) ಕಾರ್ಯವಿಧಾನ:-**

ಜಿಲ್ಲಾದಿಕಾರಿಗಳು, ಬೆಂಗಳೂರು ಗ್ರಾಮಾಂತರ ಜಿಲ್ಲೆ ರವರು ಜಿಲ್ಲಾ ಕಚೇರಿಯ ಆಡಳಿತ ಮುಖ್ಯಸ್ಥರಾಗಿದ್ದು, ಜಿಲ್ಲಾ ಘಟಕದ ಆಡಳಿತ ಹಾಗೂ ಕಾನೂನು ಸುವ್ಯವಸ್ಥೆ ಬಗ್ಗೆ ಅಧಿಕಾರವುಳ್ಳವರಾಗಿದ್ದಾರೆ. ಕರ್ನಾಟಕ ಭೂಕಂದಾಯ ಅಧಿನಿಯಮ ಕಲಂ 8ರಂತೆ ಜಿಲ್ಲಾದಿಕಾರಿಯಾಗಿ ಸರ್ಕಾರ ನೇಮಿಸಿದೆ. ಸರ್ಕಾರಕ್ಕೆ ಅಧೀನರಾಗಿದ್ದು ಕರ್ನಾಟಕ ಭೂಕಂದಾಯ ಅಧಿನಿಯಮದಲ್ಲಿ ನಿಯಮಿತವಾದ ಎಲ್ಲಾ ಅಧಿಕಾರಗಳನ್ನು ಮತ್ತು ಕರ್ತವ್ಯಗಳನ್ನು ನಿರ್ವಹಿಸಲು ಜಿಲ್ಲಾಧಿಕಾರಿಯವರು ಜಿಲ್ಲಾ ಆಡಳಿತಾದಿಕಾರಿಗಳಾಗಿಯೂ ಸಹ ಕಾರ್ಯನಿರ್ವಹಿಸುತ್ತಾರೆ.

**ಕಂದಾಯ ಇಲಾಖೆಯು ಕೆಳಕಾಣಿಸಿದ ಸಾಮಾನ್ಯ ಕಾರ್ಯಗಳನ್ನು ಪ್ರಮುಖವಾಗಿ ನಿರ್ವಹಿಸುತ್ತದೆ:**

1. ಕಾರ್ಯಕಾರಿ ದಂಡಾಧಿಕಾರತ್ವದ ಮೂಲಕ ಕಾನೂನು ಮತ್ತು ಸುವ್ಯವಸ್ಥೆಯನ್ನು ಕಾಪಾಡುವುದು.
2. ಸರ್ಕಾರಕ್ಕೆ ಸಂಬಂಧಿಸಿದಂತೆ ಎಲ್ಲಾ ರೀತಿಯ ಸಾರ್ವಜನಿಕ ದೂರು ನಿರ್ವಹಣೆ.
3. ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಸಾರ್ವಜನಿಕ ವಿತರಣಾ ವ್ಯವಸ್ಥೆಯ ನಿರ್ವಹಣೆ.
4. ಎಲ್ಲಾ ರೀತಿಯ ಚುನಾವಣೆಗಳನ್ನು ನಡೆಸುವುದು.
5. ಎಲ್ಲಾ ರೀತಿಯ ಗಣತಿ ಕಾರ್ಯವನ್ನು ನಡೆಸುವುದು (ಜನಗಣತಿ, ಜಾನುವಾರು ಗಣತಿ, ಕೃಷಿ ಗಣತಿ).
6. ಎಲ್ಲಾ ಔಪಚಾರಿಕ ಸಮಾರಂಭಗಳಲ್ಲಿ ರಾಜ್ಯದ ಪರವಾಗಿ ಶಿಷ್ಟಾಚಾರ ಕಾರ್ಯನಿರ್ವಹಿಸುವುದು.
7. ಪ್ರಕೃತಿ ವಿಕೋಪ ನಿರ್ವಹಣೆ, ನೈಸರ್ಗಿಕ ಮತ್ತು ಮಾನವ ನಿರ್ಮಿತ ವಿಕೋಪಗಳಿಂದ ಬಾಧಿತರಾದವರಿಗೆ ಪರಿಹಾರ, ಪುನರ್ವಸತಿ ಮತ್ತು ಪುನರ್ ನಿರ್ಮಾಣ ಕಾರ್ಯನಿರ್ವಹಣೆ.
8. ಯೋಜನಾ ಸಂತ್ರಸ್ಥ ಮತ್ತು ಬಾಧಿತ ಕುಟುಂಬಗಳಿಗೆ ಪುನರ್ ವಸತಿ ಮತ್ತು ಪುನರ್ ನಿರ್ಮಾಣ ನಿರ್ವಹಣೆ.
9. ವೃದ್ದಾಪ್ಯ ವೇತನ ಮತ್ತಿತರೆ ಸಾಮಾಜಿಕ ಸುರಕ್ಷತೆಯನ್ನು ನಿರ್ವಹಿಸುವುದು.
10. ಅಲ್ಪಸಂಖ್ಯಾತರ ರಕ್ಷಣೆ.
11. ಜನನ,ಮರಣ ಮತ್ತು ವಿವಾಹಗಳ ನೋಂದಣಿ.
12. ಆದಾಯ, ಜಾತಿ,ಧರ್ಮ, ವಿವಾಹ, ರಾಷ್ಟ್ರೀಯತೆ ಮತ್ತು ಅಲ್ಪ ಅಂಖ್ಯಾತರ ಸ್ಥಾನಮಾನಗಳ ಬಗ್ಗೆ ಪ್ರಮಾಣ ಪತ್ರ ನೀಡುವುದು.
13. ಪೌರಾಡಳಿತ.
14. ಗುಪ್ತನಿಧಿ.
15. ಮೋಟಾರು ವಾಹನಗಳ ಅಧಿನಿಯಮದಡಿಯಲ್ಲಿ ಸಾರಿಗೆ ವಿಷಯಗಳ ನಿರ್ವಹಣೆ (RTA's ಮಾತ್ರ).
16. ಎಲ್ಲಾ ನ್ಯಾಯಾಲಯಗಳಲ್ಲಿ ಸರ್ಕಾರಿ ವ್ಯಾಜ್ಯ ನಿರ್ವಹಣೆ.
17. ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ವಿವಿಧ ಯೋಜನೆಗಳ ಮತ್ತು ಕಾರ್ಯಕ್ರಮಗಳ ಸಮನ್ವಯ ಹಾಗೂ ಪರಿವೀಕ್ಷಣಾ ಕಾರ್ಯನಿರ್ವಹಣೆ.

**(ಈ) ಕಂದಾಯ ಆಡಳಿತ:–**

ಕಂದಾಯ ಮತ್ತಿತರ ಕಾನೂನುಗಳಲ್ಲಿ ಸಾಂಪ್ರದಾಯಿಕವಾಗಿ ಕಂದಾಯ ಇಲಾಖೆಗೆ ವಹಿಸಲಾಗಿರುವ ಕಾರ್ಯಗಳು ಕೆಳಕಂಡಂತಿವೆ:–

1. ರಾಜ್ಯದಲ್ಲಿನ ಭೂದಾಖಲೆಗಳ ನಿರ್ವಹಣೆ ಮತ್ತು ಎಲ್ಲಾ ಜಮೀನುಗಳ ಭೂಮಾಪನ.
2. ಬಾಕಿ ವಸೂಲಾತಿಯಂತಹ ಭೂಕಂದಾಯ ನೀರು ತೆರಿಗೆ, ಮತ್ತಿತರ ಸರ್ಕಾರಿ ಬಾಕಿ, ತೆರಿಗೆಗಳ ವಸೂಲಾತಿ.
3. ಗ್ರಾಮಠಾಣ, ಗೋಮಾಳ, ಗುಂಡುತೋಪು, ಕೆರೆ ಅಂಗಳ, ಉಪವನಗಳು ಇತ್ಯಾದಿ ಸಾಮುದಾಯಿಕ ಜಮೀನುಗಳು ಸೇರಿದಂತೆ ಎಲ್ಲಾ ಸರ್ಕಾರಿ ಜಮೀನುಗಳ ನಿರ್ವಹಣೆ ಮತ್ತು ಪರಿಸರ ಸಂರಕ್ಷಣೆ.
4. ಭೂ ಮಂಜೂರಾತಿ.
5. ಭೂ ಸುಧಾರಣೆ ಮತ್ತು ಗೇಣಿದಾರಿಕೆಯ ನಿಬಂಧನೆಗಳ ನಿರ್ವಹಣೆ.
6. ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದವರ ಜಮೀನು ರಕ್ಷಣೆ.
7. ಭೂಪರಿವರ್ತನೆ ಮತ್ತು ಸರಿಯಾದ ರೀತಿಯಲ್ಲಿ ಬಡಾವಣೆಗಳ ಅಭಿವೃದ್ಧಿ.
8. ಸ್ಥಿರಾಸ್ತಿಗಳ ಮೇಲಿನ ಬಾಡಿಗೆ ನಿಯಂತ್ರಣ.
9. ಸಾರ್ವಜನಿಕ ಉದ್ದೇಶಕ್ಕಾಗಿ ಖಾಸಗಿ ಆಸ್ತಿಗಳನ್ನು ಸ್ವಾಧೀನಪಡಿಸುವುದು.
10. ಸ್ಥಿರಾಸ್ಥಿಗಳ ವ್ಯವಹಾರ, ಉಯಿಲು, ಒಪ್ಪಂದ ಇತ್ಯಾದಿಗಳ ನೋಂದಣಿ ಮತ್ತು ಮುದ್ರಾಂಕ ಶುಲ್ಕ ವಸೂಲಾತಿ.

**(ಉ) ಕಾನೂನು ಆಡಳಿತ:**

ಜಿಲ್ಲಾಧಿಕಾರಿಗಳು ಹೊಂದಿರುವ ಅಧಿಕಾರದ ಕೇಂದ್ರಮಟ್ಟದ ಮುಖ್ಯ ಕಾಯ್ದೆಗಳ ಮತ್ತು ಕಾನೂನುಗಳ ವಿವರ:–

| |
|---|
| 1. ಇಂಡಿಯನ್ ಎಕ್ಸ್ ಪ್ಲೋಸಿವ್ ಆಕ್ಟ್ 1940. |
| 2. ಇಂಡಿಯನ್ ಆರ್ಮ್ಸ್ ಆಕ್ಟ್ 1955. |
| 3. ಇಂಡಿಯನ್ ಪೆಟ್ರೋಲಿಯಂ ಆಕ್ಟ್. |
| 4. ಕರ್ನಾಟಕ ಸಿನಿಮಾ (ರೆಗ್ಯುಲೇಷನ್) ಆಕ್ಟ್, 1964. |
| 5. ಕರ್ನಾಟಕ ಎಕ್ಸಿಬಿಷನ್ ಆಫ್ ಫಿಲಮ್ಸ್ ಅನ್ ಟಿ.ಸ್ಕ್ರೀನ್ ಥ್ರೂ ವಿ.ಸಿ.ಆರ್.(ರೆಗ್ಯುಲೇಷನ್) ಆಕ್ಟ್,1984. |
| 6. ಕರ್ನಾಟಕ ಇರಿಗೇಷನ್ ಆಕ್ಟ್, 1965. |
| 7. ಕರ್ನಾಟಕ ರೆಂಟ್ ಕಂಟ್ರೋಲ್ ಆಕ್ಟ್, 1961. |
| 8. ಕರ್ನಾಟಕ ಲ್ಯಾಂಡ್ ರಿಫಾರ್ಮ್ಸ್ ಆಕ್ಟ್, 1961. |
| 9. ಕರ್ನಾಟಕ ಲ್ಯಾಂಡ್ ಗ್ರಾಂಟ್ಸ್ ಆಕ್ಟ್, 1969. |
| 10. ಕರ್ನಾಟಕ ಮುನ್ಸಿಪಾಲಿಟಿ ಆಕ್ಟ್, 1964. |
| 11. ನ್ಯಾಷನಲ್ ಡಿಜಾಸ್ಟರ್ ಮ್ಯಾನೇಜ್‌ಮೆಂಟ್ ಆಥಾರಿಟಿ ಆಕ್ಟ್. |
| 12. ಕರ್ನಾಟಕ ಇನಾಮ್ಸ್ ಅಂಡ್ ಸರ್ಟೈನ್ ಲ್ಯಾಂಡ್ಸ ಅಬಾಲಿಷನ್ ಆಕ್ಟ್, (1954,1955,1977) |
| 13. ಕರ್ನಾಟಕ ಎಸ್ಸಿ/ ಎಸ್ಟಿ & ಒ.ಬಿ.ಸಿ. (ಅಪಾಯಿಂಟ್ ಮೆಂಟ್, ರಿಜರ್ ವೇಷನ್ ಆಕ್ಟ್) ಅಮೆಂಡಮೆಂಟ್ ಆಕ್ಟ್ 1993. |
| 14. ಕರ್ನಾಟಕ ಲ್ಯಾಂಡ್ ಅಕ್ವಿಜಷನ್ ಆಕ್ಟ್ XVIII ಆಫ್ 1993. |
| 15. ಕರ್ನಾಟಕ ಸಿವಿಲ್ ಸರ್ವೀಸ್ (ಸಿಸಿ & ಎ) ರೂಲ್ಸ್ 1957. |
| 16. ಕರ್ನಾಟಕ ಹಿಂದೂ ರಿಲಿಜಿಯಸ್ ಇನ್ಸ್ ಸ್ಟಿಟ್ಯೂಷನ್ ಅಂಡ್ ಎಂಡೋಮೆಂಟ್ ಆಕ್ಟ್ 1957. |
| 17. ಕರ್ನಾಟಕ ಟ್ರಜರ್ ಟ್ರೋವ್ ಆಕ್ಟ್, 1962. |
| 18. ಕರ್ನಾಟಕ ಸ್ಟಾಂಪ್ಸ್ ಆಕ್ಟ್, 1957. |
| 19. ಕರ್ನಾಟಕ ಜಡ್ ಪಿ.ಟಿ.ಪಿ & ವಿ.ಪಿ ಆಕ್ಟ್ 1993. |

| | |
|---|---|
| 20. ಕರ್ನಾಟಕ ಅಗ್ರಿಕಲ್ಚರ್ ಕ್ರೆಡಿಟ್ ಅಪರೇಷನ್ಸ್ & ಮಿಸಲೇನಿಯಸ್ ಪ್ರಾವಿಜನ್ ಆಕ್ಟ್ 1974. |
| 21. ಮೋಟಾರ್ ವೆಹಿಕಲ್ಸ್ ಆಕ್ಟ್ (ಆರ್.ಟಿ.ಎ. ಮ್ಯಾಟರ್ಸ್). |
| 22. ರಿಜಿಸ್ಟ್ರೇಷನ್ ಆಕ್ಟ್. |
| 23. ರಿಜಿಸ್ಟ್ರೇಷನ್ ಅಫ್ ಸೊಸೈಟೀಸ್ ಆಕ್ಟ್. |
| 24. ಕರ್ನಾಟಕ ಅರ್ಬನ್ ಡೆವಲಪ್‌ಮೆಂಟ್ ಅಥಾರಿಟಿ ಆಕ್ಟ್. |
| 25. ಕ್ರಿಮಿನಲ್ ಪ್ರೊಸೀಜರ್ ಕೋಡ್. |
| 26. ಕರ್ನಾಟಕ ಷೆಡ್ಯೂಲ್ ಕ್ಯಾಸ್ಟ್ ಅಂಡ್ ಷೆಡ್ಯೂಲ್ಡ್ ಟ್ರೈಬ್ ಆಕ್ಟ್ 1978. |
| 27. ಇಂಡಿಯನ್ ಪಾರ್ಟ್‌ನರ್ ಆಕ್ಟ್ 1932. |

**(ಊ) ನಾಗರೀಕ ಸನ್ನದ್ದು:–**

ಸಾರ್ವಜನಿಕ ಅನುಕೂಲಕ್ಕಾಗಿ ಕಂದಾಯ ಇಲಾಖೆಯು ವಿವಿಧ ಸೇವೆಗಳನ್ನು ಒದಗಿಸುತ್ತದೆ. ಸದರಿ ಸೇವೆಗಳ ಸೌಲಭ್ಯವನ್ನು ಜನಸಾಮಾನ್ಯರಿಗೆ ನೀಡುವ ದೃಷ್ಟಿಯಲ್ಲಿ ಕಛೇರಿಯು ನಾಗರೀಕ ಸನ್ನದ್ದು, ಮುಖ್ಯವಾಗಿದ್ದು, ಸನ್ನದ್ದಿನಲ್ಲಿ ಸಾರ್ವಜನಿಕರು ಯಾವ ಯಾವ ಸೇವೆ, ಮಾಹಿತಿ: ದಾಖಲೆಗಳನ್ನು ಪಡೆಯಬಹುದು: ಪಡೆದುಕೊಳ್ಳುವ ಕಾಲಾವಕಾಶದ ಬಗ್ಗೆ ಮಾಹಿತಿಯನ್ನು ಒದಗಿಸುವಲ್ಲಿ ಮಾರ್ಗದರ್ಶಿಯಾಗಿದೆ.

1. ಬೇಬಾಕಿ ಪ್ರಮಾಣ ಪತರ (ಭೂ ಕಂದಾಯ, ನೀರು, ತೆರಿಗೆ).
2. ಜಾತಿ/ ಆದಾಯ ಪತ್ರ.
3. ನೆಲಸಿಗರ ಪ್ರಮಾಣ ಪತ್ರ.
4. ಜನಸಂಖ್ಯಾ ಪ್ರಮಾಣ ಪತ್ರ.
5. ರಾಷ್ಟ್ರೀಯತೆ ದೃಢೀಕರಣ ಪತ್ರ.
6. ಕೃಷಿ ಹೊಂದಿರುವ ಪ್ರಮಾಣ ಪತ್ರ.
7. ಕೃಷಿ ಕಾರ್ಮಿಕ ಪ್ರಮಾಣ ಪತ್ರ.
8. ಹೆಚ್ಚುವರಿ ಭೂರಹಿತ ಪ್ರಮಾಣ ಪತ್ರ.
9. ಭೂಮೌಲ್ಯ ದೃಢೀಕರಣ ಪತ್ರ.
10. ಗ್ರಾಮೀಣ ವಲಸಿಗರ ದೃಢೀಕರಣ ಪತ್ರ.
11. ಖಾತೆ: ಹಕ್ಕು ಬದಲಾವಣೆ ಪತ್ರ.
12. 1999–2000ಕ್ಕಿಂತ ಮುಂಚಿನ ಹಕ್ಕು ದಾಖಲೆಗಳು.
13. ಹಕ್ಕು ಬದಲಾವಣೆ ಅಂಗೀಕಾರ.
14. ವಿಭಜನೆ.
15. ವಾರಸುದಾರರ ಖಾತೆ ಬದಲಾವಣೆ.
16. ಮಂಜೂರಾದ ಜಮೀನು ನೋಂದಾಯಿಸಲು ನಿರಾಕ್ಷೇಪಣಾ ಪತ್ರ.
17. ಭೂಕಂದಾಯ ಕಾಯಿದೆ ಕಲಂ 103 ಮತ್ತು 104ರ ಅಡಿ ಸಾರ್ವಜನಿಕ ರಸ್ತೆ ಇತ್ಯಾದಿಗಳನ್ನು ಘೋಷಿಸುವುದು.
18. ಭೂಕಂದಾಯ ಕಾಯಿದೆ ಕಲಂ 141ರಡಿಯಲ್ಲಿ ಅರ್ಬಿಟ್ರೇಷನ್ ಗಡಿ ವಿವಾದ ಇತ್ಯರ್ಥ.
19. ನ್ಯಾಯಾಲಯದ ಆದೇಶದ ಪ್ರತಿ.
20. ಭೂ ಪರಿವರ್ತನೆ.
21. ವೃದ್ದಾಪ್ಯ ವೇತನ.

21A. ಸಂಧ್ಯಾ ಸುರಕ್ಷ ಯೋಜನೆ, ಆಮ್ ಆದ್ಮಿ ಯೋಜನೆ.

22. ಅಂಗವಿಕಲ ವೇತನ.
23. ವಿಧವಾ ವೇತನ.
24. ರಾಷ್ಟ್ರೀಯ ಕುಟುಂಬ ಫಲಾನುಭವಿ ಯೋಜನೆ.
25. ಆಶಾ ಕಿರಣ್.
26. ಪಡಿತರ ಚೀಟಿ.
27. ಬಂದೂಕು ಪರವಾನಗಿ: ಆಯುಧ ಪರವಾನಗಿ ಮತ್ತು ನವೀಕರಣ.

28. ಮನರಂಜನಾ ಅನುಮತಿ.
29. ಪ್ರಕೃತಿ ವಿಕೋಪ ಪರಿಹಾರ.
30. ಬೆಳೆ ನಾಶ ಪರಿಹಾರ.
31. ಕರ್ನಾಟಕ ಭೂಸುಧಾರಣೆ ಕಾಯ್ದೆ 1961ರ ಕಲಂ 109 ಮತ್ತು ಕಲಂ 80ರ ಅಡಿ ಅನುಮತಿ.

**ಜಿಲ್ಲಾಧಿಕಾರಿಯವರು ಇತರೆ ವಿಷಯಗಳ ಜೊತೆಗೆ ಕೆಳಕಾಣಿಸಿದ ಪ್ರಮುಖ ಅಧಿನಿಯಮಗಳ ಮೇಲೆ ಕ್ರಮ ಜರುಗಿಸುತ್ತಾರೆ:**

1. ಕಾನೂನು ಮತ್ತು ಸುವ್ಯವಸ್ಥೆ ಹಾಗೂ ಇನ್ನಿತರೆ ಮೆಜಿಸ್ಟೀರಿಯಲ್ ವಿಚಾರಗಳು
2. ಎಲ್ಲಾ ಸಿಬ್ಬಂಧಿ ವಿಷಯಗಳು (ನೇಮಕಾತಿ ಮತ್ತು ವರ್ಗಾವಣೆ ಇತ್ಯಾದಿ)
3. ಅಬ್ಕಾರಿ ಮತ್ತು ನಿಷೇದ ಸಂಬಂಧಿಸಿದ ವಿಚಾರಗಳು
4. ಚುನಾವಣೆಗಳು ಮತ್ತು ರಾಷ್ಟ್ರೀಯತೆ ವಿಚಾರಗಳು
5. ಮುನ್ಸಿಫಲ್ ಅಡ್‌ಮಿನಿಸ್ಟ್ರೇಷನ್‌ಗೆ ಸಂಬಂಧಿಸಿದ ವಿಚಾರಗಳು
6. ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಅತ್ಯಾವಶ್ಯಕ ವಸ್ತುಗಳಿಗೆ ಸಂಬಂಧಿಸಿದ ವಿಚಾರಗಳು
7. ಗಣ್ಯವ್ಯಕ್ತಿಗಳ ಸಂದರ್ಶನ
8. ಕರ್ನಾಟಕ ಭೂಮಂಜೂರಾತಿ ನಿಯಮಾವಳಿ ಯಡಿ ಭೂ ಸುಧಾರಣೆಗೆ ಸಂಬಂಧಿಸಿದ ವಿಚಾರಗಳು
9. ಕರ್ನಾಟಕ ಭೂಸುಧಾರಣಾ ಕಾಯ್ದೆ ಮತ್ತು ನಿಯಮಾವಳಿ ಅಡಿ ಸಂಬಂಧಿಸಿದ ವಿಚಾರಗಳು
10. ಇನಾಂ ಅಬಾಲಿಷನ್ ಕಾಯ್ದೆ ಮತ್ತು ನಿಯಮಾವಳಿ ಅಡಿ ಸಂಬಂಧಿಸಿದ ವಿಚಾರಗಳು
11. ನೈಸರ್ಗಿಕ ವಿಕೋಪಗಳು ಮತ್ತು ಪರಿಹಾರಗಳು
12. ವಿವಿಧ ಯೋಜನೆಗಳಲ್ಲಿ ಅನಾಥರಾದ / ವಲಸೆ ಬಂದವರಿಗೆ ಪುನರ್ವಸತಿ ಸೌಲಭ್ಯ
13. ಪ್ರಾದೇಶಿಕ ಸಾರಿಗೆ ನಿಯಂತ್ರಣ
14. ಗಣತಿಗಳು
15. ಆಡಳಿತಕ್ಕೆ ಸಂಬಂಧಿಸಿದ ವರದಿಗಳು

1. ಭೂಮಿ ಮತ್ತು ಭೂ ಕಂದಾಯ ಸರ್ಕಾರಿ ಬಾಕಿ ವಸೂಲಾತಿ ಸೇರಿದಂತೆ
2. ಭೂಸ್ವಾದೀನಕ್ಕೆ ಸಂಬಂಧಿಸಿದ ವಿಚಾರಗಳು
3. ಎಲ್ಲಾ ವಿಚಾರಗಳಿಗೆ ಸಂಬಂಧಿಸಿದ
   ಅ) ಸ್ಟಾಂಪ್ ಮತ್ತು ರಿಜಿಸ್ಟ್ರೇಶನ
   ಬಿ) ಸಂಘಗಳ ನೋಂದಣಿ ಕಾಯ್ದೆ 1960
   ಸಿ) ಇಂಡಿಯನ್ ಪಾರ್ಟನರ್ ಶಿಪ್ ಅಕ್ಟ್ 1932ರಡಿ ಸಂಘಗಳ ನೋಂದಣಿ
4. ಧಾರ್ಮಿಕ ದತ್ತಿಗೆ ಸಂಬಂಧಿಸಿದ ಎಲ್ಲಾ ವಿಚಾರಗಳು
5. ವ್ಯವಸಾಯದ ಗಣತಿ ಕಾರ್ಯ
6. ಅರಣ್ಯಕ್ಕೆ ಸಂಬಂಧಿಸಿದ ವಿಚಾರಗಳು
7. ಮನೆ ಬಾಡಿಗೆ ಮತ್ತು ವಸತಿಗೆ ಸಂಬಂಧಿಸಿದ ವಿಚಾರಗಳು
8. ನೀರಾವರಿಗೆ ಸಂಬಂಧಿಸಿದ ವಿಚಾರಗಳು
9. ಕೆಳಕಂಡ ಕಾಯ್ದೆಗಳಿಗೆ ಸಂಬಂಧಿಸಿದಂತೆ:
   (i) ಲ್ಯಾಂಡ್ ಇಂಪ್ರೋವ್ ಮೆಂಟ್ ಲೋನ್ಸ್ ಆಕ್ಟ್ 1963.
   (ii) ಅಗ್ರಿಕಲ್ಚರಿಸ್ಟ್ ಲೋನ್ಸ್ ಆಕ್ಟ್ 1963
   (iii) ನಾನ್ ಅಗ್ರಿಕಲ್ಚರಿಸ್ಟ್ ಲೋನ್ಸ್ ಆಕ್ಟ್ 1958
10. ಪ್ರಿವೆನ್ಷನ್ ಅಫ್ ಪ್ರಾಗ್ ಮೆಂಟೇಷನ್ & ಕನ್ ಸಾಲಿಡೇಷನ್ ಆಫ್ ಹೋಲ್ಡಿಂಗ್ಸ್
11. ಕೆಳಕಂಡ ವಿಚಾರಗಳಿಗೆ ಸಂಬಂಧಿಸಿದ:–
   (i) ನಗರ ಭೂಪರಿಮಿತಿ (ಸೀಲಿಂಗ & ರೆಗ್ಯುಲೇಷನ್) ಬೆಂಗಳೂರು ಅರ್ಬನ್ ಅಗ್ಲೋಮರೇಷನ್ ಹೊರತುಪಡಿಸಿ.
   (ii) ಪ್ರೊಹಿಬಿಷನ್ ಅಫ್ ಅಲಿನೇಷನ್ ಆಕ್ಟ್ 1975 ನಗರ ಪ್ರದೇಶದ ಖಾಲಿ ಜಮೀನುಗಳ ಬಗ್ಗೆ.

**ಜಿಲ್ಲಾಧಿಕಾರಿಯವರು ಅಧ್ಯಕ್ಷರಾಗಿರುವ ಪ್ರಮುಖವಾದ ವಿವಿಧ ಇಲಾಖಾವಾರು ಸಮಿತಿಗಳು:-**

1. ಕೃಷಿ ಪ್ರಶಸ್ತಿ ಯೋಜನೆ.
2. ಸಫಾಯಿ ಕರ್ಮಚಾರಿ ಪುನರ್ವಸತಿ ಯೋಜನೆ (ಪ.ಜಾ & ಪ.ವ. ಅಭಿವೃದ್ಧಿ ನಿಗಮ).
3. ಜಿಲ್ಲಾ ಸಮನ್ವಯ ಸಮಿತಿ (ಸಹಕಾರ ಸಂಘಗಳು).
4. ಪ್ರಧಾನ ಮಂತ್ರಿಗಳ ರೋಜಗಾರ್ ಯೋಜನೆ.
5. ವಿಶ್ವಯೋಜನೆ ಸಮಿತಿ.
6. ಏಕ ಗವಾಕ್ಷಿ ಯೋಜನೆ ಸಮಿತಿ.
7. ಜಿಲ್ಲಾ ಸಿಂಧುತ್ವ ಪ್ರಮಾಣ ಪತ್ರಗಳ ವಿತರಣಾ ಸಮಿತಿ (ಪ.ಜಾ & ಪ.ವ ಮತ್ತು ಬಿಸಿಎಂ).
8. ಅಂಬೇಡ್ಕರ್ ಭವನಗಳ ನಿರ್ಮಾಣ ಸಮಿತಿ.
9. ಪ.ಜಾ /ಪ.ವರ್ಗ ದೌರ್ಜನ್ಯ ನಿರ್ಮೂಲನ ಸಮಿತಿ.
10. ಕಾನೂನು ಪದವೀಧರರಿಗೆ ಆಡಳಿತ ತರಭೇತಿ ನೀಡುವ ಬಗ್ಗೆ ಆಯ್ದ ಸಮಿತಿ.
11. ಮೊರಾರ್ಜಿ ದೇಸಾಯಿ ವಸತಿ ಶಾಲೆ ಅಭಿವೃದ್ದಿ ಸಮಿತಿ.
12. ಪ್ರಧಾನ ಮಂತ್ರಿಗಳ 15 ಅಂಶಗಳ ಕಾರ್ಯಕ್ರಮ ಸಮಿತಿ.
13. ಭಾರತೀಯ ರೆಡ್ ಕ್ರಾಸ್ ಸಮಿತಿ.
14. ಅಂಗವಿಕಲರ ಕಲ್ಯಾಣ ಅಭಿವೃದ್ಧಿ ಸಮಿತಿ.
15. ಸ್ತ್ರೀ ಶಕ್ತಿ ಸಮಿತಿ.
16. ಜಿಲ್ಲಾ ಅಂಧತ್ವ ನಿವಾರಣಾ ಸಮಿತಿ.
17. ಜಿಲ್ಲಾ ಗ್ರಂಥಾಲಯ ಸಮಿತಿ.
18. ಜಿಲ್ಲಾ ಸಲಹಾ ಸಮಿತಿ (ನೆಹರೂ ಯುವಕ ಕೇಂದ್ರ).
19. ಯುವ ಪ್ರಶಸ್ತಿ ಆಯ್ದ ಸಮಿತಿ(ನೆಹರೂ ಯುವಕ ಕೇಂದ್ರ).
20. ಕಾರಾಗೃಹಗಳ ಅಧಿಕಾರಿ ಸಂದರ್ಶಕ ಸಮಿತಿ.
21. ಸ್ಮಾರಕಗಳು, ಪ್ರತಿಮೆಗಳನ್ನು ಸ್ಥಾಪಿಸುವ ಜಿಲ್ಲಾ ಸಮಿತಿ (ಕನ್ನಡ ಮತ್ತು ಸಂಸ್ಕೃತಿ ಇಲಾಖೆ).
22. ಸಾರ್ವತ್ರಿಕ ಪರೀಕ್ಷೆಗಳನ್ನು ನ ಡೆಸುವ ಸಮಿತಿ.
23. ನವೋದಯ ವಿದ್ಯಾಲಯ ಸಮಿತಿ.
24. ಜಿಲ್ಲಾ ಸಾಕ್ಷರತಾ ಸಮಿತಿ.
25. ನಿರ್ಮಿತಿ ಕೇಂದ್ರ.
26. ಜೀತದಾಳು ಪುರ್ನವಸತಿ ಜಿಲ್ಲಾ ಸಮಿತಿ.
27. ಬಾಲ ಕಾರ್ಮಿಕರ ಪುನರ್ವಸತಿ ಜಿಲ್ಲಾ ಸಮಿತಿ.
28. ಪಲ್ಸ್ ಪೋಲಿಯೋ ಕಾರ್ಯಕ್ರಮ.
29. ಪ್ರಾದೇಶಿಕ ಸಾರಿಗೆ ಪ್ರಾಧಿಕಾರ.
30. ರಸ್ತೆ ಸುರಕ್ಷತಾ ಸಮಿತಿ.
31. ಐ.ಡಿ.ಎಂ.ಎಸ್.ಟಿ. ಮತ್ತು ಹತ್ತನೇ ಆರ್ಥಿಕ ಆಯೋಗ ಸಮಿತಿ ಹಾಗೂ ಸ್ವರ್ಣ ಜಯಂತಿ ಶಹರಿ ರೋಜಗಾರ್ ಯೋಜನೆ.
32. ಕೋಮು ಸೌಹಾರ್ದತಾ ಸಮಿತಿ.
33. ಜಿಲ್ಲಾ ಮಟ್ಟದ ದಲಿತರ ಸಮಸ್ಯೆಗಳ ನಿವಾರಣಾ ಸಮಿತಿ.
34. ಗಡಿ ಪ್ರದೇಶಾಭಿವೃದ್ದಿ.

**ಜಿಲ್ಲಾಧಿಕಾರಿಯವರು ಹೊಂದಿರುವ ಅಧಿಕಾರದ ಮುಖ್ಯ ಕಾಯ್ದೆ ಕಾನೂನುಗಳ ವಿವರ:-**

1. ಕರ್ನಾಟಕ ಭೂಕಂದಾಯ ಕಾಯ್ದೆ 1964 ಮತ್ತು ನಿಯಮಗಳು 1966.
2. ಕರ್ನಾಟಕ ಭೂ ಮಂಜೂರಾತಿ ನಿಯಮಗಳು 1969.
3. ಕರ್ನಾಟಕ ಭೂ ಸುಧಾರಣೆ ಕಾಯ್ದೆ 1964 ಹಾಗೂ ನಿಯಮಗಳು 1974.
4. ಕರ್ನಾಟಕ ಭೂ ಸ್ವಾದೀನ ಕಾಯ್ದೆ 1994.

5. ಕರ್ನಾಟಕ ಮನೆ ನಿವೇಶನಗಳ ಮಂಜೂರಾತಿಗಾಗಿ ಭೂಸ್ವಾದೀನ ಅಧಿನಿಯಮ 1972.
6. ಕರ್ನಾಟಕ ಗ್ರಾಮ ರದ್ದಿಯಾತಿ ಕಾಯ್ದೆ.
7. ಕರ್ನಾಟಕ ಮರಗಳ ಸಂರಕ್ಷಣಾ ಕಾಯ್ದೆ ಮತ್ತು ನಿಯಮ 1977.
8. ಕರ್ನಾಟಕ ಹಲವು ಇನಾಂ ರದ್ದಿಯಾತಿ ಕಾಯಿದೆ 1977.

**ಉಪವಿಭಾಗ ಮಟ್ಟದ ಉಪ ವಿಭಾಗಾದಿಕಾರಿ ಹೊಂದಿರುವ ಅಧಿಕಾರದ ಮುಖ್ಯ ಕಾಯ್ದೆಗಳ ಮತ್ತು ಕಾನೂನುಗಳ ವಿವರ:-**

1. ಕರ್ನಾಟಕ ಭೂಕಂದಾಯ ಕಾಯ್ದೆ 1964 ಮತ್ತು ನಿಯಮಗಳು 1966.
2. ಕರ್ನಾಟಕ ಭೂಸುಧಾರಣಾ ಕಾಯ್ದೆ 1964 ಹಾಗೂ ನಿಯಮಗಳು 1974.
3. ಕರ್ನಾಟಕ ಭೂ ಸ್ವಾದೀನ ಕಾಯ್ದೆ 1894.
4. ಕರ್ನಾಟಕ ಮುದ್ರಾಂಕ ಅಧಿನಿಯಮ 1967 ಮತ್ತು ನಿಯಮಾವಳಿ 1958.
5. ಕರ್ನಾಟಕ ಪರಿಶಿಷ್ಟ ಜಾತಿಗಳು ಮತ್ತು ಪರಿಶಿಷ್ಟ ಪಂಗಡಗಳು (ಕೆಲವು ಜಮೀನುಗಳ ಪರಭಾರೆ ನಿಷೇಧ) ಅಧಿನಿಯಮ 1979.
6. ಕರ್ನಾಟಕ ಕೆ.ಸಿ.ಎಸ್. ವೃಂದ ಮತ್ತು ನೇಮಕಾತಿ, ಗ್ರಾಮಲೆಕ್ಕಾಧಿಕಾರಿಗಳ ನೇಮಕಾತಿ ನಿಯಮಗಳು.
7. ಕಂದಾಯ ವಸೂಲಿ ಕಾಯ್ದೆ.
8. ಪತ್ರಿಕಾ ಮತ್ತು ನೋಂದಣಿ ಅಧಿನಿಯಮ 1867.
9. ಜೀತದಾಳು ನಿರ್ಮೂಲನಾ ಕಾಯ್ದೆ.
10. ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳ (ದೌರ್ಜನ್ಯ ನಿಷೇದ) ಅಧಿನಿಯಮ 1989.
11. ಕರ್ನಾಟಕ ಸಿವಿಲ್ ಸೇವಾ (ವರ್ಗೀಕರಣ,ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957.
12. ದಂಡ ಪ್ರಕ್ರಿಯೆ ಸಂಹಿತೆ.

**ತಾಲ್ಲೂಕು ಮಟ್ಟದ ತಹಶೀಲ್ದಾರ್ ಹೊಂದಿರುವ ಅಧಿಕಾರದ ಮುಖ್ಯ ಕಾಯ್ದೆಗಳ ಮತ್ತು ಕಾನೂನುಗಳ ವಿವರ:-**

1. ಕರ್ನಾಟಕ ಭೂ ಸುಧಾರಣಾ ಅಧಿನಿಯಮ 1961 ಮತ್ತು ನಿಯಮಾವಳಿ 1974.
2. ಕರ್ನಾಟಕ ಹಲಂ ಇನಾಂ ರದ್ದಿಯಾತಿ ಅಧಿನಿಯಮ 1977.
3. ಕರ್ನಾಟಕ ಗ್ರಾಮ ನೌಕರಿಗಳ ರದ್ದತಿ ಅಧಿನಿಯ 1961.
4. ಕರ್ನಾಟಕ ಪುರಸಭೆಗಳ ಅಧಿನಿಯಮ 1964.
5. ಕರ್ನಾಟಕ ಕೃಷಿ ಸಾಲ ಕಾರ್ಯಾಚರಣೆ ಮತ್ತು ಇತರೆ ಉಪಬಂಧಗಳ ಅಧಿನಿಯಮ 1974 ಮತ್ತು ನಿಯಮಾವಳಿ 1975.
6. ಕರ್ನಾಟಕ ವೃದ್ದಾಪ್ಯವೇತನ ನಿಯಮಾವಳಿ.
7. ನಿರ್ಗತಿಕ ವಿಧವಾ ವೇತನ ನಿಯಮಾವಳಿ 1984.
8. ದೈಹಿಕ ಅಂಗವಿಕಲರಿಗೆ ನಿರ್ವಹಣಾ ಭತ್ಯೆ ಮಂಜೂರಿ ನಿಯಮಾವಳಿ 1957.
9. ಕರ್ನಾಟಕ ಋಣ ವಿಮೋಚನಾ ಅಧಿನಿಯಮ 1976.
10. ಮತದಾರರ ನೋಂದಣಿ ನಿಯಮಾವಳಿ 1960.
11. ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆಡ (ನಿಯಂತ್ರಣ) ಅಧಿನಿಯಮ 1966.
12. ಕರ್ನಾಟಕ ನೀರಾವರಿ ಅಧಿನಿಯಮ 1965.
13. ಕರ್ನಾಟಕ ನೀರಾವರಿ (ನೀರಿನ ಕರ ಅಕರಣೆ)ನಿಯಮಾವಳಿ 1965.
14. ಕರ್ನಾಟಕ ಅರಣ್ಯ ನಿಯಮಾವಳಿ 1969.
15. ಉದ್ದಿಮೆಗಳಿಗೆ ಕರ್ನಾಟಕ ರಾಜ್ಯದ ನೆರವು ನಿಯಮಾವಳಿ 1966.
16. ಕರ್ನಾಟಕ ಜಾನುವಾರು ಅತಿಕ್ರಮ ಪ್ರವೇಶ ಅಧಿನಿಯಮ 1966.
17. ಏಲಕ್ಕಿ ಅಧಿನಿಯಮ 1965.
18. ಕರ್ನಾಟಕ ಸಾರ್ವಜನಿಕ ಆವರಣಗಳ ಅಧಿನಿಯಮ 1974 ಮತ್ತು ಅದರಡಿಯ ನಿಯಮಾವಳಿ.

**<u>ದಂಡಾಧಿಕಾರಿಯಾಗಿ ತಹಶೀಲ್ದಾರ್‌ರು ಈ ಕೆಳಗಿನ ಕಾಯ್ದೆಗಳಡಿಯಲ್ಲಿ ಅಧಿಕಾರ ಹಾಗೂ ಕರ್ತವ್ಯಗಳನ್ನು ಹೊಂದಿರುತ್ತಾರೆ</u>:**

1. ದಂಡ ಪ್ರಕಿಯೆ ಸಂಹಿತೆ 1974.
2. ಭಾರತ ಸಾಕ್ಷ್ಯ ಅಧಿನಿಯಮ 1963.
3. ಕರ್ನಾಟಕ ಪೋಲಿಸ್ ಅಧಿನಿಯಮ 1963.
4. ಜೀತದಾಳು ಪದ್ದತಿ (ನಿರ್ಮೂಲನಾ) ಅಧಿನಿಯಮ 1976.
5. ಪ್ರಮಾಣವಚನ ಅಧಿನಿಯಮ 1999.
6. ಭಾರತೀಯ ಮುದ್ರಾಂಕ ಅಧಿನಿಯಮ 1899.
7. ಭಾರತೀಯ ತಂತಿ ಅಧಿನಿಯಮ 1985.
8. ನ್ಯಾಯಾಧೀಶರ (ರಕ್ಷಣೆ) ಅಧಿನಿಯಮ 1965.
9. ಪ್ರಾಣಿಗಳಿಗೆ ಹಿಂಸೆ ಅಧಿನಿಯಮ 1960.
10. ಕರ್ನಾಟಕ ಭಿಕ್ಷಾಟನಾ ಅಧಿನಿಯಮ 1975.
11. ಸಾರ್ವಜನಿಕ ಆರೋಗ್ಯ ಅಧಿನಿಯಮ 1944.
12. ಕರ್ನಾಟಕ ಮಾರಾಟ ಕರ ಅಧಿನಿಯಮ 1957.
13. ನ್ಯಾಯವಾದಿಗಳ ಅಧಿನಿಯಮ 1957.
14. ವಿದ್ಯುಚ್ಚಕ್ತಿ ಅಧಿನಿಯಮ 1910.
15. ಸತಿ ಹೋಗುವ (ನಿಷೇಧ) ಅಧಿನಿಯಮ 1987.
16. ನ್ಯಾಯಾಲಯಗಳ ನಿಂದನಾ ಅಧಿನಿಯಮ 1971.
17. ಕೈದಿಗಳನ್ನು ಗುರುತಿಸುವ ಅಧಿನಿಯಮ 1929.
18. ಪ.ಜಾತಿ/ಪ.ವರ್ಗಗಳ (ದೌರ್ಜನ್ಯ ನಿಷೇಧ) ಅಧಿನಿಯಮ 1989.
19. ಕರ್ನಾಟಕ ಆಹಾರ ಮತ್ತು ನಾಗರೀಕ ಸೇವಾ ಅಧಿನಿಯಮ.
20. ಮುಜರಾಯಿ ಇಲಾಖೆಗೆ ಸೇರಿದ ದೇವಸ್ಥಾನಗಳ ಜೀರ್ಣೋದ್ದಾರ.

**ಜಿಲ್ಲಾ ಘಟಕದ ಕಛೇರಿಯ ಮೇಲ್ವಿಚಾರಣೆ ಮತ್ತು ಹೊಣೆಗಾರಿಕೆಯ ಮಾರ್ಗಗಳು ಸೇರಿದಂತೆ ತೀರ್ಮಾನ ತೆಗೆದುಕೊಳ್ಳುವ ಪ್ರಕ್ರಿಯೆಯಲ್ಲಿ ಅನುಸರಿಸಬೇಕಾದ ಕಾರ್ಯವಿಧಾನ:–**

ಜಿಲ್ಲಾ ಕಚೇರಿಯಲ್ಲಿ ಅಧಿಕಾರಿಗಳು ಮತ್ತು ಸಿಬ್ಬಂಧಿಯ ಅಧಿಕಾರ ಮತ್ತು ಕರ್ತವ್ಯಗಳ ಬಗ್ಗೆ ನಂ:EST(1).ಸಿ.ಆರ್.104/07–08, ದಿನಾಂಕ: 12.03.2009 ರಂತೆ ಅಧಿಕೃತ ಜ್ಞಾಪನದಲ್ಲಿ ಕಾರ್ಯನಿರ್ವಹಣಾ ಆದೇಶ ಜಾರಿಗೊಳಿಸಿದೆ.ಅಂತೆಯೇ ಸಿಬ್ಬಂದಿ ವರ್ಗದವರ ಕಾರ್ಯ ನಿರ್ವಹಿಸುತ್ತಿದ್ದಾರೆ.

ಮೇಲೆ ತಿಳಿಸಿರುವ ಎಲ್ಲಾ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗ (ಗ್ರೂಪ್–ಸಿ, ಮತ್ತು ಡಿ) ಜಿಲ್ಲಾಧಿಕಾರಿಗಳ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಈ ಕಛೇರಿಯಲ್ಲಿ ನಿರ್ವಹಿಸುವ ಎಲ್ಲಾ ಸಂಬಂಧಿಸಿದ ಶಾಖೆಗಳ ವಿಷಯಗಳಲ್ಲಿ ಅಂತಿಮ ತೀರ್ಮಾನ ಕೈಗೊಳ್ಳುವ ಅಧಿಕಾರಿ ಜಿಲ್ಲಾಧಿಕಾರಿಗಳಾಗಿರುತ್ತಾರೆ.

**<u>1. ಕಾಗದ ಪತ್ರಗಳ ಸ್ವೀಕೃತಿ ವಿಲೇವಾರಿ:–</u>**

ಸಾರ್ವಜನಿಕರಿಂದ ,ಅಧೀನ ಕಛೇರಿಗಳಿಂದ ಮತ್ತು ಸರ್ಕಾರ ಹಾಗೂ ಮೇಲಾಧಿಕಾರಿಗಳಿಂದ ಬರುವಂತಹ ಎಲ್ಲಾ ಕಾಗದ ಪತ್ರಗಳನ್ನು/ ಕಡತಗಳನ್ನು ಸಾಮಾನ್ಯ ಸ್ವೀಕೃತಿ ಶಾಖೆಯಲ್ಲಿ ಸ್ವೀಕರಿಸಿ, ಸಾರ್ವಜನಿಕರ ಮನವಿ ಬಗ್ಗೆ ಸ್ಥಳದಲ್ಲೇ ಸ್ವೀಕೃತಿ ಪತ್ರವನ್ನು ನೀಡಿ ನಂತರ ಕಛೇರಿ ಸಹಾಯಕರು, ಕೇಂದಸ್ಥಾನಿಕ ಸಹಾಯಕರ ಮುಖಾಂತರ ಜಿಲ್ಲಾಧಿಕಾರಿಯವರ ಗಮನಕ್ಕೆ ತಂದು ಸ್ವೀಕೃತಿ ಶಾಖೆಯಲ್ಲಿ ಕಂಪ್ಯೂಟರೀಕರಣಗೊಳಿಸಿ ಸಂಬಂಧಪಟ್ಟ ವಿಷಯ ನಿರ್ವಾಹಕರಿಗೆ ಪ್ರತಿ ಕಡತ/ಕಾಗದ ಪತ್ರಗಳನ್ನು ಶಾಖೆವಾರು ಗುರುತಿಸುವಂತೆ Triletter Index ಹಾಕಿದ ನಂತರ ಅಗತ್ಯ ಕ್ರಮ ಕೈಗೊಳ್ಳಲು ನೀಡಲಾಗುತ್ತದೆ. ಉದಾಹರಣೆಗೆ:

1. ಭೂ ಮಂಜೂರಾತಿ (ಎನ್.ಎನ್.ಡಿ.)
2. ಭೂಸ್ವಾಧೀನ (ಎಲ್.ಆರ್.ಎಫ್)
3. ಭೂಸ್ವಾಧೀನ (ಎಲ್.ಎ.ಕ್ಯೂ)
4. ಲೆಕ್ಕಶಾಖೆ (ಎ.ಸಿ.ಟಿ)
5. ಪ್ರಕೃತಿ ವಿಕೋಪ (ಸಿಆರ್ಎಫ್)
6. ಹಕ್ಕು ದಾಖಲೆ (ಆರ್.ಆರ್.ಟಿ)
7. ಸಿಬ್ಬಂಧಿ ಶಾಖೆ
8. ನಗರ ಭೂಪರಿಮಿತಿ ಶಾಖೆ (ಯು.ಎಲ್.ಸಿ.)
9. ಅಭಿಲೇಖಾಲಯ (ಆರ್.ಕೆ)
10. ಭೂಪರಿವರ್ತನೆ (ಎ.ಎಲ್.ಎನ್)
11. ಸ್ವಾತಂತ್ರ್ಯ ಹೋರಾಟಗಾರರ ಗೌರವಧನ (ಎಫ್.ಎಫ್.ಪಿ)
12. ಚುನಾವಣೆ (ಇ.ಎಲ್.ಎನ್)
13. ಆಡಳಿತ (ಎ.ಡಿ.ಎಂ)
14. ಮೆಜಿಸ್ಟೀರಿಯಲ್ ಶಾಖೆ (ಎಂ.ಎ.ಜಿ)
15. ಕರ್ನಾಟಕ ಪರಿಶಿಷ್ಟ ಜಾತಿ/ವರ್ಗಗಳ ಪರಭಾರೆ ನಿಷೇಧ (ಪಿಟಿಸಿಎಲ್)
16. ಗಡಿ ಪ್ರದೇಶಾಬಿವೃದ್ದಿ ಯೋಜನೆ (ಬಿ.ಎ.ಡಿ.ಪಿ)
17. ಕರ್ನಾಟಕ ಗ್ರಾಮ ರದ್ದಿಯಾತಿ ಕಾಯ್ದೆ (ಹೆಚ್.ಒ.ಎ)
18. ನೀರಾವರಿ (ಐ.ಆರ್.ಆರ್)
19. ಅರಣ್ಯ (ಎಫ್.ಒ.ಆರ್)
20. ಕೊಳಚೆ ಪ್ರದೇಶ (ಕೆ.ಎ.ಎಸ್)
21. ಸಾಲ್ವೆನ್ಸಿ (ಎಸ್.ಒ.ಎಲ್)
22. ಸೋಲೇಷಿಯಂ ಫಂಡ್ (ಎಫ್.ಎಫ್.ಎಸ್)
23. ವಿಧಾನಸಭಾ/ಪರಿಷತ್ ಸದಸ್ಯರ ನಿಧಿ, (ಕೆ.ಎಲ್.ಎ.ಎಡಿ)
24. ಲೋಕಸಭಾ ಸದಸ್ಯರ ನಿಧಿ (ಎಂ.ಪಿ.ಎಲ್.ಎ.ಡಿ)
25. ಮಿಸಲೇನಿಯಸ್ (ಎಂ.ಎಸ್.ಸಿ.)
26. ಸಾರ್ವಜನಿಕ ಕುಂದುಕೊರತೆ (ಪಿ.ಜಿ.ಸಿ)
27. ದಲಿತ ಬೇಡಿಕೆಗಳು (ಡಿ.ಎಸ್.ಎಸ್.)
28. ಪ್ರಕೃತಿ ವಿಕೋಪ (ಸಿ.ಎ.ಎಲ್)

**ಕಛೇರಿ ಪ್ರಕಾರ್ಯಗಳ ನಿರ್ವಹಣೆಗೆ ರೂಪಿಸಿರುವ ಸೂತ್ರಗಳು:–**

1. ಜಿಲ್ಲಾಧಿಕಾರಿಗಳ ಕಛೇರಿಯಲ್ಲಿ ಸ್ವೀಕರಿಸಲಾಗುವ ಎಲ್ಲಾ ಕಾಗದ ಪತ್ರಗಳನ್ನು ಸಾಮಾನ್ಯ ಸ್ವೀಕೃತಿ ಶಾಖೆಯಲ್ಲಿ ಗಣಕೀಕರಣಗೊಳಿಸಿ ವಿಷಯ ನಿರ್ವಾಹಕರಿಗೆ ನೀಡುವಂತಹ ವ್ಯವಸ್ಥೆ ಕಲ್ಪಿಸಲಾಗಿದೆ.
2. ಸಾರ್ವಜನಿಕರಿಂದ ಸ್ವೀಕರಿಸಲಾಗುವ ಕಾಗದ ಪತ್ರಗಳಿಗೆ ಸ್ವೀಕೃತಿ ನೀಡುವುದಲ್ಲದೆ ಕಾರ್ಯಗತ ಅವಧಿ ನಿಗದಿಪಡಿಸಿ ತಿಳಿಸಲಾಗುತ್ತಿದೆ.
3. ಸಾರ್ವಜನಿಕ ಕುಂದು ಕೊರತೆಗಳ ನಿವಾರಣೆ ಬಗ್ಗೆ ಪ್ರತ್ಯೇಕ ಕೌಂಟರ್ ತೆರೆದು ಇಲ್ಲಿ ಸ್ವೀಕರಿಸಲಾಗುವ ಎಲ್ಲಾ ಮನವಿಗಳನ್ನು ಪ್ರತ್ಯೇಕ ರಿಜಿಸ್ಟರ್‌ನಲ್ಲಿ ನಮೂದಿಸಿ, ಕ್ಲುಪ್ತ ಕಾಲದಲ್ಲಿ ಉತ್ತರ ನೀಡುವುದು. ಅಧೀನ ಕಛೇರಿಗಳಿಂದ ವರದಿ ಪಡೆಯಲು ಕಾಲಾವಧಿ ನಿಗದಿಪಡಿಸುವುದು.ಇಲಾಖೆ ಪ್ರಕಾರ್ಯಗಳ ಪ್ರಗತಿ ಪರಿಶೀಲಿಸಲು ಪ್ರತಿ ಮಾಹೆಯಲ್ಲಿ ಕಂದಾಯ ಅಧಿಕಾರಿಗಳ ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳ ಸಭೆಗಳನ್ನು ಏರ್ಪಡಿಸುವುದು.

ಕಛೇರಿ ಕೈಪಿಡಿ ನಿಯಮಾವಳಿ ರೀತ್ಯ ಕಾಗದ ಪತ್ರಗಳನ್ನು ವಿಷಯ ನಿರ್ವಾಹಕರು ಸ್ವೀಕರಿಸಿ, ಗರಿಷ್ಟ 5 ದಿವಸಗಳೊಳಗಾಗಿ ವಿಷಯ ನಿರ್ವಾಹಕರು ಎಲ್ಲಾ ಸ್ವೀಕರಿಸುವ ಕಾಗದ ಪತ್ರಗಳನ್ನು ವಿಷಯ ನಿರ್ವಾಹಕರ ದಿನಚರಿಯಲ್ಲಿ ನಮೂದಿಸಿಕೊಂಡು ತದನಂತರ ವಿಷ ವಹಿಯಲ್ಲಿ ಅನುಕ್ರಮವಾಗಿ ನೋಂದಾಯಿಸಿಕೊಂಡು ಕಡತಗಳಲ್ಲಿ ಟಿಪ್ಪಣಿ ಹಾಕಿ ಮಂಡಿಸುತ್ತಾರೆ. ವಿಷಯ ನಿರ್ವಾಹಕರೆಲ್ಲರೂ ಕಛೇರಿ ಕಾರ್ಯವಿಧಾನದ ರೀತ್ಯಾ ಐದು ಕಟ್ಟು (Bundle System) ವಿಧಾನ ಅಳವಡಿಸಿ ಕಾರ್ಯನಿರ್ವಹಿಸುತ್ತರೆ.

ವಿಷಯ ನಿರ್ವಾಹಕರಿಂದ ಬಂದಂತಹ ಎಲ್ಲಾ ಕಡತಗಳ ಪರಿಶೀಲನೆ ಮಾಡಿ ಶಾಖಾ ಮುಖ್ಯಸ್ಥರು , ಕಛೇರಿ ಸಹಾಯಕರು/ ಚುನಾವಣಾ ತಹಶೀಲ್ದಾರ್/ ಮುಜರಾಯಿ ಸಹಾಯಕರುಗಳಿಗೆ ವಿಳಂಬವಾಗದ ರೀತಿಯಲ್ಲಿ ಕಡತದಲ್ಲಿ ವಿಷಯವಾರು ತೀರ್ಮಾನ ಕೈಗೊಳ್ಳುವ ನಿಟ್ಟನಲ್ಲಿ ಸೂಕ್ತ ಅಭಿಪ್ರಾಯದೊಂದಿಗೆ ಸಲ್ಲಿಸುತ್ತಾರೆ.

ಕಛೇರಿ ಸಹಾಯಕರು/ ಚುನಾವಣಾ ತಹಶೀಲ್ದಾರ್/ಮುಜರಾಯಿ ಸಹಾಯಕರು, ಶಾಖಾ ಮುಖ್ಯಸ್ಥರಿಂದ ಬಂದಂತಹ ಕಡತಗಳನ್ನು ಪರಿಶೀಲಿಸಿ ತಮ್ಮ ಅಭಿಪ್ರಾಯದೊಂದಿಗೆ ಜಿಲ್ಲಾಧಿಕಾರಿಗಳ ಕೇಂದ್ರಸ್ಥಾನಿಕ ಸಹಾಯಕರಿಗೆ ಕಡತಗಳನ್ನು ಸಲ್ಲಿಸುತ್ತಾರೆ.

ಕೇಂದ್ರಸ್ಥಾನಿಕ ಸಹಾಯಕರು ತಮಗೆ ಬರುವ ಕಡತಗಳಲ್ಲಿ ಅವರಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ವೇತನ ಬಟವಾಡೆ ಮತ್ತು ಜಿಲ್ಲಾಧಿಕಾರಿಗಳು ಮತ್ತು ವಿಶೇಷ ಜಿಲ್ಲಾಧಿಕಾರಿಗಳಿಂದ ಆದೇಶ ಪಡೆದಂತಹ ಹಾಗೂ ಅಧೀನ ಕಛೇರಿಗಳಿಗೆ ಕಳುಹಿಸುವಂತಹ ಸುಮಾರು ಶೇ.50ರಷ್ಟು ಕಡತಗಳ ವಿಲೇವಾರಿ ಮಾಡಲಿದ್ದು, ಪಾಲಿಸಿ (ಪ್ರಮುಖ) ವಿಷಯಗಳಲ್ಲಿ ಹಾಗೂ ಅಂತಿಮ ತೀರ್ಮಾನ ಮಂಜೂರಾತಿ ಪ್ರಕರಣಗಳಿಗೆ ಸಂಬಂಧಿಸಿದಂತೆ ಟಿಪ್ಪಣಿಯಲ್ಲಿ ಶಿಫಾರಸ್ಸು ಮಾಡಿ ಜಿಲ್ಲಾಧಿಕಾರಿಗಳಿಗೆ ವಿಶೇಷ ಜಿಲ್ಲಾಧಿಕಾರಿಗಳಿಗೆ ಸಲ್ಲಿಸುತ್ತಾರೆ. ಕಡತಗಳಲ್ಲಿ ತೀರ್ಮಾನ ಕೈಗೊಳ್ಳುವ ಬಗ್ಗೆ ಅನುಸರಿಸುವ ಕಾರ್ಯವಿಧಾನ ಕಛೇರಿ ಕೈಪಿಡಿಯ ನಿಯಮಾವಳಿ ರೀತ್ಯಾ ಕ್ರಮ ವಹಿಸಲಾಗುತ್ತದೆ.

**ಜಿಲ್ಲಾ ಘಟಕ ಹೊಂದಿರುವ ಅಥವಾ ಅದರ ನಿಯಂತ್ರಣದಲ್ಲಿರುವ ದಾಸ್ತಾವೇಜುಗಳ ಪ್ರವರ್ಗಗಳ ಪಟ್ಟಿ:-**

ಜಿಲ್ಲಾಧಿಕಾರಿಗಳ ಘಟಕದಲ್ಲಿ ಮೇಲೆ ರೂಪಿಸಲಾದ ಕಾಯ್ದೆ ನಿಯಮಗಳಡಿ ನಿರ್ವಹಿಸುವ ಎಲ್ಲಾ ಕಡಗಳಲ್ಲಿ ಅಂತಿಮ ಆದೇಶ ನೀಡಿ ಮುಕ್ತಾಯವಾದ ನಂತರ ಪ್ರತಿ ಕಡತಗಳ ಪ್ರಾಮುಖ್ಯತೆಯನ್ನುಸರಿಸಿ ಪ್ರವರ್ಗ 'ಎ' 'ಬಿ' 'ಸಿ' 'ಡಿ' ಮತ್ತು 'ಇ' ಎಂದು ವರ್ಗೀಕರಿಸಿ ನಿರ್ವಹಿಸಲಾಗುತ್ತಿದೆ. ಪ್ರತಿ ವರ್ಗೀಕರಣದ ಅವಧಿ ಕೆಳಕಂಡಂತಿರುತ್ತದೆ.

| | |
|---|---|
| 'ಎ' ಡಿಸ್ | ಶಾಶ್ವತ |
| 'ಬಿ' ಡಿಸ್ | 30ವರ್ಷಗಳು |
| 'ಸಿ' ಡಿಸ್ | 10ವರ್ಷಗಳು |
| 'ಡಿ' ಡಿಸ್ | 5ವರ್ಷಗಳು |
| 'ಇ' ಡಿಸ್ | 1ವರ್ಷ |

**ಅದರ ಕಾರ್ಯನೀತಿಯ ರಚನೆ ಅಥವಾ ಅದರ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಸಾರ್ವಜನಿಕರೊಡನೆ ಸಮಾಲೋಚಿಸಲು ಅಥವಾ ಅವರ ಪ್ರಾತಿನಿಧ್ಯವಿರುವಂತೆ ಮಾಡುವ ಇರುವಂಥ ಯಾವುದೇ ವ್ಯವಸ್ಥೆಯ ವಿವರಗಳು;-**

1. ಅಧೀನ ಕಛೇರಿಗಳಿಂದ ವರದಿ ಪಡೆಯಲು ಕಾಲಾವಧಿ ನಿಗದಿಪಡಿಸುವುದು
2. ಇಲಾಖೆಯ ಪ್ರಕಾರ್ಯಗಳ ಪ್ರಗತಿ ಪರಿಶೀಲಿಸಲು ಸಭೆಗಳನ್ನು ಏರ್ಪಡಿಸುವುದು
3. ಸಾರ್ವಜನಿಕ ಕುಂದುಕೊರತೆ ಆಲಿಸುವ ದಿನ
4. ಪಾರದರ್ಶಕ ಕಾಯಿದೆ ಅನುಷ್ಠಾನ
5. ದಲಿತರ ಬೇಡಿಕೆಗಳ ಇತ್ಯರ್ಥಗೊಳಿಸುವ ಸಭೆ
6. ಇತರೆ ಇಲ್ಲಾ ವರ್ಗದ ಜನರಿಂದ ಸ್ವೀಕರಿಸುವಂತಹ ಅಹವಾಲುಗಳು
7. ಪ್ರಕೃತಿ ವಿಕೋಪ
8. ಕರ್ನಾಟಕ ಭೂಕಂದಾಯ ಕಾಯಿದೆ ಕಲಂ 94 ಸಿ ರಡಿ ಸ್ವೀಕರಿಸಿರುವ ಅರ್ಜಿಗಳ ವಿಲೇವಾರಿ
9. ಎಂ.ಪಿ.ಲ್ಯಾಡ್ಸ್/ಕೆ.ಎಲ್.ಎ.ಡಿ.
10. ಗಡಿ ಪ್ರದೇಶಾಭಿವೃದ್ಧಿ

**ಜಿಲ್ಲಾ ಘಟಕದ ಭಾಗವಾಗಿ ಅಥವಾ ಅದರ ಸಲಹೆಯ ಉದ್ದೇಶಕ್ಕಾಗಿ ರಚಿತವಾದ ಇಬ್ಬರು ಅಥವಾ ಹೆಚ್ಚು ವ್ಯಕ್ತಿಗಳನ್ನೊಳಗೊಂಡ ಮಂಡಳಿಗಳು, ಪರಿಷತ್ತುಗಳು, ಸಮಿತಿಗಳು ಅಥವಾ ಇತರ ನಿಕಾಯಗಳ ಮತ್ತು ಆ ಮಂಡಳಿಗಳ, ಪರಿಷತ್ತುಗಳ ,ಸಮಿತಿಗಳ ಮತ್ತು ಇತರೆ ನಿಕಾಯಗಳ ಸಭೆಗಳು ಸಾರ್ವಜನಿಕರಿಗೆ ಮುಕ್ತವಾಗಿರುತ್ತವೆಯೇ ಅಥವಾ ಅಂತಹ ಸಭೆಗಳ ನಡಾವಳಿಗಳು ಸಾರ್ವಜನಿಕರಿಗೆ ದೊರೆಯುತ್ತವೆಯೇ ಎಂಬುದರ ವಿವರ ಪಟ್ಟಿಗಳು:**

1. ಅಧೀನ ಕಛೇರಿಗಳಿಂದ ವರದಿ ಪಡೆಯಲು ಕಾಲಾವಧಿ ನಿಗದಿಪಡಿಸುವುದು

ಜಿಲ್ಲಾ ಕಛೇರಿಯಿಂದ ಅಧೀನ ಕಛೇರಿಗಳಿಗೆ ವರದಿ ಪಡೆಯಲು ಸಂದರ್ಭಾನುಸಾರ ಕಾಲಮಿತಿಯನ್ನು ನಿಗದಿಪಡಿಸಲಾಗುತ್ತದೆ. ಹಾಗೂ ವರದಿ ಪಡೆದು ಸಾರ್ವಜನಿಕರಿಗೆ /ಸಂಘಟನೆಗಳ ಮುಖ್ಯಸ್ಥರಿಗೆ ಸಭೆ ಕರೆದು ವರದಿಯಲ್ಲಿನ ಅಂಶಗಳ ಬಗ್ಗೆ ಚರ್ಚಿಸಿ ತೀರ್ಮಾನ ತೆಗೆದುಕೊಳ್ಳಲಾಗುತ್ತದೆ.

2. ಇಲಾಖೆಯ ಪ್ರಕಾರ್ಯಗಳ ಪ್ರಗತಿ ಪರಿಶೀಲಿಸಲು ಸಭೆಗಳನ್ನು ಏರ್ಪಡಿಸುವುದು:–

ಇಲಾಖೆಗೆ ಸಂಬಂಧಿಸದ ವಿಚಾರಗಳ ಬಗ್ಗೆ ಪ್ರಗತಿ ಸಾದಿಸಲು ಕಾಲ ಕಾಲಕ್ಕೆ ಸಭೆಗಳನ್ನು ಕರೆಯಲಾಗುತ್ತದೆ. ಹಿಂದಿನ ಸಭೆಯ ಪ್ರಗತಿಯನ್ನು ಪರಿಶೀಲಿಸುವುದಲ್ಲದೆ, ನಿಗಧಿತ ಗುರಿ ಸಾಧಿಸದಿರುವ ಬಗ್ಗೆ ಉಂಟಾಗಿರುವ ತೊಡಕುಗಳ ಬಗ್ಗೆ ಚರ್ಚಿಸಿ ಅಗತ್ಯವಾದ ನೆರವನ್ನು ಮತ್ತು ಸಲಹೆಯನ್ನು ನೀಡಲಾಗುತ್ತದೆ ಹಾಗೂ ಮುಂದಿನ ಸಭೆಯ ದಿನಾಂಕವನ್ನು ನಿಗದಿಪಡಿಸಿ, ಮುಂದಿನ ಸಭೆಯ ದಿನಾಂಕದೊಳಗೆ ಪ್ರಗತಿಯ ಮಾಹಿತಿಯನ್ನು ಸಲ್ಲಿಸಲು ಸಂಬಂಧಿಸಿದ ಅಧಿಕಾರಿಗಳಿಗೆ ತಿಳಿಸಲಾಗುತ್ತಿದೆ.

3. ಸಾರ್ವಜನಿಕ ಕುಂದು ಕೊರತೆ ಆಲಿಸುವ ದಿನ:–

ಪ್ರತಿ ಮಾಹೆಯ ಒಂದನೇ ಹಾಗೂ ಮೂರನೇ ಶನಿವಾರ ಸಾರ್ವಜನಿಕ ಕುಂದು ಕೊರತೆ ಆಲಿಸಲು ಸಾರ್ವಜನಿಕರಿಗೆ ಮುಕ್ತ ಪ್ರವೇಶ ಕಲ್ಪಿಸಲಾಗಿದೆ. ಸದರಿ ದಿನದಂದು ಎಲ್ಲಾ ಇಲಾಖಾಧಿಕಾರಿಗಳು ಸಭೆಯಲ್ಲಿ ಹಾಜರಿರುತ್ತಾರೆ. ಸ್ಥಳದಲ್ಲಿಯೇ ಅರ್ಜಿದಾರರಿಂದ ಮನವಿ ಸ್ವೀಕರಿಸಿ , ನಿಯಮಾನುಸಾರ ಪರಿಶೀಲಿಸಿ ಶೇ.90ರಷ್ಟು ಪರಿಹಾರವನ್ನು ಸ್ಥಳದಲ್ಲಿಯೇ ಕೈಗೊಳ್ಳಲಾಗುತ್ತದೆ. ಉಳಿದ ಪ್ರಕರಣಗಳಲ್ಲಿ ಕ್ರಮ ಜರುಗಿಸಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿ ಮುಂದಿನ ಸಭೆಯಲ್ಲಿ ತೆಗೆದುಕೊಂಡ ಕ್ರಮವನ್ನು ಅರ್ಜಿದಾರರಿಗೆ ತಿಳಿಸುವ ವ್ಯವಸ್ಥೆಯನ್ನು ನೀಡಲಾಗಿದೆ.

4. ಪಾರದರ್ಶಕ ಕಾಯ್ದೆ:–

ಕರ್ನಾಟಕ ಸಾರ್ವಜನಿಕ ಸಂಗ್ರಹಗಳಲ್ಲಿ ಪಾರದರ್ಶಕತೆ ಅಧ್ಯಾದೇಶ –2000, ದಿನಾಂಕ:04.10.2000ರಿಂದ ಹಾಗೂ ನಿಯಮ 24.10.2000ರಿಂದ ಜಾರಿಗೆ ಬಂದಿರುತ್ತದೆ.

ಟೆಂಡರ್‌ಗಳನ್ನು ಆಹ್ವಾನಿಸುವ ಪ್ರಕ್ರಿಯೆಗೊಳಪಡಿಸುವ ಮತ್ತು ಅಂಗೀಕರಿಸುವ ಕಾರ್ಯವಿಧಾನವನ್ನು ಸರಳಗೊಳಿಸುವ ಮೂಲಕ ಸಂಗ್ರಹಣಾ ಸಂಸ್ಥೆಗಳು ಸರಕುಗಳ ಹಾಗೂ ಸೇವೆಗಳ ಸಂಗ್ರಹಣಾ ಪ್ರಕ್ರಿಯೆಯನ್ನು ಪಾರದರ್ಶಕಗೊಳಿಸುವ ಉದ್ದೇಶದಿಂದ ಸದರಿ ನಿಯಮಗಳನ್ನು ಸರ್ಕಾರವು ಅಧ್ಯಾದೇಶದ ಮೂಲಕ ಜಾರಿಗೆ ತಂದಿರುತ್ತದೆ.

ಸದರಿ ನಿಯಮದನ್ವಯ ಯಾವುದೇ ಸರ್ಕಾರಿ ಇಲಾಖೆ, ರಾಜ್ಯ ಸರ್ಕಾರಿ ಉದ್ಯಮ, ಸ್ಥಳೀಯ ಪ್ರಾಧಿಕಾರ ಅಥವಾ ಯಾವುದೇ ಕಾನೂನಿನಡಿಯಲ್ಲಿ ಸ್ಥಾಪಿತವಾದ ಮತ್ತು ಸರ್ಕಾರದ ಸ್ವಾಮ್ಯದಲ್ಲಿರುವ ಅಥವಾ ನಿಯಂತ್ರಣದಲ್ಲಿರುವ ಮಂಡಳಿ, ನಿಗಮ ಮತ್ತು ಪ್ರಾಧಿಕಾರಗಳು ಈ ಅಧ್ಯಾದೇಶದ ವ್ಯಾಪ್ತಿಗೆ ಒಳಪಡುತ್ತದೆ. ಸದರಿ ನಿಯಮದನ್ವಯ ಸಂಗ್ರಹಣೆ ಮಾಡುವ ಸರಕು ಹಾಗೂ ಸೇವೆಗಳು ರೂ.5ಲಕ್ಷಕ್ಕಿಂತ (ಐದುಲಕ್ಷ) ಹೆಚ್ಚಿಗೆ ಇದ್ದಲ್ಲಿ , ಅಧ್ಯಾದೇಶದ ಕ್ಲಾಸ್ 4ರಂತೆ ಟೆಂಡರ್ ಕರೆಯಬೇಕಾಗಿರುತ್ತದೆ.

**ಈ ಕೆಳಕಂಡ ಸಂದರ್ಭಗಳಲ್ಲಿ ಈ ಪ್ರಕರಣಗಳಿಗೆ ಉಪಬಂಧಗಳು ಅನ್ವಯವಾಗುವುದಿಲ್ಲ:–**

1) ಪ್ರಕೃತಿ ವಿಕೋಪಗಳ ಹಾಗೂ ಸರ್ಕಾರವು ಘೋಷಿಸಿದ ತುರ್ತು ಪರಿಸ್ಥಿತಿಯ ಅವಧಿಯಲ್ಲಿ
2) ಸರಕುಗಳು ಅಥವಾ ಸೇವೆಗಳು ಏಕೈಕ ಮೂಲದಿಂದ ಲಭ್ಯವಾಗುತ್ತಿದ್ದಲ್ಲಿ
3) ಮೂರು ತಜ್ಞರ ಸಮಿತಿ ಪರಿಶೀಲಿಸತಕ್ಕದ್ದು

4) ಸರ್ಕಾರದ ಇಲಾಖೆಗಳು ಸಂಗ್ರಹಣೆ ಮಾಡಿಕೊಳ್ಳಬೇಕೆಂದು ಸರಕುಗಳ ಹಾಗೂ ಸೇವೆಗಳ ಮೌಲ್ಯವು 1 ಲಕ್ಷ ಮೀರದಿದ್ದಲ್ಲಿ
   ಅ) ಸಂಗ್ರಹಣಾ ಸಂಸ್ಥೆಯ ಒಬ್ಬರು ತಾಂತ್ರಿಕ ಪ್ರತಿನಿಧಿ
   ಆ) ಸರ್ಕಾರಿ ಸಂಸ್ಥೆಯ ಒಬ್ಬರು ತಾಂತ್ರಿಕ ಪ್ರತಿನಿಧಿ
   ಇ) ಪ್ರಸಿದ್ಧವಾದ ಶೈಕ್ಷಣಿಕ ಅಥವಾ ಸಂಶೋಧನಾ ಸಂಸ್ಥೆ ಅಥವಾ ವಾಣಿಜ್ಯೇತರ ಸಂಸ್ಥೆಯ ಒಬ್ಬರು ಪ್ರತಿನಿಧಿ.
5) ಸ್ಥಳೀಯ ಪ್ರಾಧಿಕಾರವು ಕಿರು ಸರಬರಾಜು ಯೋಜನೆಯ ಅನುಷ್ಠಾನದ ಅಥವಾ ಶಾಲಾ ಕೊಠಡಿಗಳ ಉದ್ದೇಶಕ್ಕಾಗಿ ಸಂಗ್ರಹಣೆ ಮಾಡಿಕೊಳ್ಳಬೇಕಾದ ಸರಕುಗಳ ಅಥವಾ ಸೇವೆಗಳ ಮೌಲ್ಯವು 2 ಲಕ್ಷ ಮೀರತಕ್ಕದ್ದಲ್ಲ ಹಾಗೂ ಇತರೆ ಉದ್ದೇಶಗಳಿಗೆ 1 ಲಕ್ಷ ಮೀರತಕ್ಕದ್ದಲ್ಲ

**5. ದಲಿತರ ಬೇಡಿಕೆಗಳ ಇತ್ಯರ್ಥಗೊಳಿಸುವ ಸಭೆ:–**

ದಲಿತರ ಬೇಡಿಕೆಗಳ ಬಗ್ಗೆ ವಿವಿಧ ಸಂಘಟನೆಗಳು ಸರ್ಕಾರ ಮತ್ತು ಈ ಕಛೇರಿಗಳಿಗೆ ಸಲ್ಲಿಸುತ್ತಿರುವ ಮನವಿಗಳನ್ನು ಆಧರಿಸಿ ನಿಯಮಾನುಸಾರ ಅಧೀನಾಧಿಕಾರಿಗಳಿಂದ ಪರಿಶೀಲನಾ ವರದಿಯನ್ನು ಪಡೆದು ಈ ಕಛೇರಿಯಲ್ಲಿ ದಲಿತ ಮುಂಡರುಗಳೊಂದಿಗೆ ಚರ್ಚಿಸಲು ಸಭೆಯನ್ನು ಕರೆಯಲಾಗುತ್ತದೆ. ಕಾನೂನು ರೀತಿ ಕ್ರಮ ಕೈಗೊಂಡು, ತೆಗೆದುಕೊಂಡ ಕ್ರಮದ ವಿವರವನ್ನು ತಿಳಿಸಲಾಗುತ್ತಿದೆ.

6. ಇತರ ಎಲ್ಲಾ ವರ್ಗದ ಜನರಿಂದ ಸ್ವೀಕರಿಸುವಂತಹ ಅಹವಾಲುಗಳು:–

ರೈತ ಸಂಘಟನೆಗಳು, ವಿದ್ಯಾರ್ಥಿಗಳ ಕುಂದುಕೊರತೆಗಳಲ್ಲದೆ ಇನ್ನಿತರ ಸಂಘಟನೆಗಳಿಂದ ನಡೆಸುವ ಪ್ರತಿಭಟನೆಗಳ ಆಹವಾಲುಗಳನ್ನು ಸ್ವೀಕರಿಸಿ ಸಂಬಂಧಿಸಿದವರಿಗೆ ರವಾನಿಸಿ ಮಾಹಿತಿ ಪಡೆದು ಪರಿಹಾರ ಒದಗಿಸುವುದಲ್ಲದೆ ಸರ್ಕಾರಕ್ಕೆ ವರದಿಯನ್ನು ಸಲ್ಲಿಸಲಾಗುತ್ತಿದೆ.

**7. ಪ್ರಕೃತಿ ವಿಕೋಪ:–**

ನೈಸರ್ಗಿಕ ವಿಕೋಪಗಳಾದ ಅತಿವೃಷ್ಟಿ ಸೇರಿದಂತೆ ಎಲ್ಲಾ ವಿಕೋಪಗಳ ಬಗ್ಗೆ ನಿಯಮಾನುಸಾರ ಪರಿಹಾರ ನೀಡಲಾಗುತ್ತಿದೆ. ಅಲ್ಲದೆ ಸಾರ್ವಜನಿಕರಿಗೆ ಮಾಡಿಕೊಟ್ಟು ಸಹಾಯಪಡೆದು ತುರ್ತು ಸೇವಾ ಸೌಕಭ್ಯಗಳನ್ನು ನೀಡಲಾಗಿತ್ತಿದೆ. ಅವಶ್ಯವಿದ್ದಲ್ಲಿ ಸಂಕಷ್ಟದ ಮಾಹಿತಿ ಹಾಗೂ ತುರ್ತು ಪರಿಹಾರ ನೀಡಲು ಅಗತ್ಯ ಸೇವಾ ಸೌಲಭ್ಯ (ಹೆಲ್ಪ್ ಲೈನ್) ವ್ಯವಸ್ಥೆ ಮಾಡಲಾಗುತ್ತದೆ.

**ಕರ್ನಾಟಕ ಭೂ ಕಂದಾಯ ಕಾಯಿದೆ ಕಲಂ ಕಾಯಿದೆ ಕಲಂ 94 ಸಿ ರಡಿ ಸ್ವೀಕರಿಸಿರುವ ಅರ್ಜಿಗಳ ವಿಲೇವಾರಿ:–**

ಸರ್ಕಾರಿ ಜಮೀನುಗಳಾದ ಸರ್ಕಾರಿ ಖರಾಬು ಮತ್ತು ಸರ್ಕಾರಿ ಗೋಮಾಳ ಎಂದು ವರ್ಗೀಕೃತಗೊಂಡ ಜಮೀನುಗಳಲ್ಲಿ ನಿರ್ಮಿಸಲಾದ ಅನಧಿಕೃತ ಮನೆಗಳಿಗೆ ಸಂಬಂಧಿಸಿದಂತೆ, ಕರ್ನಾಟಕ ಭೂ ಕಂದಾಯ ಕಾಯ್ದೆ 1964 94(ಸಿ) ಪ್ರಕಾರ ಜಮೀನಿನಲ್ಲಿ ದಿನಾಂಕ 14–04–1998ಕಿಂತ ಮುಂಚಿತವಾಗಿ ಕಟ್ಟಿರುವ ಕಟ್ಟಡಗಳನ್ನು **ಕರ್ನಾಟಕ ಸ್ವಾಧೀನದಲ್ಲಿರುವ ಭೂಮಿಯಲ್ಲಿ ವಾಸದ ನಿರ್ಮಾಣಕ್ಕೆ ಸಂಬಂಧಿಸಿದ ಭೂ**

**ಮಂಜೂರಾತಿ ನಿಯಮಗಳು 1969 ಪ್ರಕಾರ ಸರ್ಕಾರಿ ಭೂಮಿಯಲ್ಲಿ ನಿರ್ಮಿಸಿರುವ ಕಟ್ಟಡಗಳು / ವಾಸದ ಮನೆಗಳನ್ನು ಸಕ್ರಮೀಕರಿಸಲಾಗುವುದು. (ಅರಣ್ಯ, ಕೆರೆಅಂಗಳ, ಸ್ಮಶಾನ ಹೊರತುಪಡಿಸಿ)**

ನಗರ ಪ್ರದೇಶ ಹಾಗೂ ಗ್ರಮಿಣ ಪ್ರದೇಶದ 11,800–00 ರೂಗಳ ವಾರ್ಷಿಕ ಆದಾಯ ಮಿತಿಯೊಳಗಿರುವವರಿಗೆ ನಗರ ಪ್ರದೇಶದಲ್ಲಿ 30X40ಅಳತೆಯಲ್ಲಿ ಕಟ್ಟಿರುವ ಮನೆಗಳನ್ನು ಮುಫತ್ತಾಗಿ ಸಕ್ರಮಗೊಳಿಸಲು ಅವಕಾಶವಿರುತ್ತದೆ.

ಮಹಾನಗರ ಪಾಲಿಕೆ ಮತ್ತು ನಗರಸಭೇ ವ್ಯಾಪ್ತಿಯಲ್ಲಿರುವ ಕಟ್ಟಡಗಳಿಗೆ ಬಿ.ಡಿ.ಎ ನಿವೇಶನದ ಧರದಲ್ಲಿನ ಹಣವನ್ನು ಪಾವತಿಸಿಕೊಂಡು ಸಕ್ರಮಗೊಳಿಸಲಾಗುತ್ತದೆ. ಬೆಂಗಳೂರು ಮಹಾನಗರ ಪಾಲಿಕೆ ನಗರಸಭೆ ವ್ಯಾಪ್ತಿಗಳನ್ನು ಹೊರತುಪಡಿಸಿ, ಉಳಿದ ವ್ಯಾಪ್ತಿಯಲ್ಲಿ 30X40 ಅಡಿ ನಿವೇಶನಕ್ಕೆ ಚದರಡಿ 1ಕ್ಕೆ ರೂ. 1–00 ರಂತೆ 30X40 ಚದರಡಿ ನಿವೇಶನಕ್ಕೆ ರೂ.1–90 ಯಂತೆ, 30X40 ಚದರಡಿ ನಿವೇಶನಕ್ಕೆ ರೂ.2–80 ಯಂತೆ ಹಾಗೂ8–00 ಗುಂಟೆ ವಿಸ್ತೀರ್ಣದವರೆಗೆ ರೂ.3–00 ಯಂತೆ ಸಕ್ರಮಗೊಳಿಸಲು ಅವಕಾಶವಿರುತ್ತದೆ. ಸಾರ್ವಜನಿಕ ಹಿತಾಸಕ್ತಿಗೆ ತೊಂದರೆ ಇಲ್ಲದೆ ಇರುವುದನ್ನು ಖಚಿತಪಡಿಸಿದೊಂಡು, ಸದರಿ ಜಮೀನುಗಳನ್ನು ಸಾರ್ವಜನಿಕ ಉದ್ದೇಶಕ್ಕಾಗಿ ಮೀಸಲಿಟ್ಟಿರುವುದನ್ನು ಕಾನೂನುಬದ್ದವಾಗಿ ವಿಹಿತಗೊಳಿಸಿ ನಂತರ ಸಕ್ರಮ ಮಾಡುವ ಬಗ್ಗೆ ಕ್ರಮಕೈಗೊಳ್ಳಲಾಗುತ್ತಿದೆ.

ಮುನಿಸಿಪಲ್ ಕಾರ್ಪೋರೇಷನ್ ಪರಿಮಿತಿ ಮತ್ತು ಕಾರ್ಪೋರೇಷನ್ ಪರಿಮಿತಿಯಿಂದ 18 ಕಿ.ಮೀ. ದೂರದೊಳಗೆ ಇರುವ ಎಲ್ಲಾ ಸರ್ಕಾರಿ ಭೂಮಿಗಳ ಮತ್ತು ಅವರ ಅಧಿಕಾರಿ ವ್ಯಾಪ್ತಿಗೊಳಪಟ್ಟ ಇತರ ಸ್ಥಳಗಳಲ್ಲಿನ ಅಕ್ರಮ ವಾಸದ ಮನೆಗಳ ಸಕ್ರಮದ ಬಗ್ಗೆ ಮಂಜೂರಾತಿ ನೂಡುವ ಜಿಲ್ಲಾಧಿಕಾರಿ ಯವರಿಗೆ ನೀಡಲಾಗಿರುತ್ತದೆ.

**ಎಂ.ಪಿ.ಲ್ಯಾಡ್ಸ್/ಕೆ.ಎಲ್.ಎ.ಡಿ:–**

ಲೋಕಸಭಾ ಮತ್ತು ವಿಧಾನಸಭಾ ಸದಸ್ಯರ ನಿಧಿಯಿಂದ ನಿಗಧಿಪಡಿಸಿರುವ ಅನುದಾನವನ್ನು ಸಂಬಂಧಿಸಿದ ಶಾಸಕರ ಅನುಮತಿ/ಸಹಕಾರದೊಂದಿಗೆ ಕ್ಷೇತ್ರಾಭಿವೃದ್ಧಿಪಡಿಸಲಾಗುತ್ತಿದೆ.

## ಸಂಸತ್ ಸದಸ್ಯರ ಕ್ಷೇತ್ರಾಭಿವೃದ್ಧಿ ಯೋಜನೆ

ಭಾರತ ದೇಶದಲ್ಲಿ ಅಭಿವೃದ್ಧಿ ಕಾಮಗಾರಿಗಳನ್ನು ಅನುಷ್ಠಾನಗೋಳಿಸಲು ಎಲ್ಲಾ ಲೋಕಸಭಾ ಹಾಗೂ ರಾಜ್ಯ ಸಭಾ ಸದಸ್ಯರುಗಳಿಗೆ ತಲಾ ರೂ.100.00 ಲಕ್ಷ ಅನುದಾನವನ್ನು ಬಿಡುಗಡೆ ಮಾಡಿ, ಈ ಅನುದಾನವನ್ನು ಆಯಾ ಕ್ಷೇತ್ರದಲ್ಲಿ ಅಭಿವೃದ್ಧಿ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು, ಸಂಸದ್ ಸದಸ್ಯರಿಗೆ ಕಾಮಗಾರಿಗಳನ್ನು ಸೂಚಿಸಲು ಆದೇಶ ನೀಡಿರುತ್ತದೆ. ಈ ಆದೇಶವನ್ನು ದಿನಾಂಕ 23–12–1993 ರಂದು ಭಾರತ ಸರ್ಕಾರ ಆದೇಶ ಹೊರಡಿಸಿರುತ್ತದೆ.

1993–94 ರಿಂದ 1997–98 ರವರೆಗೆ ವಾರ್ಷಿಕ ತಲಾ ರೂ.100.00 ಲಕ್ಷಗಳಂತೆ ಎಲ್ಲಾ ಸಂಸದ್ ಸದಸ್ಯರಿಗೆ ಅನುದಾನ ಬಿಡುಗಡೆ ಮಾಡಲಾಗುತ್ತಿದ್ದು, 1998–99 ರಿಂದ ಒಂದು ವರ್ಷಕ್ಕೆ ತಲಾ ರೂ. 200.00 ಲಕ್ಷ ಅನುದಾನವನ್ನು ಎರಡು ಕಂತಿನಲ್ಲಿ ಬಿಡುಗಡೆ ಮಾಡಲಾಗುತ್ತದೆ.

ಸಂಸದ್ ಸದಸ್ಯರ ಕ್ಷೇತ್ರಭಿವೃದ್ಧಿ ಯೋಜನಾ ಅಡಿಯಲ್ಲಿ ಶಾಲೆಗಳ, ಲೈಬ್ರರೋಗಳ, ಗಾಸ್ಟೆಲ್‌ಗಳ, ಹಾಸ್ಟೆಲ್‌ಗಳ ಕಟ್ಟಡ, ಕುಡಿಯುವ ನೀರಿನ ವ್ಯವಸ್ಥೆ, ಕೆರೆಗಳ ಅಭಿವೃದ್ಧಿ ರಸ್ತೆಗಳು ಮತ್ತು ಸೇತುವೆಗಳ ನಿರ್ಮಾಣ, ಅರಣ್ಯ ಅಭಿವೃದ್ಧಿ, ಪಾರ್ಕ್‌ಗಳ ಅಭಿವೃದ್ಧಿ, ಪ್ರೌಢಶಾಲೆ, ಕಾಲೇಜುಗಳಿಗೆ ಕಂಪ್ಯೂಟರ್, ಆಡಿಯೋ ವಿಷುಯಲ್‌ಗಳ ಸರಬರಾಜು ಹಾಗೂ ಆರೋಗ್ಯ ಕೇಂದ್ರ, ಪಶುವೈದ್ಯಕೀಯ ಆಸ್ಪತ್ರೆಗಳ ಕಟ್ಟಡ, ಆಸ್ಪತ್ರೆಗಳ ವೈದ್ಯಕೀಯ ಸಾಮಗ್ರಿಗಳು ಉದಾ: ಎಕ್ಸ್‌ರೇ ಯಂತ್ರಗಳು, ಆಂಬುಲೆನ್ಸ್‌ಗಳು ಸರಬರಾಜು ಮಾಡಲು ಹಾಗೂ ದೇಶದಲ್ಲಿ ಹಲವಾರು ಅಭಿವೃದ್ಧಿ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಅವಶ್ಯಕತೆ ಇರುತ್ತದೆ.

ಸದರಿ ಅಭಿವೃದ್ಧಿ ಕಾಮಗಾರಿಗಳು ಸರ್ಕಾರದ ಸಂಸ್ಥೆಗಳಾದ ಪಿ.ಡಬ್ಲ್ಯೂಡಿ, ಗ್ರಾಮೀಣಾಭಿವೃದ್ಧಿ, ನೀರಾವರಿ, ಕೃಷಿ, ಆರೋಗ್ಯ, ಶಿಕ್ಷಣ, ಪ್ರಧಿಕಾರಗಳು, ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ, ಹೌಸಿಂಗ್ ಕಾರ್ಪೋರೇಷನ್ ಮತ್ತು ಇತರೆ ಸರ್ಕಾರೀ ಸಂಸ್ಥೆಗಳಿಂದ ಅನುಷ್ಠಾನಗೊಳಿಸಲು ಆದೇಶ ಇರುತ್ತದೆ. ಸದರಿ ಕಾಮಗಾರಿಗಳು ಕರ್ನಾಟಕ ಪಾರದರ್ಶಕತೆ ಅಧಿನಿಯಮ–2000ರ ನಿಯಮಾವಳಿಗನುಸಾರ ಹಾಗೂ ಪಿ.ಡಬ್ಲ್ಯೂ.ಡಿ ಕೋಡ್‌ನ ಪ್ರಕಾರ ರೂ.1.00ಲಕ್ಷಗಳಿಗಿಂತ ಹೆಚ್ಚಾಗಿರುವ ಅಂದಾಜಿನ ಕಾಮಗರಿಗಳನ್ನು ಟೆಂಡರ್ ಮುಖಾಂತರ ಅನುಷ್ಠಾನಗೋಳಿಸಲಾಗುತ್ತಿದೆ.

ಸಂಸದ್ ಸದಸ್ಯರು ಸೂಚಿಸಿರುವ ಕಾಮಗಾರಿ ಅನಿಷ್ಠಾನಗೊಳಿಸಲು ಸರ್ಕಾರಿ ಸಂಸ್ಥೆಗಳ ತಯಾರಿಸಿ ಸಲ್ಲಿಸಿದ ಅಂದಾಜು ಪಟ್ಟಿಗಳಿಗೆ ಆಡಳಿತಾತ್ಮಕ ಮಂಜೂರಾತಿ ನೀಡಿ, ತದನಂತರ ಶೇ.75 ರಷ್ಟು ಮುಂಗಡವನ್ನು ಬಿಡುಗಡೆ ಮಾಡಿ, ಕಾಮಗಾರಿ ಪೂರ್ಣಗೊಂಡ ನಂತರ ಈ ಇಲಾಖೆಯ ಕ್ಲಾಸ್–1 ಅಫೀಸರ್‌ರೊಬ್ಬರು ತಪಾಸಣೆ ನಡೆಸಿ ಅವರಿಂದ ಬಂದ ನಂತರ ಉಳಿದ ಶೇ.25 ರಷ್ಟು ಅನುದಾನವನ್ನು ಬಿಡುಗಡೆ ಮಾಡಲಾಗುತ್ತಿದೆ.

ಈ ಜಿಲ್ಲೆಯ ವ್ಯಾಪ್ತಿಗೆ ಒಟ್ಟು 04 ಜನ ವಿಧಾನಸಭಾ ಸದಸ್ಯರು, 03 ವಿಧಾನ ಪರಿಷತ್ ಸದಸ್ಯರು, 01 ಲೋಕಸಭಾ ಸದಸ್ಯರು ಹಾಗೂ 02 ರಾಜ್ಯ ಸಭಾ ಸದಸ್ಯರು ಬರುತ್ತಾರೆ.

| ಕ್ರ. ಸಂ | ಲೋಕಸಭಾ ಸದಸ್ಯರು | ಕ್ರ. ಸಂ | ರಾಜ್ಯ ಸಭಾ ಸದಸ್ಯರು |
|---|---|---|---|
| 1 | ಶ್ರೀ ಎಂ.ವೀರಪ್ಪ ಮೊಯ್ಲಿ, ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರ. | 1 | ಶ್ರೀ.ಕೆ.ಬಿ.ಕೃಷ್ಣಮೂರ್ತಿ |
| | | | **ವಿಧಾನ ಪರಿಷತ್ ಸದಸ್ಯರು**<br>1.ಶ್ರೀ ರಾಮಚಂದ್ರಗೌಡ–ಪದವೀಧರ ಕ್ಷೇತ್ರ<br>2.ಶ್ರೀ ರವಿ–ಸ್ಥಳೀಯ ಸಂಸ್ಥೆಗಳ ಕ್ಷೇತ್ರ<br>3.ಶ್ರೀ ಪುಟ್ಟಣ್ಣ – ಉಪಾದ್ಯಾಯರ ಕ್ಷೇತ್ರ |
| **ವಿಧಾನಸಭಾ ಸದಸ್ಯರ ಹೆಸರು** | | **ವಿಧಾನಸಭಾ ಕ್ಷೇತ್ರದ ಹೆಸರು** | |
| 1 | ಶ್ರೀ ಎಂ.ವಿ. ನಾಗರಾಜ್ | 1 | ನೆಲಮಂಗಲ (ಪ.ಜಾ) ವಿಧಾನಸಭಾ ಕ್ಷೇತ್ರ |
| 2 | ಶ್ರೀ ಜೆ.ನರಸಿಂಹಸ್ವಾಮಿ | 2 | ದೊಡ್ಡಬಳ್ಳಾಪುರ ವಿಧಾನಸಭಾ ಕ್ಷೇತ್ರ |
| 3 | ಶ್ರೀ ವೆಂಕಟಸ್ವಾಮಿ | 3 | ದೇವನಹಳ್ಳಿ ವಿಧಾನಸಭಾ ಕ್ಷೇತ್ರ |
| 4 | ಶ್ರೀ ಬಿ.ಎನ್. ಬಚ್ಚೇಗೌಡ | 4 | ಹೊಸಕೋಟೆ ವಿಧಾನಸಭಾ ಕ್ಷೇತ್ರ |

## ಕರ್ನಾಟಕ ಶಾಸಕರ ಪ್ರದೇಶಾಭಿವೃದ್ಧಿ ಯೋಜನೆ

ಕರ್ನಾಟಕ ಶಾಸಕರ ಪ್ರದೇಶಾಭಿವೃದ್ಧಿ ಯೋಜನೆಯಡಿ ಸರ್ಕಾರವು ಎಲ್ಲಾ ಶಾಸಕರಿಗೂ ತಮ್ಮ ತಮ್ಮ ಕ್ಷೇತ್ರ ವ್ಯಾಪ್ತಿಯಲ್ಲಿ ಅಭಿವೃದ್ಧಿ ಕಾಮಗಾರಿಗಳಿಗೆ 2008-09ನೇ ಸಾಲಿನಲ್ಲಿ ಪ್ರತೀ ಶಾಸಕರಿಗೆ ರೂ.50.00ಲಕ್ಷದ ಅನುದಾನ ನಿಗದಿ ಪಡಿಸಲಾಗಿದೆ. ವಿಧಾನ ಪರಿಷತ್ ಸದಸ್ಯರಿಗೆ ತಮ್ಮ ಆಯ್ಕೆಯ ಜಿಲ್ಲೆಯನ್ನು ನೋಡೆಲ್ ಜಿಲ್ಲೆಯನ್ನಾಗಿ ಪರಿಗಣಿಸಿ ಸಂಬಂಧಿಸಿದ ಜಿಲ್ಲಾಧಿಕಾರಿಗಳಿಗೆ ಅನುದಾನ ಬಿಡುಗಡೆ ಮಾಡಲಾಗುತ್ತಿದೆ.

ವಿಧಾನ ಸಭಾ ಸದಸ್ಯರು ತಮ್ಮ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಸದರಿ ಅನುದಾನದಡಿ ಅಭಿವೃದ್ಧಿ ಕಾರ್ಯಗಳನ್ನು ಸಂಬಂಧಿಸಿದ ಜಿಲ್ಲಾಧಿಕಾರಿಗಳ ಮೂಲಕ ಅನುಷ್ಟಾನಗೊಳಿಸ ಬಹುದಾಗಿದ್ದು, ವಿಧಾನ ಪರಿಷತ್ ಸದಸ್ಯರು ರಾಜ್ಯದ ಯಾವ ಭಾಗದಲ್ಲಾದರೂ ಈ ಯೋಜನೆಯಡಿ ಪ್ರಸ್ತಾವನೆ ನೀಡಬಹುದಾಗಿದ್ದು, ಪ್ರಸ್ತಾವನೆ ಸ್ವೀಕೃತಿ ನಂತರ ನೋಡೆಲ್ ಜಿಲ್ಲೆಯ ಜಿಲ್ಲಾಧಿಕಾರಿಗಳು ಸಂಬಂಧಿಸಿದ ಜಿಲ್ಲಾಧಿಕಾರಿಗಳಿಗೆ ಅನುದಾನ ವರ್ಗಾವಣೆ ಮಾಡಬೇಕಾಗುತ್ತದೆ.

ಯೋಜನೆಯ ಅನುಷ್ಠಾನಕ್ಕೆ ಸರ್ಕಾರ ಮಾರ್ಗಸೂಚಿಯನ್ನು ಹೊರಡಿಸಿದ್ದು, ಸರ್ಕಾರದ ಆದೇಶ ಸಂಖ್ಯೆ:ಯೋಇ40ಪಿಎಂಎಂ2005,ದಿನಾಂಕ:16.5.2005ರಂತೆ ಈ ಮಾರ್ಗಸೂಚಿಯನ್ನು ಪರಿಷ್ಕರಿಸಲಾಗಿದ್ದು, ಈ ಯೋಜನೆಯಡಿ ಅನುಷ್ಠಾನಗೊಳಿಸಬಹುದಾದ ಹಾಗೂ ನಿಷಿಧ್ದಗೊಳಿಸಲಾದ ಕಾಮಗಾರಿಗಳ ಬಗ್ಗೆ ವಿವರಗಳನ್ನು ಒದಗಿಸಲಾಗಿದೆ. ಸರ್ಕಾರದ ಶಾಲಾ ಕಾಲೇಜುಗಳ ಎಲ್ಲಾ ರೀತಿಯ ಅಭಿವೃದ್ಧಿ ಕಾಮಗಾರಿಗಳು, ಸಾರ್ವಜನಿಕ ಪಾರ್ಕ್‌ಗೆ ಬೇಲಿ, ಬೆಂಚ್ ಸರ್ಕಾರದ ಶಾಲಾ ಕಾಲೇಜುಗಳ ಎಲ್ಲಾ ರೀತಿಯ ಅಭಿವೃದ್ಧಿ ಕಾಮಗಾರಿಗಳು, ಸಾರ್ವಜನಿಕ ಕುಡಿಯುವ ನೀರಿನ, ವಿದ್ಯುದ್ವೀಪದ ವ್ಯವಸ್ಥೆ ಮುಂತಾದ ಸಾರ್ವಜನಿಕರಿಗೆ ಉಪಯೋಗಬಹುದಾದ ಅಭಿವೃದ್ಧಿ ಕಾರ್ಯಗಳಿಗೆ ಈ ಯೋಜನೆಯಡಿ ಅವಕಾಶವಿರುತ್ತದೆ. ಖಾಸಗಿ ಸಂಸ್ಥೆಗಳು/ ಟ್ರಸ್ಟ್‌ಗಳು ನಡೆಸುವ ಶಾಲೆಗಳ ಹಾಗೂ ಸರ್ಕಾರಿ ಕಟ್ಟಡಗಳ ದುರಸ್ತಿ ಬಗ್ಗೆ ಅವಕಾಶವಿರುವುದಿಲ್ಲ.

ಮಾನ್ಯ ಶಾಸಕರಿಂದ ಪ್ರಸ್ತಾವನೆ ಸ್ವೀಕರಿಸಿದ ನಂತರ ಮಾರ್ಗಸೂಚಿಗಳಡಿ ಸಂಬಂಧಿಸಿದ ಸ್ಥಳೀಯ/ಸರ್ಕಾರಿ ಇಲಾಖೆಗಳಿಂದ (ಉದಾ: ಪಂಚಾಯತ್‌ರಾಜ್ ಇಂಜಿನಿಯರಿಂಗ್, ಬಿ.ಡಬ್ಲ್ಯೂ. ಎಸ್.ಎಸ್.ಬಿ., ಲೋಕೋಪಯೋಗಿ ಇಲಾಖೆ, ಕೊಳಚೆ ನಿರ್ಮೂಲನಾ ಮಂಡಳಿ, ನಿರ್ಮಿತಿ ಕೇಂದ್ರ, ನಗರಸಭೆಗಳು ಹಾಗೂ ಪುರಸಭೆಗಳು–ಮೂಲಕವಾಗಿ) ಕಾಮಗಾರಿಗಳನ್ನು ಅನುಷ್ಠಾನಗೊಳಿಸುವ ಬಗ್ಗೆ ಅಂದಾಜು ಪಟ್ಟಿ ಪಡೆದು, ಸರ್ಕಾರದಿಂದ ಕಾಲಕಾಲಕ್ಕೆ ಬಿಡುಗಡೆಯಾಗುವ ಅನುದಾನದ ಲಭ್ಯತೆಗೊಳಪಟ್ಟು ,ಕರ್ನಾಟಕ ಪಾರದರ್ಶಕ ನಿಯಮಗಳಡಿ ಆಡಳಿತಾತ್ಮಕ ಅನುಮೋದನೆ ನೀಡಲಾಗುವುದು. ಕಾಮಗಾರಿ ಪೂರ್ಣಗೊಂಡ ಬಗ್ಗೆ ದೃಢಪಡಿಸಿಕೊಂಡು, ನಂತರ ಜಿಲ್ಲಾಧಿಕಾರಿಗಳು ನೇಮಿಸುವ ಒಬ್ಬ ಅಧಿಕಾರಿಯಿಂದ ಸ್ಥಳ ಪರಿಶೀಲನೆ ನಡೆಸಿ ಕಾಮಗಾರಿ ಪೂರ್ಣಗೊಂಡ ಬಗ್ಗೆ ದೃಢಪಡಿಸಿಕೊಂಡು

ಅನುಷ್ಠಾನಾಧಿಕಾರಿಗಳಿಗೆ ಅನುದಾನ ಬಿಡುಗಡೆಗೊಳಿಸಲಾಗುವುದು. ಅನುಷ್ಠಾನಾಧಿಕಾರಿಗಳಿಂದ ಬಳಕೆ ಪ್ರಮಾಣ ಪತ್ರ ಪಡೆದು ಸರ್ಕಾರಕ್ಕೆ ಸಲ್ಲಿಸಲಾಗುವುದು.

10. ಗಡಿಪ್ರದೇಶಾಭಿವೃದ್ಧಿ :–

ಸರ್ಕಾರ ಗಡಿ ಅಭಿವೃದ್ದಿಗೆ ವಿಶೇಷ ಆದ್ಯತೆ ನೀಡಿ ಈ ಯೋಜನೆಯನ್ನು ಜಾರಿಗೆ ತಂದಿರುತ್ತದೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಹೊಸಕೋಟೆ ತಾಲ್ಲೂಕಿನ ಕೆಲವು ಗ್ರಾಮಗಳು ತಮಿಳುನಾಡು ಗಡಿಪ್ರದೇಶಕ್ಕೆ ಒಳಪಟ್ಟಿದ್ದು, ಈ ಯೋಜನೆಯ ಪೂರ್ಣ ಪ್ರಯೋಜನವನ್ನು ಹೊಸಕೋಟೆ ತಾಲ್ಲೂಕಿನ ಗಡಿ ಗ್ರಾಮಗಳು ಮಾತ್ರ ಪಡೆಯುತ್ತಿವೆ.

**ಜಿಲ್ಲಾಘಟಕದ ಅಧಿಕಾರಿಗಳ ಮತ್ತು ನೌಕರರ ಮಾಹಿತಿ ಮತ್ತು (ix) ನಿಯಮಗಳಲ್ಲಿ ಉಪಬಂದಿಸಿರುವಂತೆ ನಷ್ಟಪರಿಹಾರದ ಸೇರಿದ ಹಾಗೆ ಅದರ ಪ್ರತಿಯೊಬ್ಬ ಅಧಿಕಾರಿ ಮತ್ತು ನೌಕರರು ಪಡೆಯುವ ಸಂಬಳ ಗೌರವಧನ:–**

**ಬೆಂಗಳೂರು ಗ್ರಾಮಾಂತರ ಜಿಲ್ಲೆ, ಜಿಲ್ಲಾಧಿಕಾರಿಯವರ ಕಛೇರಿಯ ಸಿಬ್ಬಂದಿ ವರ್ಗದವರ ವಿವರ**

| ಕ್ರ.ಮ. ಸಂಖ್ಯೆ | ಅಧಿಕಾರಿ : ನೌಕರರ ಹೆಸರು ಶ್ರೀಯುತರು | ಪದನಾಮ | ವೇತನ ಶ್ರೇಣಿ | ಪಡೆಯುತ್ತಿರುವ ವೇತನ | ದೂರವಾಣಿ ಸಂಖ್ಯೆ |
|---|---|---|---|---|---|
| 1 | 2 | 3 | 4 | 5 | 6 |
| 1 | ಆರ್.ಕೆ.ರಾಜು | ಜಿಲ್ಲಾಧಿಕಾರಿ | 10650–15860 | 41519 | 22867221 |
| 2 | ಕೃಷ್ಣೇಗೌಡ.ಕೆ | ಅಪರ ಜಿಲ್ಲಾಧಿಕಾರಿ | 24450–31800 | 41794 | 22867007 |
| 3 | ಪಿ.ಎಸ್.ಶಿವಪುತ್ರಪ್ಪ | ತಹಶೀಲ್ದಾರ್ ಗ್ರೇಡ್ I | 12000–22650 | 32298 | 22867007 |
| 4 | ಇ.ಶೇಷಾದ್ರಿರೆಡ್ಡಿ | ಉಪ ನಿರ್ದೇಶಕರು, ಭೂದಾಖಲೆಗಳ ಇಲಾಖೆ | 14050–25050 | 18600 | 22867007 |
| 5 | ಎಸ್.ಗಂಗಬೋರಯ್ಯ | ಸಹಾಯಕ ಉಪ ನಿರ್ದೇಶಕರು, ಭೂದಾಖಲೆಗಳ ಇಲಾಖೆ | 10300–20025 | 23905 | 22867007 |
| 6 | ಎಂ.ಯಶೋದ | ಮುನಿಸಿಪಲ್ ತಹಶೀಲ್ದಾರ್ | 12000–22650 | 18350 | 22867007 |
| 7 | ಮಂಜುನಾಂಥ್ | ಚು.ತಹಶೀಲ್ದಾರ್ | 10000–18150 | 16497 | 22867007 |
| 8 | ಮ್ಯಾಗ್ದಾಲಿನ್ ನಳಿನ | ಮುಜರಾಯಿ ತಹಶೀಲ್ದಾರ್ | 11400–21600 | 21432 | 22867007 |
| 9 | ಅನಿಲ್ ಕುಮಾರ್ | ತಹಶೀಲ್ದಾರ್ | 11400–21600 | 30407 | 22867007 |
| 10 | ಭಾರತಿ | ಜೆ.ಹೆಚ್.ಎಂ | 10000–18150 | 17520 | 22867007 |
| 11 | ವಿಜಯಣ್ಣ | ಆರ್.ಹೆಚ್.ಎ | 10000–18150 | 18500 | 22867007 |
| 12 | ಮನೋರಮ.ಕೆ.ಎಂ. | ಆರ್.ಹೆಚ್.ಎಂ | 10000–18150 | 16935 | 22867007 |
| 13 | ವೈ.ಸಿ.ರಾಮಕೃಷ್ಣಯ್ಯ | ಶಿರಸ್ತೆದಾರರು | 10000–18150 | 18400 | 22867007 |
| 14 | ರೇವಣ್ಣ | ಚುನಾವಣಾ ಶಿರಸ್ತೆದಾರರು | 10000–18150 | 26425 | 22867007 |
| 15 | ಬಿ.ಚಲುವರಾಜು | ಲೆಕ್ಕಾಧಿಕಾರಿ | 11400–21600 | 22706 | 22867007 |
| 16 | ರಂಗಶಾಮಯ್ಯ.ವೈ.ಎಲ್ | ಸೂಪರಿಂಟೆಂಡೆಂಟ್ | 10000–18150 | 16639 | 22867007 |
| 20 | ಆರ್.ಗೋವಿಂದರಾಜು | ಶೀಘ್ರಗಾರರು | 8000–14800 | 16349 | 22867007 |
| 21 | ಎಸ್.ಜಿ.ಗುರುಬಸಪ್ಪ ಮಠ | ಪ್ರ.ದ.ಸ | 8000–14800 | 22069 | 22867007 |
| 22 | ಪಿ.ಎನ್.ಸುಬ್ರಮಣ್ಯಂ | ಪ್ರ.ದ.ಸ | 7275–13350 | 18525 | 22867007 |
| 24 | ಡಿ.ಗುಡಿಯಯ್ಯ | ಪ್ರ.ದ.ಸ | 7275–13350 | 22396 | 22867007 |

| | | | | | |
|---|---|---|---|---|---|
| 26 | ನರಸಿಂಹಯ್ಯ | ಪ್ರ.ದ.ಸ | 7275–13350 | 14733 | 22867007 |
| 27 | ಸಿ.ಎನ್.ದೊರೆಸ್ವಾಮಿ | ಪ್ರ.ದ.ಸ | 7275–13350 | 13961 | 22867007 |
| 28 | ಜಿ.ಬಿ.ಚಂದ್ರಶೇಖರ್ | ಪ್ರ.ದ.ಸ | 7275–13350 | 14758 | 22867007 |
| 29 | ಬಿ.ಚಂದ್ರ | ಪ್ರ.ದ.ಸ | 7275–13350 | 18525 | 22867007 |
| 30 | ಎಂ.ಮುನಿಯಪ್ಪ | ಪ್ರ.ದ.ಸ | 7275–13350 | 17520 | 22867007 |
| 31 | ಎಸ್.ಶೇಷಗಿರಿ | ಪ್ರ.ದ.ಸ | 7275–13350 | 12384 | 22867007 |
| 32 | ಸಿ.ವಿ.ಗುಂಡೂರಾವ್ | ಪ್ರ.ದ.ಸ | 7275–13350 | 12384 | 22867007 |
| 33 | ಎನ್.ಆರ್.ಗಾಯಕ್‌ವಾಡ್ | ಪ್ರ.ದ.ಸ | 7275–13350 | 13301 | 22867007 |
| 34 | ಮೈಕಲ್ ಬೆಂಜಿಮಿನ್ | ದ್ವಿ.ದ.ಸ | 6250–12000 | 11797 | 22867007 |
| 35 | ಆರ್.ಸಂಧ್ಯಾ | ದ್ವಿ.ದ.ಸ | 6250–12000 | 12971 | 22867007 |
| 36 | ಸಿ.ಎಸ್.ಜ್ಞಾನೇಶ್ವರಿ | ದ್ವಿ.ದ.ಸ | 5800–10500 | 11728 | 22867007 |
| 37 | ಜೆ.ಕೆ.ಶಶಿಪ್ರಭಾ | ದ್ವಿ.ದ.ಸ | 5800–10500 | 10179 | 22867007 |
| 38 | ಟಿ.ವಿಜಯಲಕ್ಷ್ಮಿ | ದ್ವಿ.ದ.ಸ | 5800–10500 | 11390 | 22867007 |
| 42 | ಷಾಕೀಬ್ ರಹಮಾನ್ | ದ್ವಿ.ದ.ಸ | 5800–10500 | 10179 | 22867007 |
| 44 | ಮಹಮದ್ದ ಅಲಿ | ದ್ವಿ.ದ.ಸ | 5800–10500 | 10876 | 22867007 |
| 40 | ಪಿ.ಕೆ.ವಾಣಿಶ್ರೀ | ದ್ವಿ.ದ.ಸ | 6250–12000 | 12090 | 22867007 |
| 39 | ಎಸ್.ಕೆ.ಮರಿಸ್ವಾಮಿ | ದ್ವಿ.ದ.ಸ | 6250–12000 | 12971 | 22867007 |
| 41 | ಸಿ.ಸಿ.ಲೀಲಾವತಿ | ದ್ವಿ.ದ.ಸ | 6250–12000 | 13046 | 22867007 |
| 43 | ಹೆಚ್.ಎಸ್.ಜರೀನಾ ಬೇಗಂ | ದ್ವಿ.ದ.ಸ | 6250–12000 | 11133 | 22867007 |
| 45 | ಬೌದ್ಧಕಾಂತಿ.ಎಂ | ಬೆರಳಚ್ಚುಗಾರರು | 5200–8200 | 19518 | 22867007 |
| 46 | ಅಸ್ಮತ್ ಉನ್ನೀಸಾ. ಎ | ಬೆರಳಚ್ಚುಗಾರರು | 7275–13350 | 20031 | 22867007 |
| 47 | ಸಿ.ಎಸ್.ಉಮಾ | ಬೆರಳಚ್ಚುಗಾರರು | 5800–10500 | 10564 | 22867007 |
| 48 | ಸಿ.ಪಿ.ಪ್ರೇಮಲತಾ | ಬೆರಳಚ್ಚುಗಾರರು | 5800–10500 | 9645 | 22867007 |
| 49 | ಛಾಯಾದೇವಿ.ಬಿ.ಕೆ | ಬೆರಳಚ್ಚುಗಾರರು | 6250–12000 | 11480 | 22867007 |
| 50 | ಸಿ.ಶಾರದಮ್ಮ | ಬೆರಳಚ್ಚುಗಾರರು | 5800–10500 | 10564 | 22867007 |
| 51 | ಎಸ್.ರವೀಂದ್ರ | ಬೆರಳಚ್ಚುಗಾರರು | 5800–10500 | 10489 | 22867007 |
| 52 | ಸಿ.ಶ್ರೀರಾಮ್ | ಡಿ.ಗ್ರೂಪ್ | 5500–9500 | 13961 | 22867007 |
| 53 | ಎ,ಚಿಕ್ಕಹನುಮಯ್ಯ | ಡಿ.ಗ್ರೂಪ್ | 5200–8200 | 9365 | 22867007 |
| 54 | ಎನ್.ನಾಗರಾಜ | ಡಿ.ಗ್ರೂಪ್ | 5200–8200 | 9188 | 22867007 |
| 55 | ಪಿ.ಕೃಷ್ಣಪ್ಪ | ಡಿ.ಗ್ರೂಪ್ | 5200–8200 | 9372 | 22867007 |
| 56 | ಎಸ್.ಪಿ.ರಾಜಗೋಪಾಲ್ | ಡಿ.ಗ್ರೂಪ್ | 5200–8200 | 12090 | 22867007 |
| 57 | ತಿಪ್ಪೇಸ್ವಾಮಿ.ಕೆ | ಡಿ.ಗ್ರೂಪ್ | 5200–8200 | 10619 | 22867007 |
| 58 | ವಿ.ಬಲರಾಮ್ | ಡಿ.ಗ್ರೂಪ್ | 5200–8200 | 12090 | 22867007 |

| | | | | | |
|---|---|---|---|---|---|
| 59 | ಪುಟ್ಟರಾಮಯ್ಯ | ಡಿ.ಗ್ರೂಪ್ | 4800–7275 | 7244 | 22867007 |
| 60 | ವೆಂಕಟೇಗೌಡ | ಡಿ.ಗ್ರೂಪ್ | 4800–7275 | 7244 | 22867007 |
| 61 | ಎನ್.ಪಾರ್ವತಮ್ಮ | ಡಿ.ಗ್ರೂಪ್ | 4800–7275 | 7831 | 22867007 |
| 62 | ಎಸ್.ಪುಟ್ಟಸ್ವಾಮಿ | ಡಿ.ಗ್ರೂಪ್ | 5200–8200 | 10876 | 22867007 |
| 63 | ಗೌರಿಶಂಕರ್ | ಡಿ.ಗ್ರೂಪ್ | 4800–7275 | 8565 | 22867007 |
| 64 | ಎ.ಎಸ್.ಚಂದ್ರಮ್ಮ | ಡಿ.ಗ್ರೂಪ್ | 4800–7275 | 9005 | 22867007 |
| 65 | ಡಿ.ಕೃಷ್ಣಮೂರ್ತಿ | ಡಿ.ಗ್ರೂಪ್ | 5200–8200 | 13594 | 22867007 |
| 67 | ಬಿ.ವಡ್ಡಗಲ್ಲಯ್ಯ | ಡಿ.ಗ್ರೂಪ್ | 5200–8200 | 11797 | 22867007 |
| 68 | ಡಿ.ಅಮರನಾಥ | ಡಿ.ಗ್ರೂಪ್ | 5200–8200 | 10876 | 22867007 |
| 69 | ಎಸ್.ವಿಜಯ | ಡಿ.ಗ್ರೂಪ್ | 4800–7275 | 7244 | 22867007 |
| 70 | ಗುಣಶೇಖರ್.ಡಿ | ಡ್ರೈವರ್ | 5800–10500 | 15919 | 22867007 |
| 71 | ಡಿ.ಕೃಷ್ಣ | ಡ್ರೈವರ್ | 5800–10500 | 9188 | 22867007 |
| 72 | ಎಂ.ಸಿ.ನಾಗರಾಜ್ | ಡ್ರೈವರ್ | 5800–10500 | 15876 | 22867007 |

**ಎಲ್ಲ ಯೋಜನೆಗಳ ವಿವರಗಳನ್ನು ಸೂಚಿಸಿ, ಅದರ ಪ್ರತಿಯೊಂದು ಏಜೆನ್ಸಿಗೆ ಹಂಚಿಕೆ ಮಾಡಲಾದ ಆಯವ್ಯಯವನ್ನು ಪ್ರಸ್ತಾಪಿತ ವೆಚ್ಚವನ್ನು ಮತ್ತು ಮಾಡಲಾದ ಬಡವಾಡೆಗಳ ಕುರಿತು ವರದಿ:-**

**2008-09ನೇ ಸಾಲಿನ ಆಯವ್ಯದ ಬಗ್ಗೆ ಟಿಪ್ಪಣಿ**

ಬೆಂಗಳೂರು ಗ್ರಾಮಾಂತರ ಜಿಲ್ಲೆಗೆ ಸಂಬಂಧಿಸಿದಂತೆ, 2008-09ನೇ ಸಾಲಿನ ಆಯವ್ಯಯ ಅಂದಾಜುಗಳು ಈ ಕೆಳಕಂಡಂತೆ ಇರುತ್ತದೆ.

(ರೂ. ಲಕ್ಷಗಳಲ್ಲಿ)

| ಕ್ರ.ಸಂ | ಲೆಕ್ಕ ಶೀಷಿಕೆ | ವೇತನ ಅಂದಾಜು | ವೇತನೇತರ ಅಂದಾಜು |
|---|---|---|---|
| 1. | 2053-00-093-1-01<br>ಜಿಲ್ಲಾಧಿಕಾರಿಳ ಕಛೇರಿ | 70.35 | 28.50 |
| 2. | 2053-00-094-1-01<br>ಉಪವಿಭಾಗಾಧಿಕಾರಿಗಳ ಕಛೇರಿ | 25.87 | 6.70 |
| 3. | 2053-00-094-7-01<br>ತಾಲ್ಲೂಕು ಕಛೇರಿಗಳು | 259.80 | 88.25 |
| 4. | 2053-00-094-7-01<br>ನಾಡಕಛೇರಿಗಳು | 30.89 | - |
| 5. | 2070-00-115-1-01<br>ಇತರೆ ಸೇವೆಗಳು | - | 10.20 |
| 6. | 2029-00-101-1-01<br>ಗ್ರಾಮಲೆಕ್ಕಾಧಿಕಾರಿಗಳು | 356.00 | 3.50 |

ಸಾರ್ವಜನಿಕ ಮಾಹಿತಿ ಅಧಿಕಾರಿಗಳ ಹೆಸರುಗಳು, ಪದನಾಮಗಳು ಮತ್ತು ಇತರ ವಿವರಗಳು:-

**ಅಧಿಸೂಚನೆ**

**ಕರ್ನಾಟಕ ಮಾಹಿತಿ ಹಕ್ಕು ಕಾಯ್ದೆ 2005ರ ಕಲಂ 4. (1)(b) ಅನುಸಾರ ಪ್ರಕಟಿಸಬೇಕಾದ ವಿವರಗಳು.**

ಕರ್ನಾಟಕ ಮಾಹಿತಿ ಹಕ್ಕು ಕಾಯ್ದೆ 2005ರ ಕಲಂ 5(1) 5(2) ಮತ್ತು 19(1)ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಕಂದಾಯ ಇಲಾಖೆಗೆ ಸೇರಿದ ಜಿಲ್ಲಾಧಿಕಾರಿಗಳ ಕಛೇರಿಯ ಮಾಹಿತಿಯನ್ನು ಕೋರುವ ವ್ಯಕ್ತಿಗಳಿಗೆ ಅಂತಹ ಮಾಹಿತಿಯನ್ನು ಮೇಲಿನ ಕಾಯ್ದೆಯನ್ವಯ ಒದಗಿಸಲು, ಮಾಹಿತಿ ಕೋರುವ ಅರ್ಜಿಗಳು ಅಥವಾ ಮೇಲ್ಮನವಿಗಳನ್ನು ಸ್ವೀಕರಿಸಲು ಕ್ರಮವಾಗಿ ಸಾರ್ವಜನಿಕ ಮಾಹಿತಿ ಅಧಿಕಾರಿ, ಸಹಾಯಕ ಸಾರ್ವಾಜನಿಕ ಮಾಹಿತಿ ಅಧಿಕಾರಿ ಹಾಗೂ ಮೇಲ್ಮನವಿ ಪ್ರಾಧಿಕಾರಿಗಳನ್ನಾಗಿ ಈ ಕೆಳಕಂಡಂತೆ ಸರ್ಕಾರದಿಂದ ನೇಮಿಸಲಾಗಿದೆ.

| ಕ್ರಮ ಸಂಖ್ಯೆ | ಕಛೇರಿಯ ಹೆಸರು | ಕರ್ನಾಟಕ ಮಾಹಿತಿ ಹಕ್ಕು ಕಾಯ್ದೆ 2005 ಕಲಂ 5(1)ರ ಪ್ರಕಾರ ಸಾರ್ವಜನಿಕ ಮಾಹಿತಿ ಅಧಿಕಾರಿ | ಕರ್ನಾಟಕ ಮಾಹಿತಿ ಹಕ್ಕು ಕಾಯ್ದೆ 2005ರ ಕಲಂ 5(2)ರ ಪ್ರಕಾರ ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿ | ಕರ್ನಾಟಕ ಮಾಹಿತಿ ಹಕ್ಕು ಕಾಯ್ದೆ 2005ರ ಕಲಂ 19(1)ರ ಪ್ರಕಾರ ಮೇನ್ಮನವಿಪ್ರಾಧಿಕಾರಿ |
|---|---|---|---|---|

| | | | | |
|---|---|---|---|---|
| 1. | ಜಿಲ್ಲಾಧಿಕಾರಿ ಹಾಗೂ ಜಿಲ್ಲಾದಂಡಾದಿಕಾರಿಯವರ ಕಛೇರಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಪೋಡಿಯಂ ಬ್ಲಾಕ್, ಡಾ|| ಅಂಬೇಡ್ಕರ್ ರಸ್ತೆ, ಬೆಂಗಳೂರು –560001. | ಶ್ರೀ ಕೆ.ಕೃಷ್ಣೇಗೌಡ ಕೆ.ಎ.ಎಸ್., ಜಿಲ್ಲಾಧಿಕಾರಿಯವರ ಕೇಂದ್ರಸ್ಥಾನಿಕ ಸಹಾಯಕರು, ಜಿಲ್ಲಾಧಿಕಾರಿಯವರ ಕಾರ್ಯಾಲಯ, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು. | ಶ್ರೀ ಪಿ.ಎಸ್.ಶಿವಪುತ್ರಪ್ಪ ಕಛೇರಿ ಸಹಾಯಕರು, ಜಿಲ್ಲಾಧಿಕಾರಿಯವರ ಕಾರ್ಯಾಲಯ ಬೆಂಗಳೂರು (ಗ್ರಾ.) ಜಿಲ್ಲೆ, ಬೆಂಗಳೂರು. | ಶ್ರೀ ಆರ್.ಕೆ.ರಾಜು ಭಾ.ಆ.ಸೇ., ಜಿಲ್ಲಾಧಿಕಾರಿ ಹಾಗೂ ಜಿಲ್ಲಾದಂಡಾಧಿಕಾರಿ ಬೆಂಗಳೂರು (ಗ್ರಾ.) ಜಿಲ್ಲೆ. |

**ನಿರ್ದಿಷ್ಟಪಡಿಸಬಹುದಂತಹ ಇತರ ಮಾಹಿತಿಗಳು :–**

ಕಛೇರಿಯಲ್ಲಿ ಸಾರ್ವಜನಿಕರ ಕುಂದು ಕೊರತರಗಳ ಕೌಂಟರನ್ನು ತೆಗೆಯಲಾಗಿರುತ್ತದೆ ಹಾಗೂ ಸೂಕ್ತ ಹಿಂಬರಹದ ಮೂಲಕ ಸಹ ಅರ್ಜಿದಾರರಿಗೆ ತಿಳಿಸಲಾಗುತ್ತದೆ. ಕರ್ನಾಟಕ ಮಾಹಿತಿ ಹಕ್ಕು ಕಾಯ್ದೆ 2005ರಂತೆ ಜಿಲ್ಲಾಧಿಕಾರಿಯವರ ಕಛೇರಿಯಲ್ಲಿ ಸಕ್ಷಮ ಪ್ರಾಧಿಕಾರವೆಂದು ಘೋಷಿಸ್ಪಟ್ಟಿರುವ ಕಛೇರಿ ಸಹಾಯಕರನ್ನು ಸಹಾಯಕ ಸಾರ್ವಜನಿಕ ಮಾಜಿತಿ (ಸಂಪರ್ಕ) ಅಧಿಕಾರಿ ಎಂದು ಕರೆದು ನಿಯಮಾವಳಿ ರೀತ್ಯ ಕಾರ್ಯನಿರ್ವಹಿಸಲು ಸೂಚಿಸಲಾಗುವುದು.

ಜಿಲ್ಲಾಧಿಕಾರಿಗಳ ಕಛೇರಿಯಲ್ಲಿ ಮಾಹಿತಿ ಕೇಂದ್ರ ತೆರೆದು ಇಲಾಖೆಯಲ್ಲಿ ಆಗಲಿರುವ ಎಲ್ಲಾ ಕಾರ್ಯಗಳ ಅರ್ಜಿ ನಮೂನೆ ಮಂಜೂರಾತಿಗೆ ನೀಡಲಾಗುವ ಕಾಲಾವಧಿ ನಿಗಧಿ ಇತ್ಯಾದಿ ವಿಚಾರಗಳನ್ನು ಸಾರ್ವಜನಿಕರಗೆ ತಿಳಿಸುವಂತಹ ಕಾರ್ಯವನ್ನು ಕೈಗೊಳ್ಳಲಾಗುವುದು.

ಜಿಲ್ಲಾಧಿಕಾರಿಗಳ ಕಛೇರಿಯಲ್ಲಿ ಆಡಳಿತ ನಿರ್ವಹಣೆ ನಿಟ್ಟನಲ್ಲಿ ಜಿಲ್ಲಾ ವೆಬ್‌ಸೈಟ್ ಸೃಷ್ಟಿಸಲು ಮತ್ತು ಕಡತ ಗಳನ್ನು ಕಂಪ್ಯೂಟರ್ ಮೂಲಕವೇ ನಿರ್ವಹಿಸುವಂತಹ ಯೋಜನೆಯನ್ನು ಸರ್ಕಾರದಿಣದ ಅಂಗೀಕೃತ ಪಡೆದು ನಿರ್ವಹಿಸಲಾಗುವುದು ಹಾಗೂ ಜಿಲ್ಲೆಯ ಎಲ್ಲಾ ಕಂದಾಯ ಕಛೇರಿಗಳನ್ನು ಇಂಟರ್ ನೆಟ್ ಸೌಲಭ್ಯ ಅಳವಡಿಸುವ ಸಂಬಂಧ ಸರ್ಕಾರದ ಅನುಮತಿಗಾಗಿ ಕಾಯಲಾಗುತ್ತಿದೆ.

ಸಾರ್ವಜನಿಕರು ದಸ್ತಾವೇಜು ಪ್ರತಿಗಳನ್ನು ಆಧೇಶದ ನಕಲುಗಳನ್ನು ಪಡೆಯಲು ಇಚ್ಚಿಸಿದಲ್ಲಿ ಅರ್ಜಿಯನ್ನು ಕಾರ್ಯಾಲಯದ ಸಕ್ಷಮ ಪ್ರಧಿಕಾರ ಆದ ಕಛೇರಿ ಸಹಾಯಕರಿಗೆ ಸಲ್ಲಿಸಿ ಇದಕ್ಕಾಗಿ ನಿಗದಿಪಡಿಸಿದ ಶುಲ್ಕವನ್ನು ತುಂಬಿ ಗರಿಷ್ಠ 7 ದಿನಗಳ ಒಳಗಾಗಿ ನಕಲು ಪ್ರತಿಗಳನ್ನು ಪಡೆಯುವ ಸೌಲಭ್ಯವನ್ನು ಒದಗಿಸಿರೊಡಲಾಗಿದೆ. ವಹಿಗಳಲ್ಲಿ ನಮೂದಿಸಿ ಸಂಬಂಧಪಟ್ಟ ವಿಷಯ ನಿರ್ವಾಹಕರಿಗೆ ಸ್ವೀಕೃತಿ ಪಡೆದು ಪತ್ರಗಳನ್ನು ನೀಡಲಾಗುವುದು ಹಾಗೂ ಸಾರ್ವಜನಿಕ ಮನವಿ ಬಗ್ಗೆ ಪ್ರತ್ಯೇಕ ಸ್ವೀಕೃತಿ ಪತ್ರವನ್ನು ನೀಡಲಾಗುತ್ತದೆ.

**ಅಪರ ಜಿಲ್ಲಾಧಿಕಾರಿ ಹಾಗೂ ಅಪರ ಜಿಲ್ಲಾದಂಡಾಧಿಕಾರಿ :**

ಜಿಲ್ಲಾಧಿಕಾರಿಯವರ ಕಛೇರಿಯಲ್ಲಿ ಅಪರ ಜಿಲ್ಲಾಧಿಕಾರಿ ಹಾಗೂ ಅಪರ ಜಿಲ್ಲಾದಂಡಾಧಿಕಾರಿ, ಜಿಲ್ಲಾಧಿಕಾರಿಯವರ ಅಧೀನದಲ್ಲಿ ಜಿಲ್ಲಾಧಿಕಾರಿಗಳ ಅಧಿಕಾರ ಮತ್ತು ಕರ್ತವ್ಯನಿರ್ವಹಣೆಯಲ್ಲಿ ತಿರ್ಮಾನ ಕೈಗೊಳ್ಳಲು ಸಹಾಯಕರಾಗಿ ಕಾರ್ಯ ನಿರ್ವಹಿಸುತ್ತಾರೆ. ದಂಡ ಸಂಹಿತೆ ನಿಯಮಾವಳಿ ಅನುಸಾರ ಶಸ್ತ್ರ ನವೀಕರಣ ಪ್ರಾಧಿಕಾರಿಯಾಗಿ ಕೆಲಸ ನಿರ್ವಹಿಸುತ್ತಾರೆ, ಜಿಲ್ಲಾ ಆಡಳಿತದ ವ್ಯವಸ್ಥೆಯಲ್ಲಿ ಜಿಲ್ಲಾಧಿಕಾರಿಗಳ ನಿಯಂತ್ರಣಕ್ಕೆ ಒಳಪಡುವ ಇಲಾಖೆಗಳ ಕೆಲಸ ಕಾರ್ಯಗಳ ಬಗ್ಗೆ ಜಿಲ್ಲಾಧಿಕಾರಿಗಳವರಿಗೆ ಸಹಕರಿಸುತ್ತಾರೆ. ಅಲ್ಲದೆ ಜಮಾಬಂದಿ ಅಧಿಕಾರಿಗಳಾಗಿ ಸಹ ಕೆಲಸ ನಿರ್ವಹಿಸುತ್ತಾರೆ, ಹಾಗೂ ಕಛೇರಿಯ ಸಿಬ್ಬಂದಿ ವರ್ಗದವರ ವೇತನ ಅಧಿಕಾರಿಗಳಾಗಿ ಕಾರ್ಯನಿರ್ವಹಿಸುತ್ತಾರೆ.

**ಉಪ ವಿಭಾಗಾಧಿಕಾರಿ.**

ಜಿಲ್ಲಾಧಿಕಾರಿಗಳವರ ವ್ಯಾಪ್ತಿಯಲ್ಲಿ ಬರುವ ಜಿಲ್ಲಾ ಮಟ್ಟದಲ್ಲಿ ಎರಡು ಉಪವಿಭಾಗಗಳು ಇದ್ದು, ಉಪ ವಿಭಾಗಕ್ಕೆ ಒಬ್ಬರು ಉಪ ವಿಭಾಗಾಧಿಕಾರಿಇದ್ದು. ಉಪ ವಿಭಾಗದಲ್ಲಿರುವ ತಹಶೀಲ್ದಾರರು, ಉಪ ವಿಭಾಗಾಧಿಕಾರಿಗೆ ಅಧೀನ ಅಧಿಕಾರಿಗಳಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಇವರು ಉಪವಿಭಾಗದ ದಂಡಾಧಿಕಾರಿಗಳಾಗಿರುತ್ತಾರೆ. ಇವರು ಸಹ ಜಮಾಬಂದಿ ಮತ್ತು ಕಛೇರಿಗಳ ತನಿಖಾ ಅಧಿಕಾರಿಗಳು ಆಗಿರುತ್ತಾರೆ. ಇವರ ಕೆಳಗಿನ ಅಧಿಕಾರಿಗಳಿಗೆ ಅನುದಾನ ಬಿಡುಗಡೆ ಮಾಡುವ ಮತ್ತು ಸಾದಿಲ್ವಾರು ಬಿಲ್ಲುಗಳಿಗೆ ಮೇಲು ರುಜು ಮಾಡುವ ಅಧಿಕಾರಿಗಳಾಗಿರುತ್ತಾರೆ.

**<u>ಜಿಲ್ಲಾ ಯೋಜನಾಧಿಕಾರಿ:</u>**

ಸ್ವರ್ಣ ಜಯಂತಿ ಶಹರಿ ರೋಜ್‌ಗಾರ್, ಹತ್ತನೇ ಹಣಕಾಸು ಯೋಜನೆ ಹಾಗೂ ಎ.ಡಿ. ಡಿನ್.ಎಂ.ಎ ಈ ಮೇಲ್ಕಂಡ ಯೋಜನೆಗಳ ಅನುಷ್ಠಾನಕ್ಕೆ ಮತ್ತು ಮೇಲ್ವಿಚಾರಣೆ ಬಗ್ಗೆ ಮೇಲ್ಕಂಡ ಅಧಿಕಾರಿಗವರನ್ನು ಜಿಲ್ಲಾಧಿಕಾರಿಗಳ ಕಛೇರಿಯಲ್ಲಿ ಕಆರ್ಯ ನಿರ್ವಹಿಸಲು ನೇಮಿಸಿರುತ್ತಾರೆ.

**<u>ಉಪ ನಿರ್ದೇಶಕರು ಆಹಾರ ಮತ್ತು ನಾಗರೀಕ ಸರಬರಾಜು:</u>**

ಅಗತ್ಯ ವಸ್ತುಗಳ ಕಾಯ್ದೆ ಅಡಿ ನಿಯಂತ್ರಣ ಸರಬರಾಜು ಕಾರ್ಯಗಳಿಗಾಗಿ ಜಿಲ್ಲಾಧಿಕಾರಿಗಳ ಅಧೀನದಲ್ಲಿ ಕಾರ್ಯ ನಿರ್ವಹಿಸುತ್ತಾರೆ. ಬಿ.ಪಿ.ಎಲ್ ಸಮೀಕ್ಷೆ ಕೇಸರಿ ಮತ್ತು ಹಳದಿ ಪಡಿತರ ಚೀಟಿ ವಿತರಣೆ ಹಾಗೂ ನಿರ್ವಹಣೆ ಪಡಿತರ ವಸ್ತುಗಳ ಹಂಚಿಕೆ ಮತ್ತು ವಿತರಣೆ, ಅಗತ್ಯ ವಸ್ತುಗಳ ನಿರ್ಬಂಧ ಕಾಯ್ದೆ ಅಡಿಯಲ್ಲಿ ಬರುವ ಪ್ರಕರಣಗಳು ಹಾಗೂ ಮೇಲ್ಮನವಿಗಳ ಪಡಿತರ ನ್ಯಾಯ ಬೆಲೆ ಅಂಗಡಿಗಳ ಮಂಜೂರಾತಿ/ಪರವಾನಗಿಗಳು ನೀಡುವ ಕರ್ತವ್ಯ ನಿರ್ವಹಿಸುತ್ತಾರೆ ಅಕ್ಷರ ದಾಸೋಹ ಯೋಜನೆಯಡಿಯಲ್ಲಿ ಅಕ್ಕಿ ಹಂಚಿಕೆಯನ್ನು ಸಹ ಮಾಡುತ್ತಾರೆ.

**<u>ಕಛೇರಿ ಸಹಾಯಕರು:</u>**

ಜಿಲ್ಲಾಧಿಕಾರಿಗಳ ಕಛೇರಿಯಲ್ಲಿನ ಕಛೇರಿಯ ಸಹಾಯಕರು ಜಿಲ್ಲಾಧಿಕಾರಿಗಳು ಮತ್ತು ಕೇಂದ್ರ ಸ್ಥಾನಿಕ ಸಹಾಯಕರು ಅಧೀನದಲ್ಲಿ ಅಧಿಕಾರ ಮತ್ತು ಕರ್ತವ್ಯ ನಿರ್ವಹಣೆಯಲ್ಲಿ ಕೆಲಸ ನಿರ್ವಹಿಸುತ್ತಾರೆ ಕಛೇರಿ ಸಹಾಯಕರು ಸಿಬ್ಬಂಧಿ ವರ್ಗದವರ ಎಲ್ಲಾ ವಿಷಯಗಳ ಕಡತಗಳ ಪರಿಶೀಲನೆ ಹಾಗೂ ಆಡಳಿತ ನಿರ್ವಹಣೆಯಲ್ಲಿ ಕಾರ್ಯನಿರ್ವಹಿಸುತ್ತಾರೆ.

**<u>ಚುನಾವಣೆ ತಹಶೀಲ್ದಾರರು</u>**

1997 ರಿಂದ ಹೊಸದಾಗಿ ರಚಿತವಾಗಿರುವ ಎಲ್ಲಾ ಜಿಲ್ಲೆಗಳಲ್ಲಿರುವಂತೆ ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿಯೂ ಚುನಾವಣೆ ತಹಶೀಲ್ದಾರರ ಹುದ್ದೆ ಇರುತ್ತದೆ. ಚುನಾವಣೆ ತಹಶೀಲ್ದಾರ್ ನೇರವಾಗಿ ಜಿಲ್ಲಾಧಿಕಾರಿಗಳ ಹಾಗೂ ಜಿಲ್ಲಾಧಿಕಾರಿಗಳ ಕೇಂದ್ರಸ್ಥನಿಕ ಸಹಾಯಕರು ಅಧೀನದಲ್ಲಿ ಕರ್ತವ್ಯ ನಿರ್ವಹಿಸಿತ್ತಿದ್ದಿ, ಪ್ರತಿ ವರ್ಷ ಮತದಾರರ ಪಟ್ಟಿಗಳ ಪರಿಷ್ಕರಣೆ ಪ್ರಕ್ರಿಯೆ ಹಾಗೂ ರಾಜ್ಯದ ಸ್ಥಳೀಯ ಸಂಸ್ಥೆಗಳ ಮತ್ತು ಕೇಂದ್ರದ ವಿವಿಧ ಚುನಾವಣೆಗಳನ್ನು ನಡೆಸುವಲ್ಲಿ ಸಕ್ರಿಯ ಪತ್ರ ವಹಿಸುತ್ತಾರೆ.

**<u>ಶಿರಸ್ತೇದಾರರು:</u>**

ಜಿಲ್ಲಾಧಿಕಾರಿಗಳ ಕಛೇರಿಯಲ್ಲಿ ಸಿಬ್ಬಂದಿ/ಲೆಕ್ಕಪತ್ರ/ಚಿನಾವಣೆ/ಪುರಸಭೆ/ಕಂದಾಯ/ಕಾನೂನು/ಸ್ವೀಕೃತಿ ಮತ್ತು ರವಾನೆ ಶಾಖೆಗಳಿಗೆ ಶಿರಸ್ತೇದಾರರು ಇರುತ್ತಾರೆ ಅವರಿಗೆ ವಹಿಸಲಾದ ಶಾಖೆಯ ಮೇಲ್ವಿಚಾರಣೆ ಮಾಡುತ್ತಾರೆ. ಒವರಿಗಳು ಕಛೇರಿಯ ಅಧಿಕಾರಿಗಳವರಿಗೆ ಅಧೀನ ಸಿಬ್ಬಂದಿಗಳಾಗಿ ಕಾರ್ಯನಿರ್ವಹಿಸುತ್ತಾರೆ ಹಾಗೂ ನಾಡ ಕಛೇರಿಯಗಳಲ್ಲಿ ಉಪ ತಹಶೀಲ್ದಾರ್‌ರಾಗಿ/ ವ್ಯವಸ್ಥಾಪಕರಾಗಿ ತಾಲ್ಲೂಕು ಪಂಚಾಯಿತಿಗಳಲ್ಲಿ ಹಾಗೂ ಕಂದಾಯ ಇಲಾಖೆಯಲ್ಲಿ ಶಿರಸ್ತೇದಾರರಾಗಿ ಕಾರ್ಯನಿರ್ವಹಿಸುತ್ತಾರೆ.

**ಕಾರ್ಯಾಲಯದ ಸಿಬ್ಬಂದಿಗಳ ಸಂಕಲನ ಕರ್ತವ್ಯ ನಿರ್ವಗಣೆಗಳು ಸಿಬ್ಬಂದಿ ಸಂಕಲನ ನೇಮಕಾತಿ/ಶಿಸ್ತಿನ ಕ್ರಮ ಕಾರ್ಯನಿರ್ವಹಣೆ:**

ಜಿಲ್ಲಾಧಿಕಾರಿಗಳ ವ್ಯಾಪ್ತಿಯಲ್ಲಿ ಬರುವ ಜಿಲ್ಲಾ ಕಂದಾಯ ಯಪ ವಿಭಾಗ, ತಾಲ್ಲೂಕು ಕಾರ್ಯಾಲಯ ಮತ್ತು ನಾಡ ಕಛೇರಿ ಕಾರ್ಯಾಲಯ, ಈ ಕಾರ್ಯಾಲಯಗಳಿಗೆ ಸರ್ಕಾರದಿಂದ ಮಂಜೈರಿ ಸಿ ಮತ್ತು ಡಿ ರ್ವದ ಹುದ್ದೆಗಳಿಗೆ ಕರ್ನಾಟಕ ನಾಗರಿಕ ಸೇವಾ (ಕಂದಾಯ ಅಧೀನ ಸಿಬ್ಬಂದಿ) ನಿಯಮ 1977ರ ಅಡಿಯಲ್ಲಿ ಮಂಜೂರಾದ ಹುದ್ದೆಗಳಗೆ ನೇರ ನೇಮಕಾತಿ, ಪದೋನ್ನತಿ, ತಾತ್ಕಾಲಿಕ ಹುದ್ದೆಗಳಿಗೆ ಸಕ್ರಮೀಕರಣಗೊಳಿಸುವುದು ಮತ್ತು ಜಿಲ್ಲಾ ಆಂತರೀಯ ಕಛೇರಿಗಳಿಗೆ ಸಿಬ್ಬಂದಿಯನ್ನು ವಗಾಯಿಸುವುದು, ನಿವೃತ್ತಿ ವೇತನ ಮಂಜೂರಿ ಮಾಡುವುದು.

ಇತ್ತೀಚಿನ ಸರ್ಕಾರದ ನಿಯಮದಂತೆ ಬೇರೆ ಬೇರೆ ಇಲಾಖೆಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ದಿನಗೂಲಿ ಆಧಾರದ ಮೇರೆಗೆ ನೇಮಕಾತಿ ಮಾಡುಲು ಕ್ರಮಜರುಗಿಸುವುದು.

ಕರ್ನಾಟಕ ಗ್ರಾಮಾಧಿಕಾರಿಗಳ ರದ್ದಿಯಾತಿ ಅಡಿಯಲ್ಲಿ ಮಾಜಿ ಪಟೇಲರುಗಳಗೆ ನಿವೃತ್ತಿ ವೇತನ ಮಂಜೂರು ಮಾಡುವುದು, ಜಿಲ್ಲಾಡಳಿತ ವ್ಯಾಪ್ತಿಯಲ್ಲಿ ಬರುವ ಕಾರ್ಯಾಲಯಗಳಿಗೆ ವರ್ಗಮಾಡಲಾಗುವುದು.

**<u>ಆಡಳತ ಸಂಕಲನ:</u>**

ಜಿಲ್ಲಾ ಆಡಳಿತ ವ್ಯಾಪ್ತಿಯಲ್ಲಿ ಬರುವ ಕೆಲವೊಂದು ಇಲಾಖೆಗಳ ಕಛೇರಿಗಳ ತನಿಖೆ ಮಾಡುವುದು ಮತ್ತು ಜಿಲ್ಲಾ, ತಾಲ್ಲೂಕು, ಮತ್ತು ಗ್ರಾಮಗಳ ವಿಸ್ತರಣೆ ಮಾಡುವುದು, ಜಿಲ್ಲೆಯಲ್ಲಿ ನಡೆಯುವ ಜಿಲ್ಲಾ ಉತ್ಸವ, ರಾಷ್ಟ್ರೀಯ ಹಬ್ಬಗಳು, ಜಿಲ್ಲಾ ಅಭಿವೃದ್ಧಿ ಕಾರ್ಯಕ್ರಮಗಳ ಬಗ್ಗೆ ಜರುಗುವ ಸಭೆ ಸಮಾರಂಭಗಳನ್ನು ನಿರ್ವಹಣೆ ಮಾಡುವುದು, ಅಧಕಾರಿಗಳ ಮಾಸಿಕ ಸಭೆ ಇತರ ಶಿಷ್ಠಾಚಾರಗಳ ಸಭೆ ನಿರ್ವಹಣೆ.

**<u>ನೈಸರ್ಗಿಕ ವಿಕೋಪ:</u>**

ಈ ಶಾಖೆಯಲ್ಲಿ ಪ್ರಕೃತಿಕವಾಗಿ ಉಂಟಾಗುವ ಬರ ಮತ್ತು ಅತಿವೃಷ್ಟಿ ಸಂಭವಿಸಿದಾಗ, ತುರ್ತುರಕ್ಷಣಾತ್ಮಕ ಕ್ರಮಗಳನ್ನು ಜರುಗಿಸಲಾಗುವುದು. ಬರಗಾಲ ಉಂಟಾದಾಗ ಕಾಮಗಾರಿಗಳನ್ನು ತೆಗೆದುಕೊಂಡು ಕೃಷಿಕರು ಪೂರೈಕೆಗಾಗಿ ಕ್ರಮ ಕೈಗೊಳ್ಳುವುದು. ಅತಿವೃಷ್ಟಿ ಆದಾಗ ತುರ್ತು ರಕ್ಷಣಾ ಕ್ರಮಗಳನ್ನು ಕೈಗೊಳ್ಳಗಾವುದು. ನಷ್ಟ ಸಂಬಧಿಸಿದವರಗೆ ಪರಿಹಾರ ಸೌಲಭ್ಯ ಒದಗಿಸುವುದು. ಆಕಸ್ಮಿಕ ಬೆಂಕಿ ಅಥವಾ ಭೂಕಂಪ ಮತ್ತು ಅಪಘಾತಗಳು ಹಾಗೂ ಸಿಡಿಲು ಬಡಿದು ಮೃತಪಟ್ಟುರುವವರ ಕುಟುಂಬಗಳಿಗೆ ಪರುಹಾರ ನೀಡಲಾಗುವುದು.

**<u>ಭೂ ಮಂಜೂರಾತಿ:</u>**

ಈ ಶಾಖೆಯಲ್ಲಿ ಲಭ್ಯವಿರುವ ಸರ್ಕಾರಿ ಜಮೀನನ್ನು ಕೃಷಿಗೆ ಯೋಗ್ಯವಾದ ಜಮೀನನ್ನು ಭೈ ರಹಿತರಿಗೆ ಹಂಚುವುದು ಹಾಗೂ ಇನ್ನಿತರೆ ಉದ್ದೇಶಗಳಿಗೆ ಭೂ ಮಂಜೂರಾತಿ ಮಾಡುವುದು ನದಿ, ನಾಲಾಗಳ ಲಕ್ಷಣೆ ಮಾಡುವುದು. ಸ್ಮಶಾನಗಳಿಗಾಗಿ/ದನಗಳು ವೇಯಲು ಗೋಮಾಳಕ್ಕಾಗಿ ಭೂಮಿ ಕಾಯ್ದಿರಿಸುವುದು, ಭೂ ಮಂಜೂರಾತಿ ಪ್ರಕರಣಗಳಲ್ಲಿ ಪ.ಜಾ/ಪ.ಪಂ ಗಳ ಜನರಿಗೆ ಮಂಜೂರಾದ ಜಮೀನುಗಳನ್ನು ನಿಯಮ ಉಲ್ಲಂಘನೆ ಮಾಡಿ ಮಾರಾಡ ಮಾಡಿರುವುದನ್ನು ರದ್ದು ಪಡಿಸುವುದು, ಸರ್ಕಾರಿ ಜನಧಿಕೃತ ಅತಿಕ್ರಮಣ ಮಾಡುರುವುದನ್ನು ಕ್ರಮ ಜರುಗಿಸಿ ತೆರವುಗೊಳಿಸಲಾಗುವುದು.

**<u>ಭೂ ಸ್ವಾಧೀನ:</u>**

ಸಾರ್ವಜನಿಕ ಕಟ್ಟಡ, ನೀರಾವರಿ ಯೋಜನೆಗಳು, ಸೇತುವೆಗಳು, ವಿದ್ಯುತ್ ಪ್ರಸರಣ ನಿಯಮ, ಮತ್ತು ವಸತಿ ಯೋಜನೆ ಇತ್ಯಾಧಿ ಸಾರ್ವಜನಿಕ ಉಪಯುಕ್ತತೆಗಳಿಗೆ ಪಟ್ಟಾಭೂಮಿಗಳನ್ನು ಭೂ ಸ್ವಾಧೀನ ಪಡಿಸಿಕೊಳ್ಳುವುದು ಸರಕಾರೇತರ ಪಸರಾಧಿಕಾರಗಳು ಸಂಘ ಸಂಸ್ಥೆಗಳು ಇತರೆ ಯಾವುದೇ ಪ್ರಾಧಿಕಾರವು ಭೂ ಸ್ವಾಧೀನವನ್ನು ಅಪೇಕ್ಷಿಸಿದಲ್ಲಿ ಭೂ ಕೋರಿಕೆ ಮೇರೆಗೆ ಭೂ ಸ್ವಾಧೀವಕ್ಕಾಗಿ ತಗಲುವ ಪೂರ್ಣ ಭೂ ಸ್ವಾಧೀನವನ್ನು ಅಪೇಕ್ಷಿಸಿದಲ್ಲಿ ಭೂ ಕೋರಿಕೆ ಮೇರೆಹೆ ಭೂ ಸ್ವಾಧೀನಕ್ಕಾಗಿ ತಗಲುವ ಪೂರ್ಣ ಭೂ ಸ್ವಾಧೀನ ವೆಚ್ಚವನ್ನು ಭರಿಸಿಕೊಂಡು, ಭೂ ಸ್ವಾಧಿನ ಪಡಿಸಿಕೊಳ್ಳುವುದು ಮತ್ತು ಪರಿಹಾರ ಧನ ನೀಡುವುದು. ಅವಾರ್ಡ್ ಕರಡು ತೀರ್ಪನ್ನು ರೂ.50-00ಲಕಷದವರೆಗೆ ಈ ತೀರ್ಪನ್ನು ಅನುಮೋದಿಸುವ ಅಧಿಕಾರ ಜಿಲ್ಲಾಧಿಕಾರಿಗಳಿಗೆ ಇರುತ್ತದೆ.

**<u>ಭೂ ಸುಧಾರಣೆ:</u>**

ಕರ್ನಾಟಕ ಭೂ ಸುಧಾರಣೆ ಕಾಯ್ದೆ 1961 ರಲ್ಲಿ ಅವಕಾಶವಿದ್ದಂತೆ ಕಲಂ 66 ರಡಿಯಲ್ಲಿ ಎಲ್ಲಾ ಭೂ ಮಾಲೀಕರಿಂದ ಭೂ ಹಿಡುವಳಿಯ ಘೋಷಣೆ ಪಡೆಯುವುದು, ಕಲಂ 38ರ ಅಡಿಯಲ್ಲಿ ವಸತಿ ನಿರ್ಮಾಣ ಮಾಡಿದ ಜಮೀನನ್ನು ಮಂಜೂರು ಮಾಡುವುದು ಕಲಂ 78 ರಡಿಯಲ್ಲಿ ಹೆಚ್ಚುವರಿ ಜಮೀನನ್ನು ಭೂ ರಹಿತರಿಗೆ ಮಂಜೂರಿ ಮಾಡುವ ಕೆಲಸದ ಮೇಲ್ವಿಚಾರಣೆ 78ರಡಿಯಲ್ಲಿ ಗೇಣಿ ಭೂಮಿಯನ್ನು ಮಂಜೂರಿ ಮಾಡುವುದು, ಘೋಷಣೆ ಮಾಡುವುದು ಮಾರಾಟ ಮಾಡಿದ ಕೃಷಿಯೇತರ ಕಾರ್ಯಗಳಿಗೆ ಉಪಯೋಗ ಮಾಡಿದ ಮತ್ತು ಹಿಡುವಳಿಯನ್ನು ಉಲ್ಲಂಘನೆಮಾಡಿ ಮಾರಾಟ ಮಾಡಿದ ಜಮೀನುಗಳನ್ನು ಸರ್ಕಾರದ ವಶಕ್ಕೆ

ತೆಗೆದುಕೊಳ್ಳುವುದು ಮಾಜಿ ಭೂ ಮಾಲೀಕರಿಗೆ ಪರಿಹಾರ ಧನ ಮಂಜೂರಾತಿ ಪ್ರಕ್ರಿಯೆ ಮೇಲ್ವಿಚಾರಣೆ ಸಂಘ ಸಂಸ್ಥೆಗಳಿಗೆ ನಿರ್ವಹಣೆಗಾಗಿ ಬೇಕಾಗುವ ಜಮೀನ್ನು ನಿರ್ಣಯಿಸುವುದು.

ಕರ್ನಾಟಕ ಭೂಸುಧಾರಣೆ ಕಾಯ್ದೆ 1961 ಕಲಂ 109ರಡಿ ಸಂಘ ಸಂಸ್ಥೆಗಳು ಜಮೀನು ಹೊಂದಬೇಕಾಗಿದ್ದಲ್ಲಿ ಸರ್ಕಾರದ ಸುತ್ತೋಲೆ ಸಂಖ್ಯೆ : ಸಂವ್ಯಶಾಇ 47 ಶಾಸನ 2001 ದಿನಾಂಕ 23–04–2003ರಂತೆ ಅನುಮತಿ ಪಡೆಯಬೇಕಾಗಿರುತ್ತದೆ. 2 ಯುನಿಟ್‌ವರೆಗೆ ವಿದ್ಯಾಸಂಸ್ಥೆಗಳಿಗೆ, 10 ಯುನಿಟ್‌ವರೆಗೆ ಕೈಗಾರಿಕಾ ಉದ್ದೇಶಕ್ಕೆ, 1/4 ಯುನಿಟ್‌ವರೆಗೆ ಮಾನ್ಯತೆ ಪಡೆದ ಅಥವಾ ನೋಂದಾಯಿತ ಪೂಜಾ ಸ್ಥಳಕ್ಕೆ, ವ್ಯಾಸಾಯೇತರ ಉದ್ದೇಶಕ್ಕೆ ರಾಜ್ಯ ಸರ್ಕಾರದ ವಸತಿ ಯೋಜನೆಗಳಿಗೆ 10 ಯುನಿಟ್‌ವರೆಗೆ ಹಾಗೂ ಪುಷ್ಪಗಾರಿಕೆ, ತೋಟಗಾರಿಕೆ ಮತ್ತು ಆಗ್ರೋಇಂಡಸ್ಟ್ರೀಸ್‌ಗಳಿಗೆ 10 ಯುನಿಟ್‌ಗಳವರೆಗೆ ಜಮೀನು ಖರೀದಿಸಲು ಅನುಮತಿಯನ್ನು ಜಿಲ್ಲಾಧಿಕಾರಿಗಳಿಂದ ಪಡೆಯಬೇಕಾಗಿರುತ್ತದೆ. ಮೇಲ್ಕಂಡ ಮಿತಿಗಿಂತ ಹೆಚ್ಚು ಜಮೀನು ಖರೀದಿಸಲು ಬರುವ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಒಪ್ಪಿಸಲಾಗುತ್ತದೆ. 2.00 ಲಕ್ಷ ವಾರ್ಷಿಕ ಆದಾಯದ ಮಿತಿಯುಳ್ಳವರಿಗೆ ಕರ್ನಾಟಕ ಭೂ ಸುಧಾರಣೆ ಕಾಯಿದೆ ಕಲಂ 80ರಡಿ ವೈಯಕ್ತಿಕವಾಗಿ ಜಮೀನು ಖರೀದಿಸಲು ಉಪವಿಭಾಗಾಧಿಕಾರಿಗಳಿಂದ ಅನುಮತಿ ಪಡೆಯಬೇಕಾಗಿರುತ್ತದೆ. ಕಲಂ 79 ಎ ಮತ್ತು 79 ಬಿ ಉಲ್ಲಂಘಿಸಿದ ಜಮೀನುಗಳನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲಾಗುವುದು.

**<u>ಬೇಡಿಕೆ ವಸೂಲಿ ಬಾಕಿ (ಡಿ.ಸಿ.ಬಿ)</u>**

ಕೃಷಿಜಮೀನುಗಳ ಹಿಡುವಳಿಗಳ ಮೇಲೆ ನಿಗಧಿಪಡಿಸಿದ ಕಂದಾಯ ನೀರಾವರಿ ಕರ ಮತ್ತು ಇತರೆ ಕಂದಾಯಗಳ ಬೇಡಿಕೆಪಟ್ಟಿ ತಯಾರಿಸುವುದು ವಸೂಲಿ ಮತ್ತು ಬಾಕಿಗಳ ನಿರ್ವಹಣೆ ಕೈಗೊಳ್ಳುವುದು. ಸರ್ಕಾರದ ಇತರೆ ಇಲಾಖೆಗಳಿಂದ ವಸೂಲಿ ಮಾಡದೆ ಇರುವ ತೆರಿಗೆಗಳ ಬಾಕಿಗಳು ಮತ್ತು ಸಾಲಗಳನ್ನು ಬಾಕಿ ಇರುವ ಮೊತ್ತವನ್ನು ಭೂ ಕಂದಾಯ ಬಾಕಿ ಎಂದು ಪರಿವರ್ತಿಸಿ ವಸೂಲಿ ಕ್ರಮ ಜರುಗಿಸುವುದು.

**<u>ವಿಫಲಭಾವಿ ಪರಿಹಾರ:</u>**

ಸರ್ಕಾರದಿಂದ ಸಣ್ಣ ಮತ್ತು ಅತಿ ಸಣ್ಣ ರೈತರಿಗೆ ನೀರಾವಿ ಸೌಲಭ್ಯಕ್ಕಾಗಿ ತೊಡಗಿಸಿದ ತೆರೆದ ಭಾವಿಗಳ ಮತ್ತು ಕೊಳವೆ ಭಾವಿಗಳು ವಿಫಲವಾದಲ್ಲಿ ಸಂತ್ರಸ್ಥರಿಗೆ ವಿಫಲಭಾವಿಗೆ ಜಲುತ್ಪತ್ತಿ ವಿಫಲ ಪರಿಹಾರ ಮಂಜೂರು ಮಾಡುವುದು.

**<u>ಗಣಿಗಾರಿಕೆ:</u>**

ಸರ್ಕಾರದ ಕೃಷಿಯೇತರ ಹಾಗೂ ಬೇರೆ ಜಮೀನುಗಳಲ್ಲಿ ನಡೆಯುವ ಗಣಿಗಾರಿಕೆಗೆ ಅನುಮತಿ ನೀಡುವ ಬಗ್ಗೆ ಗಣಿ ಮತ್ತು ಭೂ ವಿಜ್ಞಾನ ಇಲಾಖೆಗೆ ಅಭಿಪ್ರಯ ಸಲ್ಲಿಸುವುದು.

**<u>ಜಮಾಬಂದಿ:</u>**

ಎಲ್ಲಾ ಕಂದಾಯ ಗ್ರಾಮಗಳ ಜಮೀನುಗಳಗೆ ಸಂಬಂಧಿಸಿದಂತೆ ವಾರ್ಷಿಕ ಕಂದಾಯ ನಿಗಧಿ ವಸೂಲಾತಿ ಮತ್ತು ಬಾಕಿ ವಿವರಗಳನ್ನೊಳಗೊಂಡಂತೆ ಹಾಗೂ ಭೂ ಕಂದಾಯ ಮನ್ನಾ ಮಾಡಲಾಗಿರುವ ಮತ್ತು ಸರ್ಕಾರಿ ಜಮೀನುಗಳ ವಿವರಗಳನ್ನೊಳಗೊಂಡಂತೆ ವಾರ್ಷಿಕ ಜಮಾ ಬಂದಿ, ತಾಲ್ಲೂಕು ಜಮಾ ಬಂದಿ ಆಯಾ ಆಯಾ ತಹಶೀಲ್ದಾರ್‌ಗಳು ಮತ್ತು ಹುಜೂರ್ ಲೆಕ್ಕವನ್ನು ಜಿಲ್ಲೆಯ ಜಿಲ್ಲಾಧಿಕಾರಿಗಳು ಮತ್ತು ಅವರಿಂದ ನಿಯೋಜಿಸಲ್ಪಟ್ಟ ಅಧಿಕಾರಿಗಳು ಜಮಾ ಬಂದಿ ಕಾರ್ಯವನ್ನು ನಿರ್ವಹಿಸಲಾಗುತ್ತಿದೆ.

**<u>ಕಾನೂನು ವಿಭಾಗ:</u>**

ಜಿಲ್ಲಾವ್ಯಾಪ್ತಿಯಲ್ಲಿ ಜಿಲ್ಲಾಧಿಕಾರಿಗಳು ಜಿಲ್ಲಾದಂಡಾಧಿಕಾರಿಗಳಾಗಿದ್ದು, ಅವರ ಅಧೀನದಲ್ಲಿ ಬರುವ ಕೇಂದ್ರಸ್ಥಾನಿಕ ಸಹಾಯಕರು ಹೆಚ್ಚುವರಿ ದಂಢಾಧಿಕಾರಿಗಳಾಗಿ ಕೆಲಸ ನಿರ್ವಹಿಸುತ್ತಿದ್ದಾರೆ. ಇವರ ಕಾರ್ಯ ನಿರ್ವಹಣೆಗೆ ಮತ್ತು ಕಾನೂನು ಮತ್ತು ಸುವ್ಯವಸ್ಥೆ ಪಾಲನೆ ಮತ್ತು ಯಾರಾದರೂ ಗಣ್ಯವ್ಯಕ್ತಿಗಳು ಬಂದಲ್ಲಿ ಅವರಿಗೆ ಬಂದೀಬಸ್ತ್ ಅನುಕೂಲತೆ ನೀಡಿ ವಾಹನವನ್ನು ಒದಗಿಸುವುದು ಹಾಗೂ ಖಾಸಗಿ ಜನರಿಗೆ ಶಸ್ತ್ರಾಸ್ತ್ರ ಮಂಜೂರು ಮನರಂಜನ ಕಾರ್ಯಕ್ರಮಗಳು ಚಲನ ಚಿತ್ರಗಳಿಗೆ ನಾಟಕ, ಸರ್ಕಸ್ಸು ಇತರೆ ಸಾಂಸ್ಕೃತಿಕ ಚಟುವಟಿಕೆಗಳಿಗೆ ಅನಿಮತಿ ನೀಡುವುದು ಅಸ್ಪೃಷ್ಯತೆ ಕಾನೂನು ಪಾಲನೆ, ಮಹಿಳಾ ದೌರ್ಜನ್ಯ ವಾಹನಗಳಿಂದ ಅಪಘಾತವಾದವರಿಗೆ ಪರಿಹಾರ ನೀಡುಲಾಗುತ್ತದೆ.

**<u>ವಸತಿ ಯೋಜನೆ:</u>**

ಸರ್ಕಾರದ ವಸತಿ ಯೋಜನೆಗಳಾದ ಆಶ್ರಯ, ಅಂಬೇಡ್ಕರ್, ಇಂದಿರಾ ಆವಾಜ್ ಯೋಜನೆಯಡಿ ವಸತಿ ಹೀನರಿಗೆ ಮತ್ತು ಅವರಿಗೆ ವಸತಿ ನಿರ್ಮಾಣಗಳನ್ನು ಮಾಡುವುದು ನಿವೇಶನಗಳಿಗಾಗಿ ಅರ್ಹವಿರುವ ಭೂಮಿಯನ್ನು ಭೂಸ್ವಾಧೀನ ಮೂಲಕವಾಗಲೀ ಹಾಗೂ ಮಂಜೂರಾತಿ ಮೂಲಕವಾಗಲೀ ಕ್ರಮ ಜರುಗಿಸಲಾಗುತ್ತದೆ.

**<u>ಪಹಣಿ ಹಕ್ಕು ದಾಖಲೆ : ಭೂಮಿ</u>**

ಕರ್ನಾಟಕ ಭೂ ಕಂದಾಯ ಕಾಯ್ದೆ ಅಡಿಯಲ್ಲಿ ಪಟ್ಟ ಜಮೀನುಗಳಲ್ಲಿ ಹಕ್ಕು ದಾಖಲೆಗಳ ವರ್ಗ ಮಾರಾಡ ಇತ್ಯಾಧಿ ಬದಲಾವಣೆಗಳ ನಿರ್ವಹಣೆ, ವರ್ಗಾವಣೆಯಲ್ಲಿ ಆದ ಲೋಪದೋಷಗಳನ್ನು ವಿಚಾರಣೆ ಮತ್ತು ನ್ಯಾಯಾಂಗ ಪರಿಶೀಲನೆ, ನ್ಯಾಯಾಲಯಗಳಿಂದ ಡಿಕ್ರಿಗಳ ಆದೇಶಗಳನ್ನು ದಾಖಲೆಗಳಲ್ಲಿ ಸೇರ್ಪಡೆ ಮಾಡುವುದು ಮತ್ತು ಹಕ್ಕು ದಾಖಲೆಗಳನ್ನು ಗಣಕೀಕರಣಗಳ ಮೂಲಕ ಸಾರ್ವಜನಿಕರಿಂದ ರೂ.15–00 ಗಳನ್ನು ಪಡೆದು ಪಹಣಿಗಳನ್ನು ವಿತರಿಸಲಾಗುವುದು ಮತ್ತು ಮೇಲ್ವಿಚಾರಣೆ ಮಾಡಲಾಗುವುದು.

**<u>ದೇವಸ್ಥಾನ / ವಕ್ಫ್:</u>**

ಧಾರ್ಮಿಕ ಮತ್ತು ದತ್ತಿ ಇಲಾಖೆಯ ಆಡಳಿತ ವ್ಯಾಪ್ತಿಯಲ್ಲಿ ಬರುವ ಎಲ್ಲಾ ದೇವಸ್ಥಾನಗಳ ಕಾರ್ಯ ನಿರ್ವಹಣೆ ಮತ್ತು ಟ್ರಸ್ಟ್ ನೇಮಕಾರಿ ಮಾಡುವುದು ಇಲಾಖೆಉ ವ್ಯಾಪ್ತಿಯಲ್ಲಿ ಬರುವ ದೇವಸ್ಥಾನಗಳ ಜಾತ್ರೆ ಉತ್ಸವಗಳನ್ನು ನಡೆಸುವುದು. ಆರಾಧನ ಸಾಮಾನ್ಯ ಯೋಜನೆ ಅಡಿಯಲ್ಲಿ ದೇವಸ್ಥಾನಗಳ ಜೀರ್ಣೋದ್ಧರ ಸಂಬಂಧ ಅನುದಾನ ಮಂಜೂರು ಮಾಡುವುದು ಅದಕ್ಕೆ ಹಣ ಬಳಕೆ ಪ್ರಮಾಣ ಪತ್ರಗಳನ್ನು ಪಡೆದು ಸರ್ಕಾರಕ್ಕೆ ಸಲ್ಲಿಸುವುದು ಹಾಗೂ ಅಭಿವೃದ್ಧಿ ಕಾಮಗಾರಿಗಳ ನಿರ್ವಹಣೆ, ತಸ್ತಿಕ್ ಭತ್ಯೆ ವರ್ಷಾಸನಗಳ ಮಂಜೂರಿ ಮಾಡಲಾಗುತ್ತದೆ.

**<u>ಲೆಕ್ಕ ಪತ್ರ:</u>**

ಜಿಲ್ಲೆಯ ಎಲ್ಲಾಅಧೀನ ಕಾರ್ಯಾಲಯಗಳ ವಾರ್ಷಿಕ ಅಂದಾಜು ಮತ್ತು ಖರ್ಚುಗಳ ವ್ಯವಹಾರಗಳ ನಿರ್ವಹಣೆ ಜಿಲ್ಲಾಧಿಕಾರಿಗಳ ಕಾರ್ಯಾಲಯದ ಸಿಬ್ಬಂದಿ ವೇತನ ಪ್ರವಾಸ ಭತ್ಯೆ, ಸಾದಿಲ್ವಾರು ವೆಚ್ಚ ವಾಹನಗಳ ಇಂಧನ ಮತ್ತು ದುರಸ್ತಿ ವೆಚ್ಚ ಇತರೆ ಸಾಂಸ್ಕೃತಿಕ ಕಾರ್ಯಕ್ರಮಗಳಿಗಾಗಿ ಖರ್ಚುಮಾಡುವ ಬಿಲ್ಲುಗಳ ತಯಾರಿಕೆ ಮತ್ತು ಬಟವಾಡೆ ಅವಧಿ ಮೀರಿದ ಬಿಲ್ಲುಗಳ ಖರ್ಚಿನ ವಿಳಂಬ ಮಂಜೂರು ಮಾಡುವುದು.

**<u>ನಗರಸಭೆ/ಪುರಸಭೆ:</u>**

ಜಿಲ್ಲಾ ವ್ಯಾಪ್ತಿಯಲ್ಲಿ ಬರುವ ನಗರಸಭೆ, ಪುರಸಭೆ, ಪಟ್ಟಣ ಪಂಚಾಯ್ತಿಗಳ ಆಡಳಿತ ನಿರ್ವಹಣೆ ಇವುಗಳ ತಪಾಸಣೆ ಹಾಗೂ ಇವುಗಳ ವ್ಯಾಪ್ತಿಯಲ್ಲಿ ಬರುವ ಕಾನೂನು ಸುವ್ಯವಸ್ಥೆ ಯೋಜನೆಗಳ ಕಾಮಗಾರಿಗಳ ಮಂಜೂರಿ ಎಸ್‌ಜಿಎಸ್‌ಆರ್‌ವೈ ಯೋಜನೆ ಸಂಪೂರ್ಣ ಅನುಷ್ಠಾನಗೊಳಿಸುವುದು ಹಾಗೂ ಹೇನರಿಗೆ ವಸತಿ ಕಲ್ಪಿಸಲಾಗುತ್ತದೆ.

**<u>ಎಂ.ಪಿ. ಲ್ಯಾಡ್: ಎಂ.ಎಲ್ ಎ : ಎಂ ಎಲ್ ಸಿ ಲ್ಯಾಡ್:</u>**

ಕೇಂದ್ರ ಸರ್ಕಾರದಿಂದ ಬರುವ ಲೋಕಸಭಾ ಸದಸ್ಯರ ಅನುದಾನ ಹಾಗೂ ರಾಜ್ಯ ಸರ್ಕಾರದಿಂದ ವಿಧಾನಸಭಾ ಸದಸ್ಯರ :ವಿಧಾನ ಪರಿಷತ್ ಅನುದಾನವು ಬಿಡುಗಡೆಯಾಗುತ್ತಿದ್ದು, ಅಭಿವೃದ್ಧಿ ಕಾರ್ಯಕ್ರಮಗಳನ್ನು ರೂಪಿಸಲು ಅವುಗಳಿಗೆ ಸಂಬಂಧಿಸಿದ ಕಾಮಗಾರಿಗಳಿಗೆ ಅನುಮತಿ ಪಡೆದು ಅವುಗಳನ್ನು ಕಾರ್ಯಗತಗೊಳಿಸಲಾಗುವುದು.

**<u>ಇನಾಂ:</u>**

ಇನಾಂ ರದ್ದತಿ ಕಾಯ್ದೆ ಅಡಿಯಲ್ಲಿ ಸರ್ಕಾರದ ಸ್ವಾಧಿನದಲ್ಲಿರುವ ಜಮೀನುಗಳನ್ನು ಇನಾಂದಾರರು/ಗೇಣಿದಾರರು ಮತ್ತು ಇತರೆ ಅಪೇಕ್ಷಿತರಿಂದ ಬಂದಂತಹ ಅರ್ಜಿಗಳನ್ನು ವಿಚಾರಣೆ ಮಾಡಿ ಅರ್ಹಫಲಾನುಭವಿಗಳಿಗೆ ಮಂಜೂರಾತಿ ನೀಡುವುದು.

**<u>ಚುನಾವಣೆ:</u>**

ಕೇಂದ್ರ ಚುನಾವಣಾ ಆಯೋಗದಿಂದ ನಿಗದಿ ಪಡಿಸಿದ ಲೋಕಸಭೆ ಚುನಾಚಣೆ ಮತ್ತು ವಿಧಾನ ಸಭೆ ಚುನಾವಣೆ ಹಾಗೂ ಸರ್ಕಾರದ ಸ್ಥಳೀಯ ಚುನಾವಣೆಗಳಾದ ಜಿಲ್ಲಾ : ತಾಲ್ಲೂಕು : ಗ್ರಾಮ ಪಂಚಾಯಿತಿಗಳು ಹಾಗೂ ನಗರಸಭೆ : ಪುರಸಭೆ : ಪಟ್ಟಣ ಪಂಚಾಯ್ತಿಗಳ ಚುನಾವಣೆ ಕಾರ್ಯಸೂಚಿ ಪ್ರಕಾರ ಚುನಾವಣೆ ಕಾರ್ಯ ಕ್ರಮಗಳನ್ನು ರೂಪಿಸುವುದು, ಚುನಾವಣೆಗೆ ಸಂಬಂಧಿಸಿದ ವ್ಯವಹಾರಗಳ ನಿರ್ವಹಣೆ ಮತ್ತು ಮತದಾರರಿಗೆ ಮತದಾರರ ಗುರ್ತಿನ ಚೀಟಿ ನೀಡುವುದು ಹಾಗೂ ಮತದಾರರ ಪಟ್ಟಿಗಳ ನಿರ್ವಹಣೆ.

**ಪಿ.ಜಿ.ಸಿ:**

ಜಿಲ್ಲಾಧಿಕಾರಿಗಳ ಅಧೀನದಲ್ಲಿ ಬರುವ ಎಲ್ಲಾ ಕಛೇರಿಗಳಲ್ಲಿ ಸಾರ್ವಜನಿಕರ ಕುಂದು ಕೊರತೆಗಳ ಬಗ್ಗೆ ಒಂದು ಸೆಲ್ ತೆರೆಯಲಾಗಿದ್ದು ಈ ವಿಷಯದಲ್ಲಿ ಸ್ವೀಕೃತವಾದ ಅರ್ಜಿಗಳನ್ನು ಪರಿಶೀಲಿಸಿ ಸಂಬಂಧಿಸಿದ ಅಧಿಕಾರಿಗಳಿಗೆ ಅರ್ಜಿಗಳನ್ನು ಕಳುಹಿಸಿ ಅದನ್ನು ವಿಚಾರಣೆ ಮಾಡಿಸಿ ವರದಿ ಪಡೆದು ಅರ್ಜಿದಾರರಿಗೆ ಸೂಕ್ತ ಹಿಂಬರಹ ನೀಡುವುದು ಮತ್ತು ಸರ್ಕಾರಕ್ಕೆ ಮಾಹಿತಿ ಸಲ್ಲಿಸುವುದು.

**ಅಭಿಲೇಖಾಲಯ:**

ಕಾರ್ಯಾಲಯದ ಪ್ರತಿಯೊಂದು ಶಾಖೆಯಿಂದ ನಿರ್ವಹಣೆಗಾಗಿ ಕಛೇರಿ ಸಹಕಾರದಿಂದ ಬೇರೆ ಬೇರೆ ಬಾಕಿಯ ವಿಲೇಗಳ ಬೇರೆ ಬೇರೆ ವರ್ಗಗಳ ಕಾಗದ ಪತ್ರಗಳ ವ್ಯವಹಾರವನ್ನು ಎಷ್ಟು ಕಾಲ ಕಾಯ್ದಿರಿಸಬೇಕೆಂಬುದನ್ನು ತಿಳಿದು ಈ ಕೆಳ ಕಾಣಿಸಿದ ಪ್ರಕಾರ ವಿಭಜನೆ ಮಾಡಲಾಗುವುದು ಹಾಗೂ ಶ್ರೇಣಿವಾರು ಹೊಂದಿಸಿ ಇಡಲಾಗುವುದು.

ಎ. ಡಿಸ್–ಅನಿರ್ದಿಷ್ಟ
ಬಿ. ಡಿಸ್ ಮೂವತ್ತು ವರ್ಷ
ಸಿ. ಡಿಸ್ ಹತ್ತು ವರ್ಷ
ಡಿ. ಡಿಸ್ ಐದು ವರ್ಷ
ಇ. ಡಿಸ್ ಒಂದು ವರ್ಷ

ಮೇಲೆ ಕಾಣಿಸಿದ ವಿಲೇವಾರಿಗಳ ಅವಧಿ ಮುಗಿದ ನಂತರ ಕಛೇರಿಗಯ ಮುಖ್ಯಸ್ಥರ ಆದೇಶವನ್ನು ಪಡೆದು ಎ ಮತ್ತು ಬಿ ಡಿಸ್‌ಗಳಲ್ಲಿನ ವಹಿಗಳನ್ನು ಹೊರತು ಪಡಿಸಿ, ನಾಶಗೊಳಿಸಲಾಗುವುದು.

ಕಾರ್ಯಾಲಯ ಪೀಠೋಪಕರಣ ಕಾರ್ಯ ನಿರ್ವಾಹಣೆ ಯಂತ್ರ ಸಾಮಾಗ್ರಿಗಳ ಖರೀದಿ ಮತ್ತು ದುರಸ್ತಿ ಕಾರ್ಯಾಲಯದ ವ್ಯವಹಾರಕ್ಕೆ ಅಗತ್ಯವಿರುವ ಲೇಖನ ಸಾಮಗ್ರಿ ಖರೀದಿ ಮತ್ತು ವಿತರಣೆ ಕಛೇರಿಯ ಸುವ್ಯವಸ್ಥೆ, ವಿದ್ಯುದೀಕರಣ ನಿರ್ವಹಣೆ, ವಿವಿಧ ಕಾಯ್ದೆ ಅಡಿ ಇರುವ ಎಲ್ಲಾ ಪುಸ್ತಕಗಳನ್ನು ಸುಸ್ಥಿತಿಯಲ್ಲಿ ಇಡುವುದು ಮತ್ತು ಸಂಬಂಧ ಪಟ್ಟ ವಿಷಯ ನಿರ್ವಾಹಕರು ಕಡತ ಬೇಕೆಂದು ಕೋರಿಕೆ ಚೀಟಿ ಸಲ್ಲಿಸಿದಾಗ ಸಂಬಂಧಪಟ್ಟ ಕಡತವನ್ನು ನೀಡುವುದು, ಅಲ್ಲದೇಸಾರ್ವಜನಿಕರು ಕೋರುವ ದಾಖಲೆಗಳನ್ನು ನಿಯಮಾನುಸಾರ ನೀಡಲಾಗಿರುತ್ತದೆ.

**ಸಂಕೀರ್ಣ:**

ಸಾಮಾಜಿಕ ಭದ್ರತಾ ಯೋಜನೆ ಅಡಿಯಲ್ಲಿ ಬರುವ ಫಲಾನುಭವಿಗಳಿಗೆ ಅನುದಾನ ಬಿಡುಗಡೆ, ಸ್ವಾತಂತ್ರ್ಯ ಯೋಧರಿಗೆ ಕೇಂದ್ರ ಮತ್ತು ರಾಜ್ಯ ಗೌರವಧನ ಮಂಜೂರಿ, ವೃದ್ಧಾಪ್ಯ ವೇತನ, ಅಂಗವಿಕಲ ವೇತನ, ವಿಧವಾ ವೇತನ ಹಾಗೂ ಬುದ್ಧಿ ಮಾಂಧ್ಯ ವೇತನದಾರರಿಗೆ ಮಾಸಾಶನ ನಿರ್ವಹಣೆ ಮಾಡುತ್ತಿದ್ದು, ಸರ್ಕಾರಕ್ಕೆ ಸೂಕ್ತ ಪರಿಶೀಲನಾ ಪ್ರಸ್ತಾವನೆಗಳನ್ನು ಸಲ್ಲಿಸಿ, ಗೌರವಧವನ್ನು ಜಾರಿಗೊಳಿಸುವಲ್ಲಿ ಕ್ರಮ ಜರುಗಿಸಲಾಗುತ್ತಿದೆ ಹಾಗೂ ಜಾತಿ ಮತ್ತು ಆದಾಯ ಧೃಢೀಕರಣ ಪತ್ರಗಳ ನಿರ್ವಹಣೆ ಮತ್ತು ವಿತರಣೆ ಮಾಡುವುದು.

**ಸ್ವೀಕೃತಿ:–**

ಕಾರ್ಯಾಲಯಕ್ಕೆ ಸ್ವೀಕೃತಿಯಾಗುವ ಸರ್ಕಾರ, ಅಧೀನ ಕಾರ್ಯಾಲಯದ ಮತ್ತು ಸಾರ್ವಜನಿಕರಿಂದ, ಲೋಕಸಭೆ/ವಿಧಾನ ಪರಿಷತ್ ಹಾಗೂ ಸ್ಥಳೀಯ ಸಂಸ್ಥೆಯ ಸದಸ್ಯರುಗಳಿಂದ ಸ್ವೀಕೃತಿಯಾದ ಪ್ಯಾಕ್ಸ್, ತಂತಿ ಸಂದೇಶ, ಸುತ್ತೋಲೆ, ಸಾಮಾನ್ಯ ಅರ್ಜಿಗಳನ್ನು ಸಾಮಾನ್ಯ ಪುಸ್ತಕದಲ್ಲಿ ಮತ್ತು ಇತರ ಪುಸ್ತಕಗಳಲ್ಲಿ ನೊಂದಣಿ ಮಾಡಿಕೊಂಡು ಆಯಾಯ ಶಾಖೆಯ ವಿಷಯ ನಿರ್ವಾಹಕರಿಗೆ ವಿತರಣೆಯನ್ನು ಮಾಡುವುದು.

**<u>ರವಾನೆ:-</u>**

ಈ ಕಾರ್ಯಾಲಯದಿಂದ ಬಿಡುಗಡೆ ಆಗುವ ವ್ಯವಹಾರಗಳ ಪತ್ರಗಳ ಆದೇಶಗಳು ಹಾಗೂ ನೋಟಿಸುಗಳನ್ನು ರವಾನೆ ಪುಸ್ತಕದಲ್ಲಿ ನೊಂದಣಿ ಮಾಡಿಕೊಂಡು ಸಂಬಂಧಪಟ್ಟ ಕಛೇರಿ ಇತರರಿಗೆ ರವಾನೆ ಮಾಡುವುದು ಇವುಗಳಲ್ಲಿ ಕೆಲವು ಅಂಚೆ ಮೂಲಕ ಹಾಗೂ ಕೆಲವು ಸ್ಥಳೀಯವಾಗಿ ಜಾರಿ ಮಾಡುವ ಪತ್ರಗಳನ್ನು ಪ್ರತ್ಯೇಕ ವಹಿಯಲ್ಲಿ ನೊಂದಯಿಸಿ ರವಾನೆ ಮಾಡುವುದು, ಹಾಗೂ ಅಂಚೆ ಚೀಟಿಗಳ ಲೆಕ್ಕವನ್ನು ಸಹ ಇಡಲಾಗುವುದು.

**ಸಹಿ/-**
**(ಆರ್.ಕೆ.ರಾಜು)**
**ಜಿಲ್ಲಾಧಿಕಾರಿ,**
**ಬೆಂಗಳೂರು ಗ್ರಾಮಾಂತರ ಜಿಲ್ಲೆ,**

**<u>ಪ್ರತಿಗಳನ್ನು ಮಾಹಿತಿಗಾಗಿ ಸಲ್ಲಿಸಿದೆ:-</u>**

1. ಸರ್ಕಾರದ ಕಾರ್ಯದರ್ಶಿಗಳು, ಸಿ.ಅ.ಸು. ಇಲಾಖೆ (ಆಡಳಿತ ಸುಧಾರಣೆ), ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಿ.ಅ.ಸು.ಇಲಾಖೆ (ಜನಸ್ಪಂದನ)
3. ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
4. ಅಪರ ಮುಖ್ಯ ಕಾರ್ಯದರ್ಶಿ/ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
5. ಕಾರ್ಯದರ್ಶಿ, ಜಿಲ್ಲಾಡಳಿತ/ಪರಿಹಾರ/ಭೂ ಸುಧಾರಣೆ/ಮುಜರಾಯಿ, ಕಂದಾಯ ಇಲಾಖೆ.
6. ಸರ್ಕಾರದ ಕಾರ್ಯದರ್ಶಿಗಳು, ಕಂದಾಯ ಇಲಾಖೆ, ಬಹುಮಹಡಿಹಳ ಕಟ್ಟಡ, ಬೆಂಗಳೂರು.
7. ಸರ್ಕಾರದ ಜಂಟಿ/ಉಪ ಕಾರ್ಯದರ್ಶಿಗಳು, ಕಂದಾಯ ಇಲಾಖೆ, ಬೆಂಗಳೂರು.
8. ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ, ಕಂದಾಯ ಇಲಾಖೆ, ಕರ್ನಾಟಕ ಸರ್ಕಾರ ಬೆಂಗಳೂರು.
9. ಕಛೇರಿ ಪ್ರತಿ.